31 January 2026 Saturday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಜೀವನವು ಒಂದು ದೇವಸ್ಥಾನದಂತೆ, ಅಲ್ಲಿ ನಮಗೆ ಸಿಕ್ಕಿರುವ ಸದಾವಕಾಶವನ್ನು ಪ್ರಸಾದದಂತೆ ಸ್ವೀಕರಿಸಬೇಕು!

-ಸ್ನೇಹಾ ಆನಂದ್

info.varthaman@gmail.com



ವಿಶೇಷಚೇತರಿಗೆ ಪಿಎಚ್‌ಡಿವರೆಗೆ ಶಿಕ್ಷಣ: ಡಾ.ಬಿ.ಸುರೇಶ್ ಭರವಸೆ — ಪುಟ ಸಂ. 2



ಕುಷ್ಠರೋಗ ಮುಕ್ತ ಜಿಲ್ಲೆಯಾಗಲು ಸಾರ್ವಜನಿಕರ ಸಹಕಾರ ಅಗತ್ಯ — ಪುಟ ಸಂ. 3




ಅಕ್ರಮ ನಿವೇಶನಗಳ ವಾಪಾಸ್ ಪಡೆಯದಿದ್ದರೆ ಹೋರಾಟ: ರಘು ಕೌಟಿಲ್ಯ — ಪುಟ ಸಂ. 4

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು ಗ್ರಾಮಾಂತರ | ಕೊಡಗು | ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 88 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

## ಲೋಕಾಯಕ್ತಕ್ಕೆ ಸಿಕ್ಕಿಬಿದ್ದ ಇನ್‌ಸ್ಪೆಕ್ಟರ್ ಹೈಡ್ರಾಮಾ!



**ಬೆಂಗಳೂರು:** ಚೀಟಿ ವ್ಯವಹಾರಕ್ಕೆ ಸಂಬಂಧಿಸಿದಂತೆ 4 ಲಕ್ಷ ರೂ ಲಂಚ ಪಡೆಯುವಾಗ ಲೋಕಾಯುಕ್ತ ಅಧಿಕಾರಿಗಳಿಗೆ ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದ ಪೊಲೀಸ್ ಇನ್ಸ್ಪೆಕ್ಟರ್ ಹೈಡ್ರಾಮಾ ಮಾಡಿದ್ದಾರೆ.

ಕೆ.ಪಿ.ಅಗ್ರಹಾರ ಪೊಲೀಸ್ ಠಾಣೆ ಇನ್ಸ್ಪೆಕ್ಟರ್ ಗೋವಿಂದರಾಜು 4 ಲಕ್ಷ ರೂಪಾಯಿ ಲಂಚ ಸ್ವೀಕರಿಸುವಾಗ ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿದ್ದಾರೆ. ಚೀಟಿ ವ್ಯವಹಾರದಲ್ಲಿ ವ್ಯಕ್ತಿಯೊಬ್ಬರನ್ನು ಕೇಸ್‌ನಲ್ಲಿ ಸಿಕ್ಕಿಸುವುದಾಗಿ ಬೆದರಿಸಿ ಇನ್ಸ್ಪೆಕ್ಟರ್ ಲಂಚಕ್ಕೆ ಬೇಡಿಕೆ ಇಟ್ಟಿದ್ದರು ಎನ್ನಲಾಗಿದೆ.

ಮೈಸೂರು ರಸ್ತೆಯ ಸಿಐಆರ್ ಗ್ರೌಂಡ್ ಬಳಿ ಲಂಚ ಪಡೆಯುತ್ತಿದ್ದಾಗ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿ ವಶಕ್ಕೆ ಪಡೆದಿದ್ದಾರೆ. ಪ್ರಕರಣದಲ್ಲಿ 5 ಲಕ್ಷ ರೂಪಾಯಿ ಲಂಚಕ್ಕೆ ಬೇಡಿಕೆ ಇಡಲಾಗಿತ್ತು. ಇದರಲ್ಲಿ 1 ಲಕ್ಷ ರೂಪಾಯಿ ಈಗಾಗಲೇ ಪಡೆದುಕೊಂಡಿದ್ದರು. ಉಳಿದ 4 ಲಕ್ಷ ರೂಪಾಯಿ ಸ್ವೀಕರಿಸುವಾಗ ಆಪ್ ಆಗಿದ್ದರು.

ಚಾಮರಾಜಪೇಟೆಯ ಸಿಎಆರ್ ಮೈದಾನದಲ್ಲಿ ನಡೆದ ಈ ಆಪ್ ವೇಳೆ ಇನ್ಸ್ಪೆಕ್ಟರ್ ಗೋವಿಂದರಾಜು ಲೋಕಾಯುಕ್ತ ಪೊಲೀಸರ ವಿರುದ್ಧವೇ ಕೂಗಾಡಿ ರಂಪಾಟ ನಡೆಸಿದ್ದಾರೆ. ರಂಪಾಟ ನಡೆಸಿದ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ.

# ಶಾಸಕ ನಾಗೇಂದ್ರ-ರೆಡ್ಡಿ ವಾಕ್ಸಮರ

## ಬಳ್ಳಾರಿ ಫೈರಿಂಗ್ ಘಟನೆ ಪ್ರಸ್ತಾಪ | ಸದನದಲ್ಲಿ ಗದ್ದಲ, ಕೋಲಾಹಲ

**ಬೆಂಗಳೂರು:** ಬಳ್ಳಾರಿಯಲ್ಲಿ ನಡೆದಿದ್ದ ಫೈರಿಂಗ್ ಗಲಾಟೆಗೆ ಸಂಬಂಧಿಸಿದಂತೆ ವಿಧಾನಸಭೆಯಲ್ಲಿ ಶಾಸಕರಾದ ಬಿ.ನಾಗೇಂದ್ರ ಹಾಗೂ ಜನಾರ್ದನ ರೆಡ್ಡಿ ನಡುವೆ ಶುಕ್ರವಾರ ಪರಸ್ಪರ ಮಾತಿನ ಚಕಮಕಿ ನಡೆಯಿತು.

ಬಳ್ಳಾರಿ ಗಲಾಟೆಗೆ ನಾರಾಭರತ್ ರೆಡ್ಡಿ ಕಾರಣ. ಕಾಂಗ್ರೆಸ್ ಕಾರ್ಯಕರ್ತನ ಸಾವಿಗೆ ಗನ್‌ಮ್ಯಾನ್‌ಗಳು ಕಾರಣ, ಪ್ರಕರಣ ಸಿಬಿಐಗೆ ಕೊಡಬೇಕೆಂದು ಜನಾರ್ದನ ರೆಡ್ಡಿ ಸದನದಲ್ಲಿ ಒತ್ತಾಯಿಸಿದರು. ಇದಕ್ಕೆ, ಶಾಸಕ ಬಿ.ನಾಗೇಂದ್ರ ಮಾತನಾಡಿ, ಜನಾರ್ದನ ರೆಡ್ಡಿಯವರು ಸದನಕ್ಕೆ ಸುಳ್ಳು ಮಾಹಿತಿ ಕೊಟ್ಟಿದ್ದಾರೆ. ಸದನದ ದಾರಿ ತಪ್ಪಿಸಿದ್ದಾರೆ ಎಂದು ಆರೋಪಿಸಿ ಪ್ರಕರಣದ ವಿವರಣೆ ಕೊಡಲು ಮುಂದಾದರು.

ಈ ಸಂದರ್ಭದಲ್ಲಿ ಜನಾರ್ದನ ರೆಡ್ಡಿ ಹಾಗೂ ಬಿ.ನಾಗೇಂದ್ರ ನಡುವೆ ತೀವ್ರ ವಾಕ್ಸಮರ ನಡೆಯಿತು. ಸದನ ಗದ್ದಲ, ಕೋಲಾಹಲದಲ್ಲಿ ಮುಳುಗಿತ್ತು. ಮೊದಲು ಮಾತಾಡಿದ ಬಿ.ನಾಗೇಂದ್ರ, ರೆಡ್ಡಿ ಮನೆ ಮುಂದೆ ಗಲಾಟೆ ಆದಾಗ ಬಿಜೆಪಿ ಕಾರ್ಯಕರ್ತರು ವಾಲ್ಮೀಕಿ ಫೋಟೋ ಇದ್ದ ಬ್ಯಾನರ್ ಕೆಳಕ್ಕೆ ಹಾಕಿ ಅವಮಾನ ಮಾಡಿದರು. ಗಲಾಟೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತನ ಸಾವಾಯಿತು. ಯಾರು ಕಾರಣ ಅಂತ ತನಿಖೆಯಲ್ಲಿ ಬಹಿರಂಗ ಆಗುತ್ತದೆ. ಆದರೆ, ಬಳ್ಳಾರಿಯಲ್ಲಿ ನಡೆದ ಸಮಾವೇಶದಲ್ಲಿ ಶ್ರೀರಾಮುಲು ಅವರು, ಏ ಭರತ್ ರೆಡ್ಡಿ, ಏಯ್ ಕಾಂಗ್ರೆಸ್ ಕಾರ್ಯಕರ್ತರೇ ಮುಂದೆ ನಮ್ಮ ಸರ್ಕಾರ ಅಧಿಕಾರಕ್ಕೆ ಬರುತ್ತದೆ. ನೀವೆಲ್ಲಿದ್ರೂ, ಪಾತಾಳದಲ್ಲಿದ್ರೂ ಹುಡುಕಿ ಒದ್ದು ಒಡಿಸ್ತೇವೆ ಅಂದರು ಎಂದು ಆರೋಪಿಸಿದರು. ಜನಾರ್ದನ ರೆಡ್ಡಿಯವರು ಸುಳ್ಳು ಹೇಳಿ ಸದನಕ್ಕೆ ತಪ್ಪು ಮಾಹಿತಿ ಕೊಟ್ಟಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಇದಕ್ಕೆ ಮಧ್ಯೆ ಎದ್ದು ಜನಾರ್ದನ ರೆಡ್ಡಿ ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ನಾಗೇಂದ್ರ ವಿರುದ್ಧ ರೆಡ್ಡಿ ವಾಗ್ದಾಳಿ ನಡೆಸಿದರು. ನಿಯಂತ್ರಣ ಮಾಡಲು ಸ್ಪೀಕರ್ ಯು.ಟಿ ಖಾದರ್ ಹರಸಾಹಸ ಪಡುವಂತಾಯಿತು.



### ರಾಮುಲು ಎದುರು ನೀನು ನಾಯಕನಾಗಲು ಸಾಧ್ಯವಿಲ್ಲ

**ಬೆಂಗಳೂರು:** ವಾಲ್ಮೀಕಿ ಸಮಾಜದಲ್ಲಿ ರಾಮುಲು ಎದುರು ನೀನು ನಾಯಕನಾಗಲು ಸಾಧ್ಯವಿಲ್ಲ. ವಾಲ್ಮೀಕಿ ನಿಗಮದ ಹಣ ಲೂಟಿ ಮಾಡಿರೋ ನಿನಗೆ ವಾಲ್ಮೀಕಿ ಬಗ್ಗೆ ಮಾತಾಡೋ ನೈತಿಕತೆ ಇಲ್ಲ. ನೂರು ಜನ್ಮ ಹುಟ್ಟಿ ಬಂದರು ನೀನು ನಾಯಕನಾಗಲು ಸಾಧ್ಯವಿಲ್ಲ ಎಂದು ಮಾಜಿ ಸಚಿವ ನಾಗೇಂದ್ರ ವಿರುದ್ಧ ಜನಾರ್ದನ ರೆಡ್ಡಿ ಗುಡುಗಿದರು.

ರೆಡ್ಡಿಗೆ ತಿರುಗೇಟು ನೀಡಿದ ಬಿ.ನಾಗೇಂದ್ರ ವಾಲ್ಮೀಕಿ ನಮ್ಮ ಸಮಾಜ, ನಮ್ಮ ಜನರು ನನ್ನ ಜೊತೆಗಿದ್ದಾರೆ ಎಂದು ಹೇಳಿ ರೊಚ್ಚಿಗೆದ್ದು ಮೇಜು ಕುಟ್ಟಿ ಸವಾಲು ಸ್ವೀಕರಿಸಿ ತಿರುಗೇಟು ನೀಡಿದರು. ಈ ವೇಳೆ, ಸದನದಲ್ಲಿ ವಾಕ್ಸಮರ ಜೋರಾಗಿ, ಪರಿಸ್ಥಿತಿ ನಿಯಂತ್ರಿಸಲು ಸ್ಪೀಕರ್ ಹರಸಾಹಸ ಪಡಬೇಕಾಯಿತು. ಇಷ್ಟಕ್ಕೆ ಸುಮ್ಮನಾಗದ ಜನಾರ್ದನ ರೆಡ್ಡಿ, ನಿಮ್ಮ ಕಾರ್ಯಕರ್ತ ಸಾವನ್ನಪ್ಪಿದ್ದಾರೆ. ಆದರೆ ನೀನು ಅದನ್ನೇ ಸಮರ್ಥನೆ ಮಾಡಿಕೊಳ್ಳುತ್ತಿಯಾ ಎಂದರೆ ಹೇಗೆ? ಎಂದು ನಾಗೇಂದ್ರ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

# ಜಿಎಸ್‌ಟಿ ಸಭೆಗೆ ಸಿಎಂ ಗೈರು: ಪರಿಷತ್‌ನಲ್ಲಿ ಕಾವೇರಿದ ಚರ್ಚೆ

**ಸಿದ್ದರಾಮಯ್ಯ ವಿರುದ್ಧ ಎಂಎಲ್ಸಿ ಎಚ್.ವಿಶ್ವನಾಥ್ ವಾಗ್ದಾಳಿ**



**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜಿಎಸ್‌ಟಿ ಕೌನ್ಸಿಲ್ ಸಭೆಯಲ್ಲಿ ಭಾಗವಹಿಸದೆ ನಿರ್ಲಕ್ಷ ಮಾಡಿದ್ದಾರೆಂದು ವಿಧಾನ ಪರಿಷತ್‌ನಲ್ಲಿ ಬಿಜೆಪಿ ಸದಸ್ಯ ಎಚ್.ವಿಶ್ವನಾಥ್ ವಾಗ್ದಾಳಿ ನಡೆಸಿದರು.

ವಿಧಾನ ಪರಿಷತ್‌ನಲ್ಲಿ ಶುಕ್ರವಾರ ರಾಜ್ಯಪಾಲರು ಭಾಷಣದ ಮೇಲೆ ಚರ್ಚೆ ಮಾಡುವ ವೇಳೆ ಕಾಂಗ್ರೆಸ್ ಸದಸ್ಯ ಐವಾನ್ ಡಿಸೋಜ ಮಾತನಾಡಿ, ಕರ್ನಾಟಕ ಅತಿ ಹೆಚ್ಚು ಜಿಎಸ್‌ಟಿ ಕೊಡುವ ರಾಜ್ಯ. ಆದರೂ ನಮ್ಮ ತೆರಿಗೆ ರಾಜ್ಯಕ್ಕೆ ಸರಿಯಾಗಿ ಹಂಚಿಕೆ ಆಗಿಲ್ಲ. ಜಿಎಸ್‌ಟಿ ಹಂಚಿಕೆ ಸಮಾನವಾಗಿ ಆಗಬೇಕು ಎಂದು ಕೇಂದ್ರ ಸರ್ಕಾರವನ್ನು ಆಗ್ರಹಿಸಿದರು.

ಐವಾನ್ ಡಿಸೋಜ ಮಾತಿಗೆ ಬಿಜೆಪಿ ಸದಸ್ಯ ಎಚ್.ವಿಶ್ವನಾಥ್ ಕಿಡಿಕಾರಿದರು. ಜಿಎಸ್‌ಟಿ ಬಗ್ಗೆ ನೀವು ರೋಷವೇಷವಾಗಿ ಮಾತಾಡಬೇಡಿ. ಸಿಎಂ ಹಣಕಾಸು ಸಚಿವರಾಗಿದ್ದಾರೆ. ಆದರೂ ಏಕೆ ಅವರು ಜಿಎಸ್‌ಟಿಮೀಟಿಂಗ್‌ಗೆ ಹೋಗಿಲ್ಲ ಎಂದು ಪ್ರಶ್ನಿಸಿದರು. ಸಿದ್ದರಾಮಯ್ಯ ಎಷ್ಟು ಮೀಟಿಂಗ್‌ಗೆ ಹೋಗಿದ್ದಾರೆ. ಸಿಎಂ ಜಿಎಸ್‌ಟಿ ಮೀಟಿಂಗ್‌ಗೆ ಹೋಗಿ ಅಲ್ಲಿ ಅನ್ಯಾಯದ ಬಗ್ಗೆ ಮಾತಾಡಬೇಕು ಹೌದಲ್ಲವೇ? ಇಲ್ಲಿ ಮಾತಾಡೋದು ಯಾಕೆ ಎಂದು ವಿಶ್ವನಾಥ್ ಕಿಡಿಕಾರಿದರು.

ಈ ವೇಳೆ ಆಡಳಿತ, ವಿಪಕ್ಷ ನಡುವೆ ವಾಕ್ಸಮರ ನಡೆಯಿತು. ವಿಶ್ವನಾಥ್ ಮಾತಿಗೆ ಪ್ರಿಯಾಂಕ್ ಖರ್ಗೆ ಉತ್ತರಿಸಿ, ಸಿಎಂ ಯಾರನ್ನು ಬೇಕಾದರೂ ಸಭೆಗೆ ಕಳಿಸಬಹುದು. ಸಿದ್ದರಾಮಯ್ಯ ಅವರು, ಕೃಷ್ಣಬೈರೇಗೌಡ ಅವರನ್ನು ನೇಮಕ ಮಾಡಿದ್ದರು. ಬಿ.ಎಸ್.ಯಡಿಯೂರಪ್ಪ ಇದ್ದಾಗ ಬೊಮ್ಮಾಯಿ ಅವರನ್ನು ಸದಸ್ಯರಾಗಿ ಮಾಡಿದ್ದರು ಎಂದು ತಿಳಿಸಿದರು.

ಸಭಾ ನಾಯಕ ಬೋಸರಾಜು ಮಾತನಾಡಿ, ಸಿಎಂ ಸಭೆಗೆ ಪುಟ 2ಕ್ಕೆ

## ಗಂಡ ಇದ್ದರೂ ಸತ್ತನೆಂದು 3 ಮದುವೆಯಾದ ಮಹಿಳೆ!

**ಬೆಂಗಳೂರು:** ಮಹಿಳೆಯೊಬ್ಬಳು ಗಂಡ ಬದುಕಿದ್ದರೂ ಸತ್ತು ಹೋಗಿದ್ದಾನೆ ಎಂದು ಮತ್ತೆರೆಡು ಮದುವೆಯಾಗಿರುವ ಘಟನೆ ದೊಡ್ಡಬಳ್ಳಾಪುರದಲ್ಲಿ ನಡೆದಿದೆ. ದೊಡ್ಡಬಳ್ಳಾಪುರದ ಮಹಿಳೆ 11 ವರ್ಷದ ಹಿಂದೆ ವೀರೇಗೌಡ ಎಂಬವರನ್ನು ಪ್ರೀತಿಸಿ ಮದುವೆ ಆಗಿದ್ದಳು. ಎರಡು ಮಕ್ಕಳಾದ ಬಳಿಕ ನಾಪತ್ತೆ ಆಗಿದ್ದಳು.

ಗಂಡ ಸತ್ತು ಹೋಗಿದ್ದಾನೆ ಎಂದು ಹೇಳಿ ಒಂದೂವರೆ ವರ್ಷದ ಹಿಂದೆ ಡೆಲಿವರಿ ಬಾಯ್ ಆಗಿದ್ದ ಅನಂತ್ ಎಂಬವರನ್ನು ಮದುವೆಯಾಗಿದ್ದಳು. ಅವರ ಬಳಿ 24 ಲಕ್ಷ ರೂ. ಹಣ ಕಿತ್ತುಕೊಂಡು ಈಗ ಕನಕಪುರ ಮೂಲದ ಪುಟ 2ಕ್ಕೆ

# ಸಿಎಂ, ಡಿಸಿಎಂ 'ಸ್ಕ್ಯಾಮ್ ಲಾರ್ಡ್'

## ಮಾನಹಾನಿಕರ ಪೋಸ್ಟ್: ಬಿಜೆಪಿ ವಿರುದ್ಧ ಕಾಂಗ್ರೆಸ್ ದೂರು




**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ಹಲವು ಸಚಿವರನ್ನು ಗುರಿಯಾಗಿಸಿ ಬಿಜೆಪಿಯ 'ಎಕ್ಸ್' ಖಾತೆಯಲ್ಲಿ ಮಾನಹಾನಿಕರ ಪೋಸ್ಟ್ ಮಾಡಿದೆ. ಅವರನ್ನು ಸ್ಕ್ಯಾಮ್ ಲಾರ್ಡ್ ಎಂದು ಉಲ್ಲೇಖಿಸಿ ರಾಜ್ಯವನ್ನು ಲೂಟಿ ಮಾಡುವಲ್ಲಿ ಭಾಗಿಯಾಗಿದ್ದಾರೆ ಎಂದು ಆರೋಪಿಸಿದೆ.

ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯನ್ನು ಪ್ರತಿ ನಿಧಿಸುವ ವಕೀಲರ ತಂಡ ಬಿಜೆಪಿ ವಿರುದ್ಧ ಬೆಂಗಳೂರಿನ ಸೈಬರ್ ಕ್ರೈಮ್ ಪೊಲೀಸ್ ಠಾಣೆಯಲ್ಲಿ ದೂರು ನೀಡಿದೆ. 'ಸ್ಕ್ಯಾಮ್ ಲಾರ್ಡ್' ಎಂಬ ಶೀರ್ಷಿಕೆಯಡಿ ಪೋಸ್ಟ್‌ನಲ್ಲಿ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಮತ್ತು ಇತರ ಸಚಿವರ ಚಿತ್ರಗಳನ್ನು ಬಿಜೆಪಿ ಪ್ರಕಟಿಸಿದೆ. ಇದು ಹಗರಣಗಳ ಕಥೆಯಲ್ಲ, ಅವರ ಹಿಂದಿನವರ ಕಥೆ ಪುಟ 2ಕ್ಕೆ

# ರಾಜ್ಯದ ವಿರುದ್ಧ ಮಲತಾಯಿ ಧೋರಣೆ


## ಕೇಂದ್ರ ಬಜೆಟ್‌ನಲ್ಲಿ ಘೋಷಿಸಿದ್ದ ಅನುದಾನವನ್ನು ಇನ್ನೂ ನೀಡಿಲ್ಲ: ಡಿಕೆಶಿ ವಾಗ್ದಾಳಿ

**ಶಿವಮೊಗ್ಗ:** ಕೇಂದ್ರ ಸರ್ಕಾರದ ಬಜೆಟ್ ನಲ್ಲಿ ಕರ್ನಾಟಕಕ್ಕೆ ಯಾವಾಗಲೂ ಮಲತಾಯಿ ಧೋರಣೆ ಮಾಡಲಾಗುತ್ತಿದೆ. ಈ ಬಗ್ಗೆ ಬಿಜೆಪಿ ಸಂಸದರು, ಕೇಂದ್ರ ಸಚಿವರು ಯಾರೂ ಧ್ವನಿ ಎತ್ತಿಲ್ಲ. ಆಟಕ್ಕುಂಟು ಲೆಕ್ಕಕ್ಕೆ ಇಲ್ಲ ಎನ್ನುವಂತೆ ಕೆಲಸ ಮಾಡುತ್ತಿದ್ದಾರೆಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು, ಬಿಜೆಪಿ ಸಂಸದರ ವಿರುದ್ಧ ವಾಗ್ದಾಳಿ ನಡೆಸಿದರು.

ಶಿವಮೊಗ್ಗದಲ್ಲಿ ಮಾಧ್ಯಮಗಳ ಜೊತೆ ಶುಕ್ರವಾರ ಮಾತನಾಡಿದ ಅವರು, ಕೇಂದ್ರ ಬಜೆಟ್ ಬಗೆಗಿನ ನಿರೀಕ್ಷೆಗಳ ಬಗ್ಗೆ ಕೇಳಿದಾಗ, ಕೇಂದ್ರ ಬಜೆಟ್ ಕಳೆದ ವರ್ಷ ಕೊಟ್ಟಿದ್ದ ಮಾತನ್ನೇ ಉಳಿಸಿಕೊಂಡಿಲ್ಲ. ಭದ್ರಾ ಮೇಲ್ದಂಡೆ ಯೋಜನೆಗೆ 5,300 ಕೋಟಿ ಕೊಡುತ್ತೇನೆ ಎಂದು ಹೇಳಿ ಕೊಟ್ಟಿಲ್ಲ ಎಂದು ಟೀಕಿಸಿದರು.

ಕಾಂಗ್ರೆಸ್ ಭ್ರಷ್ಟಾಚಾರ ಎಂದು ಬಿಜೆಪಿ ಪೋಸ್ಟರ್ ಅಭಿಯಾನ ಹಾಗೂ ತಿಮ್ಮಾಪುರ ಅವರ ರಾಜಿನಾಮೆಗೆ ಪಟ್ಟು ಹಿಡಿದಿರುವ ಬಗ್ಗೆ ಕೇಳಿದಾಗ,ಬಿಜೆಪಿಯವರ ಹಗರಣಗಳನ್ನು ನಾವು ಸಹ ಸಾಕಷ್ಟು ಬಿಚ್ಚಿದ್ದೇವೆ.

ಕೋವಿಡ್ ಹಗರಣ ಸೇರಿದಂತೆ ಅನೇಕ ಆರೋಪಗಳಿವೆ. ನಾವು ಅವುಗಳನ್ನು ಬಯಲು ಮಾಡಿದ್ದೇವೆ. ಅವರು ರಾಜಕೀಯ ಮಾಡಬೇಕಲ್ಲ ಎಂದು ಮಾಡುತ್ತಿದ್ದಾರೆ. ಏನೋ ಒಂದು ಬೇಕಲ್ಲ ಅವರಿಗೆ. ಇದರ ಬಗ್ಗೆ ತನಿಖೆ ಮುಗಿಯಲಿ ಎಂದು ತಿರುಗೇಟು ನೀಡಿದರು.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಸದನದಲ್ಲಿ ಮನರೇಗಾ ವಿಚಾರವಾಗಿ ಪ್ರಸ್ತಾಪ ಮಾಡಿದ್ದು, ಇದನ್ನು ಕಾರ್ಯಕಲಾಪ ಸಲಹಾ ಸಮಿತಿ ಮುಂದಿಟ್ಟು ತೀರ್ಮಾನ ಮಾಡಬೇಕು ಎಂದು ಸಭಾಧ್ಯಕ್ಷರು ತಿಳಿಸಿದ್ದರು. ಅದರಂತೆ ಗುರುವಾರ ಇದರ ಬಗ್ಗೆ ಚರ್ಚೆಯಾಗಿದೆ. ವಿಬಿ ರಾಮ್ ಜಿ ಕಾಯ್ದೆಯನ್ನು ಏಕೆ ರದ್ದು ಮಾಡಬೇಕು ಪುಟ 2ಕ್ಕೆ

## ಐಟಿ ದಾಳಿಗೆ ಹೆದರಿ: ಕಾನ್ಫಿಡೆಂಟ್ ಅಧ್ಯಕ್ಷ ಡಾ.ಸಿ.ಜೆ.ರಾಯ್ ಆತ್ಮಹತ್ಯೆ

**ಬೆಂಗಳೂರು:** ರಿಯಲ್ ಎಸ್ಟೇಟ್ ಉದ್ಯಮಿ, ಕಾನ್ಫಿಡೆಂಟ್ ಗ್ರೂಪ್ ಕಂಪನಿಯ ಅಧ್ಯಕ್ಷ ಡಾ.ಸಿ.ಜೆ.ರಾಯ್ ಅವರು ಶುಕ್ರವಾರ ತಮ್ಮ ಕಚೇರಿಯಲ್ಲಿ ಗನ್ ನಿಂದ ಶೂಟ್ ಮಾಡಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಐಟಿ ಇಲಾಖೆ ಅಧಿಕಾರಿಗಳ ದಾಳಿಗೆ ಹೆದರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎನ್ನಲಾಗಿದೆ.



ತಮ್ಮ ಉದ್ಯಮಗಳ ಮೇಲೆ ಪದೇ ಪದೆ ಆದಾಯ ತೆರಿಗೆ ಇಲಾಖೆ ನಡೆಸುತ್ತಿದ್ದ ದಾಳಿಗೆ ಹೆದರಿ ಸಿಜೆ ರಾಯ್ ಆತ್ಮಹತ್ಯೆಗೆ ಶರಣಾಗಿದ್ದಾರೆ. ಕಾನ್ಫಿಡೆಂಟ್ ಗ್ರೂಪ್ ಕಂಪನಿಗಳ ಮೇಲೆ ಶುಕ್ರವಾರ ಸಹ ಐಟಿ ಇಲಾಖೆ ಅಧಿಕಾರಿಗಳು ದಾಳಿ ಮಾಡಿದ್ದರು. ಈ ವೇಳೆ ಅವರು ಪಿಸ್ತೂಲ್ ನಿಂದ ಶೂಟ್ ಮಾಡಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಬೆಂಗಳೂರಿನ ಆನೇಪಾಳ್ಯದಲ್ಲಿರೋ ತಮ್ಮ ಕಚೇರಿಯಲ್ಲಿ ಐಟಿ ಅಧಿಕಾರಿಗಳ ಸಮ್ಮುಖದಲ್ಲಿಯೇ ರಾಯ್ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಪಿಸ್ತೂಲ್ ನಿಂದ ಶೂಟ್ ಮಾಡಿಕೊಂಡಿದ್ದಾರೆ.

2005ರಲ್ಲಿ ಆರಂಭವಾದ ಈ ಸಂಸ್ಥೆ, 65ಕ್ಕೂ ಹೆಚ್ಚು ಐಷಾರಾಮಿ ಯೋಜನೆಗಳನ್ನು ಪೂರ್ಣಗೊಳಿಸಿದೆ. ವಸತಿ ಅಪಾರ್ಟ್ಮೆಂಟ್, ವಿಲ್ಲಾಗಳು, ವಾಣಿಜ್ಯ ಸಂಕೀರ್ಣಗಳು, ಶಿಕ್ಷಣ, ಆತಿಥ್ಯ ಮತ್ತು ಮನರಂಜನಾ ಕ್ಷೇತ್ರಗಳಲ್ಲಿ ಕಾನ್ಫಿಡೆಂಟ್ ಗ್ರೂಪ್ ಕಾರ್ಯನಿರ್ವಹಿಸುತ್ತಿದೆ.

ಕೇರಳ ಮೂಲದ ರಾವ್ ಅವರು ಕಾನ್ಫಿಡೆಂಟ್ ಗ್ರೂಪ್ ಎಂಬ ಪ್ರಮುಖ ರಿಯಲ್ ಎಸ್ಟೇಟ್ ಮತ್ತು ಮೂಲಸೌಕರ್ಯ ಅಭಿವೃದ್ಧಿ ಕಂಪನಿಯ ಸಂಸ್ಥಾಪಕರಾಗಿದ್ದರು. ಸಿಜೆ ರಾಯ್ ಅವರು ಸ್ವಿಟ್ಜರ್ಲೆಂಡ್‌ನ ಬಿಸಿನೆಸ್ ಸ್ಕೂಲ್‌ನಿಂದ ಬಿಸಿನೆಸ್ ಅಡ್ಮಿನಿಸ್ಟ್ರೇಷನ್‌ನಲ್ಲಿ ಡಾಕ್ಟರೇಟ್ ಪಡೆದಿದ್ದರು. ಕಾನ್ಫಿಡೆಂಟ್ ಗ್ರೂಪ್ ಎಂಬ ಸಂಸ್ಥೆ ಸ್ಥಾಪಿಸಿದ್ದರು. ಕೇರಳ ಮತ್ತು ಬೆಂಗಳೂರಿನಲ್ಲಿ ಪ್ರಮುಖ ಐಷಾರಾಮಿ ಯೋಜನೆಗಳನ್ನು ಪೂರ್ಣಗೊಳಿಸಿದ್ದರು. ದುಬೈ ಮಾರುಕಟ್ಟೆಗೂ ತಮ್ಮ ಕಾರ್ಯ ವಿಸ್ತರಿಸಿದ್ದರು.

## ಪೌರಾಯುಕ್ತೆಗೆ ಬೆದರಿಕೆ: ರಾಜೀವ್ ಗೌಡಗೆ ಜಾಮೀನು

**ಚಿಕ್ಕಬಳ್ಳಾಪುರ:** ಶಿಡ್ಲಘಟ್ಟದ ಪೌರಾಯುಕ್ತೆ ಅಮೃತಾ ಗೌಡ ಅವರಿಗೆ ಬೆದರಿಕೆ ಹಾಕಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜೀವ್ ಗೌಡನಿಗೆ ಜೆಎಂಎಫ್‌ಸಿ ನ್ಯಾಯಾಲಯ ಶುಕ್ರವಾರ ಜಾಮೀನು ನೀಡಿದೆ.

ರಾಜೀವ್ ಗೌಡ 2 ದಿನಗಳ ಪೊಲೀಸ್ ಕಸ್ಟಡಿ ಅಂತ್ಯವಾದ ಹಿನ್ನೆಲೆ ಚಿಕ್ಕಬಳ್ಳಾಪುರ ಪೊಲೀಸರು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದರು. ವಿಚಾರಣೆ ವೇಳೆ ನ್ಯಾಯಾಧೀಶರು ಜಾಮೀನು ಅರ್ಜಿ ಆದೇಶವನ್ನು ಕಾಯ್ದಿರಿಸಿದ್ದರು. ಇಂದು ಜಾಮೀನು ಮಂಜೂರು ಮಾಡಿ ಆದೇಶ ಹೊರಡಿಸಿದ್ದಾರೆ.



ನ್ಯಾ. ಮೊಹಮ್ಮದ್ ರೋಷನ್ ಶಾ ಪೀಠದವು 50,000 ರೂ.ಗಳ ಷರತ್ತು ಬದ್ಧ ಬಾಂಡ್ ನೀಡಿ, ಜಾಮೀನು ಮಂಜೂರು ಮಾಡಿದೆ. ಅಲ್ಲದೆ,

## ಕಾಡಾನೆ ದಾಳಿ: ಕಾಫಿ ಎಸ್ಟೇಟ್ ಕಾವಲುಗಾರ ಸಾವು




**ಕೊಡಗು:** ಕಾಡಾನೆ ದಾಳಿಗೆ ಸಿಲುಕಿ ಕಾಫಿ ಎಸ್ಟೇಟ್ ಕಾವಲುಗಾರ ಮೃತಪಟ್ಟ ಘಟನೆ ಜಿಲ್ಲೆಯ ಸಿದ್ದಾಪುರ ಸಮೀಪದ ಗೌರಿಬೆಟ್ಟ ಕಾಫಿ ತೋಟದಲ್ಲಿ ನಡೆದಿದೆ.

ಹುಂಡಿ ಗ್ರಾಮದ ಅಬ್ದುಲ್ ಲತೀಫ್ (70) ಮೃತ ವ್ಯಕ್ತಿ. ಅವರು ಊಟಕ್ಕೆ ತೆರಳುತ್ತಿದ್ದ ಸಂದರ್ಭದಲ್ಲಿ ಕಾಫಿ ಪುಟ 2ಕ್ಕೆ

## ರೈತನ ಮೇಲೆ ಚಿರತೆ ದಾಳಿ

**ಗುಂಡ್ಲುಪೇಟೆ:** ವ್ಯಕ್ತಿಯೊಬ್ಬರ ಮೇಲೆ ಚಿರತೆ ದಾಳಿ ನಡೆಸಿದ ಘಟನೆ ಗುಂಡ್ಲುಪೇಟೆ ತಾಲೂಕಿನ ಬೊಮ್ಮನಹಳ್ಳಿ ಗ್ರಾಮದಲ್ಲಿ ನಡೆದಿದೆ. ಗ್ರಾಮದ ರಾಜಶೇಖರ ಮೂರ್ತಿ ಅವರು ಚಿರತೆ ದಾಳಿಯಿಂದ ಗಾಯಗೊಂಡಿದ್ದಾರೆ. ಅದೃಷ್ಟವಶಾತ್ ಪ್ರಾಣಾಪಾಯ ಸಂಭವಿಸಿಲ್ಲ. ಹೆಚ್ಚಿನ ಚಿಕಿತ್ಸೆಗಾಗಿ ಚಾಮರಾಜನಗರ ಜಿಲ್ಲಾಸ್ಪತ್ರೆಗೆ ಸೇರಿಸಲಾಗಿದೆ.



ಚಿರತೆ ದಾಳಿಯಿಂದ ರಾಜಶೇಖರ ಮೂರ್ತಿ ಅವರ ಮುಖ ಹಾಗೂ ಕತ್ತಿನ ಭಾಗಕ್ಕೆ ಪರಚಿದ ಗಾಯಗಳಾಗಿವೆ. ಆದರೂ ಧೈರ್ಯದಿಂದ ಪ್ರತಿ ರೋಧ ತೋರಿ ಅವರು ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಗುರುವಾರ ರಾತ್ರಿ 10.30ರ ಸಮಯದಲ್ಲಿ ಜಮೀನಿನಲ್ಲಿ ಅರಿಶಿನ ಬೇಯಿಸಿ ಒಣಗಲು ಹಾಕಿರುವುದನ್ನು ನೋಡಲು ಬೈಕ್ ಮೇಲೆ ತೆರಳುವಾಗ ಚಿರತೆ ದಾಳಿ ನಡೆಸಿದೆ. ಬೈಕ್‌ನಿಂದ ಬಿದ್ದು ಹಾರನ್ ಒತ್ತಿ ಹಿಡಿದಿದ್ದು ಶಬ್ದಕ್ಕೆ ಚಿರತೆ ಓಡಿ ಹೋಗಿದೆ ಎಂದು ಗ್ರಾಮಸ್ಥರು ಪುಟ 2ಕ್ಕೆ

## ಬಿಜೆಪಿ ಮಾಜಿ ಎಂಎಲ್ಸಿ ಅಶ್ವಥ್ ನಾರಾಯಣ್‌ಗೆ 1 ವರ್ಷ ಜೈಲು




**ಬೆಂಗಳೂರು:** ಭೂಕಬಳಿಕೆ ಪ್ರಕರಣದಲ್ಲಿ ವಿಧಾನ ಪರಿಷತ್ ಮಾಜಿ ಬಿಜೆಪಿ ಸದಸ್ಯ ಅಶ್ವಥ್ ನಾರಾಯಣ್‌ಗೆ 1 ವರ್ಷ ಜೈಲು ಶಿಕ್ಷೆ ವಿಧಿಸಿ ಕೋರ್ಟ್ ಆದೇಶ ನೀಡಿದೆ.

ಬೆಂಗಳೂರಿನಲ್ಲಿ ಅಕ್ರಮ ಲೇಔಟ್ ಮಾಡಿದ್ದ ಆರೋಪ ಮಾಜಿ ಎಂಎಲ್‌ಸಿ ಅಶ್ವಥ್ ನಾರಾಯಣ್ ಮೇಲಿತ್ತು. 1 ವರ್ಷ ಜೈಲು ಶಿಕ್ಷೆ ಹಾಗೂ 10 ಸಾವಿರ ರೂ. ದಂಡ ವಿಧಿಸಿ ಕೋರ್ಟ್ ತೀರ್ಪು ನೀಡಿದೆ. ಕೃಷಿ ಜಮೀನನ್ನು ಭೂ ಪರಿವರ್ತನೆ ಮಾಡದೆ ಖಾಲಿ ಪುಟ 2ಕ್ಕೆ

# ಭಾಷ್ಯಂ ಸ್ವಾಮೀಜಿ ಸೇರಿದಂತೆ 8 ಗಣ್ಯರಿಗೆ ಮುಕ್ತ ವಿಶ್ವವಿದ್ಯಾಲಯ ಗೌರವ ಡಾಕ್ಟರೇಟ್

## ಇಂದು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಘಟಿಕೋತ್ಸವ

**ಮೈಸೂರು:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಘಟಿಕೋತ್ಸವದ ಅಂಗವಾಗಿ 8 ಗಣ್ಯರಿಗೆ ಗೌರವ ಡಾಕ್ಟರೇಟ್ ನೀಡಲಾಗುತ್ತದೆ ಎಂದು ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ ತಿಳಿಸಿದರು.



ಕಳೆದ 2013–14, 2014–15 ಸಾಲಿನಲ್ಲಿ ಘಟಿಕೋತ್ಸವ ನಡೆದಿರಲಿಲ್ಲ. ಈ ವರ್ಷದ 2023–24ನೇ ಸಾಲಿಗೂ ಸೇರಿದಂತೆ 8 ಜನರಿಗೆ ಗೌರವ ಡಾಕ್ಟರೇಟ್ ನೀಡಲಾಗುತ್ತದೆ. ಬೆಂಗಳೂರಿನ ಹರ್ಷ ಸಂಸ್ಥೆಯ ಎಸ್.ಶಿವಕುಮಾರ್, ತುಮಕೂರಿನ ಕಿಡ್ಸ್ ಇಂಟರ್‌ನ್ಯಾಷನಲ್ ಸ್ಕೂಲ್ ಸಂಸ್ಥಾಪಕ ಸತೀಶ್ ಕುಮಾರ್ ಡಿ.ಕೆಗ್ಗೆರೆ, ಪ್ರಜಾಪಿತ ಬ್ರಹ್ಮಕುಮಾರಿ ಐಶ್ವರ್ಯ ವಿಶ್ವವಿದ್ಯಾಲಯದ ಲಕ್ಷ್ಮೀಜಿ, ಮೈಸೂರಿನ ಉದ್ಯಮಿ ಕೆ.ಬಿ. ಲಿಂಗರಾಜು, ಪುಟ 2ಕ್ಕೆ



### 68 ಮಂದಿಗೆ ಪಿಎಚ್‌ಡಿ, 65 ಪದಕ

**ಘಟಿಕೋತ್ಸವದಲ್ಲಿ 23 ಮಹಿಳಾ ಹಾಗೂ 45 ಪುರುಷ ಅಭ್ಯರ್ಥಿಗಳನ್ನು ಸೇರಿ 68 ವಿದ್ಯಾರ್ಥಿಗಳಿಗೆ ಪಿಎಚ್‌ಡಿ ಪದವಿ ಪ್ರದಾನ ಮಾಡಲಾಗುವುದು. 65 ವಿದ್ಯಾರ್ಥಿಗಳಿಗೆ ಚಿನ್ನದ ಪದಕ ಮತ್ತು 62 ವಿದ್ಯಾರ್ಥಿಗಳಿಗೆ ನಗದು ಬಹುಮಾನ ನೀಡಲಾಗುವುದು. 2013–14 ಮತ್ತು 2014–15ನೇ ಸಾಲಿನಲ್ಲಿ ಒಟ್ಟು 64,102** ಪುಟ 2ಕ್ಕೆ

### 41206 ವಿದ್ಯಾರ್ಥಿಗಳಿಗೆ ಪದವಿ

**ಮೈಸೂರು:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ 21ನೇ ಘಟಿಕೋತ್ಸವವನ್ನು ಜ.31ರಂದು ಆಯೋಜಿಸಲಾಗಿದೆ. 41, 206 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಗುವುದು ಎಂದು ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ ತಿಳಿಸಿದರು.

ನಗರದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಶ್ವವಿದ್ಯಾಲಯದ ಧನ ಸಹಾಯ ಆಯೋಗದ ಮಾನ್ಯತೆ ರದ್ದಾಗಿದ್ದ ಕಾರಣಕ್ಕೆ ಬಾಕಿ ಉಳಿದುಕೊಂಡಿದ್ದ 2013–14, 2014–15ನೇ ಸಾಲಿನ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲು ಸಾಧ್ಯವಾಗಿರಲಿಲ್ಲ. ಯುಜಿಸಿ ಮಾನ್ಯತೆ ದೊರಕಿದ ಹಿನ್ನೆಲೆಯಲ್ಲಿ 2023–24ನೇ ಶೈಕ್ಷಣಿಕ ವರ್ಷವನ್ನೂ ಸೇರಿಸಿ ಮೂರು ಸಾಲಿನ ಘಟಿಕೋತ್ಸವವನ್ನು ಒಟ್ಟಿಗೆ ಪುಟ 2ಕ್ಕೆ

## ವರನಿಗೆ ದುಷ್ಕರ್ಮಿಗಳಿಂದ ಚಾಕು ಇರಿತ ಪ್ರಕರಣ: ಮದುವೆ ಸ್ಥಗಿತ

**ಚಾಮರಾಜನಗರ:** ವಿವಾಹಕ್ಕೆ ಕಾರಿನಲ್ಲಿ ತೆರಳುತ್ತಿದ್ದ ವರನಿಗೆ ಚಾಕು ಇರಿದಿದ್ದ ಪ್ರಕರಣದಲ್ಲಿ ಶುಕ್ರವಾರ ನಡೆಯಬೇಕಿದ್ದ ಮದುವೆ ಸ್ಥಗಿತಗೊಂಡಿದೆ.

ಕೊಳ್ಳೇಗಾಲ ತಾಲೂಕಿನ ಕುಣಗಳ್ಳಿ ಎಲ್.ರವೀಶ್ (34) ಗುರುವಾರ ಚಾಕು ಇರಿತಕ್ಕೊಳಗಾಗಿದ್ದರು. ಪ್ರಾಣಾಪಾಯದಿಂದ ಪಾರಾದ ಮದುಮಗನನ್ನು ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಕೊಳ್ಳೇಗಾಲ ತಾಲೂಕಿನ ಹೊಸ ಅಣಗಳ್ಳಿ ಗ್ರಾಮದ ಯುವತಿಯೊಬ್ಬಳ ಜೊತೆ ಜ.29, 30ರಂದು ವಿವಾಹ ನಿಶ್ಚಯವಾಗಿತ್ತು. ಕೊಳ್ಳೇಗಾಲದ ವೆಂಕಟೇಶ್ವರ ಮಹಲ್‌ನಲ್ಲಿ ಆರತಕ್ಷತೆ ಇತ್ತು.

ಗ್ರಾಮದಿಂದ ಕಾರಿನಲ್ಲಿ ಕುಟುಂಬ ಸದಸ್ಯರೊಂದಿಗೆ ತೆರಳುವಾಗ ಕೊಳ್ಳೇಗಾಲದ ಬಳಿ ದುಷ್ಕರ್ಮಿಗಳು ವರನಿದ್ದ ಕಾರನ್ನು ಹಿಂಬಾಲಿಸಿ ವರನಿಗೆ ಚಾಕುವಿನಿಂದ ಇರಿಯಲು ಯತ್ನಿಸಿದ್ದರು. ಇದರಿಂದ ಎಡಗೈ ತೋಳಿಗೆ ಚಾಕು ಇರಿದು ರಕ್ತಸ್ರಾವವಾಗಿ ಆಸ್ಪತ್ರೆಗೆ ದಾಖಲಾಗಿದ್ದರು.



ಈ ಬಗ್ಗೆ ರವೀಶ್ ಮಾಧ್ಯಮದವರ ಜೊತೆ ಮಾತನಾಡಿ, 6 ತಿಂಗಳ ಹಿಂದೆ ಹೊಸಅಣಗಳ್ಳಿ ಗ್ರಾಮದ ಯುವತಿ ಜೊತೆ ನಿಶ್ಚಿತಾರ್ಥ ಆಗಿತ್ತು. ಜನವರಿ 30ರಂದು ಮದುವೆ ಇರುವುದರಿಂದ ಕಾರಿನಲ್ಲಿ ಕಲ್ಯಾಣ ಮಂಟಪಕ್ಕೆ ತೆರಳುವಾಗ ಕಾರಿನಲ್ಲಿ ಬಂದವರು ನನಗೆ ಚಾಕುವಿನಿಂದ ಹಲ್ಲೆ ಮಾಡಿದ್ದಾರೆ. ಕೆಲವು ದಿನಗಳ ಪುಟ 2ಕ್ಕೆ

## ಮೊದಲ ಪುಟದಿಂದ

### ಸಿಎಂ, ಡಿಸಿಎಂ 'ಸ್ಕ್ಯಾಮ್ ಲಾರ್ಡ್'

ಎಂಬ ಶೀರ್ಷಿಕೆ ನೀಡಲಾಗಿದೆ. ಇದು ಕರ್ನಾಟಕವನ್ನು ಹಗಲಿರುಳು ಲೂಟಿ ಮಾಡುತ್ತಿರುವ ಕಾಂಗ್ರೆಸ್ ಸರ್ಕಾರದ ಹಗರಣ ಸಾಮ್ರಾಜ್ಯದ ನಿಜವಾದ ಕಥೆ ಎಂದು ಬಿಜೆಪಿ ಟೀಕಿಸಿದೆ.

ಬಿಜೆಪಿ ಲೂಟಿ ಮತ್ತು ಸ್ಕ್ಯಾಮ್ ಎಂಬ ಪದಗಳನ್ನು ಪದೇ ಪದೇ ಬಳಸುವ ಮೂಲಕ ಸಾರ್ವಜನಿಕರಲ್ಲಿ ಗೊಂದಲವನ್ನು ಸೃಷ್ಟಿಸಲು ಪ್ರಯತ್ನಿಸುತ್ತಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ. ಇದು ಕೇವಲ ರಾಜಕೀಯ ಟೀಕೆಯಲ್ಲ, ಸಾಂವಿಧಾನಿಕ ಹುದ್ದೆಗಳನ್ನು ಹೊಂದಿರುವವರ ವ್ಯಕ್ತಿತ್ವವನ್ನು ಅವಹೇಳನ ಮಾಡುವ ವ್ಯವಸ್ಥಿತ ಪಿತೂರಿ. ಸಮಾಜದ ಶಾಂತಿಯನ್ನು ಕದಡುವ ಇಂತಹ ಪೋಸ್ಟ್‌ಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ದೂರುದಾರರು ಒತ್ತಾಯಿಸಿದ್ದಾರೆ.

### ಪರಿಷತ್‌ನಲ್ಲಿ ಕಾವೇರಿದ ಚರ್ಚೆ

ಹೋಗಿಲ್ಲದಿದ್ದರೂ, ಸಭೆಗೆ ಹೋಗಿದ್ದ ಸಚಿವರು ತಮ್ಮ ವಾದ ಮಂಡನೆ ಮಾಡಿದ್ದಾರೆ. ಹಣಕಾಸು ಸಚಿವರನ್ನ ಭೇಟಿ ಯಾಗಿ ಮನವಿ ಮಾಡಿದ್ದಾರೆ. ಆದರೆ ಸಿಎಂ ಮಾತಿಗೆ ಬೆಲೆ ಕೊಟ್ಟಿಲ್ಲ ಎಂದರು. ಬೋಸರಾಜು ಅವರಿಗೆ ನೀವು ವಿತಂಡವಾದ ಮಾಡಬೇಡಿ ಎಂದು ಮತ್ತೆ ವಿಶ್ವನಾಥ್ ಕಿಡಿಕಾರಿದರು.

### 3 ಮದುವೆಯಾದ ಮಹಿಳೆ!

ಮತ್ತೊಬ್ಬನ ಜೊತೆ ಮದುವೆಯಾಗಿದ್ದಾಳೆ ಎಂದು ದೂರು ನೀಡಲಾಗಿದೆ. ಮೋಸ ಹೋಗಿರುವ ಮೊದಲ ಹಾಗೂ ಎರಡನೇ ಗಂಡ ಸೇರಿ ಮಹಿಳೆ ವಿರುದ್ಧ ದೊಡ್ಡಬೆಳವಂಗಲ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

### 68 ಮಂದಿಗೆ ಪಿಎಚ್‌ಡಿ, 65 ಪದಕ

ವಿದ್ಯಾರ್ಥಿಗಳು ಪರೀ ಕ್ಷೆಗೆ ಹಾಜರಾಗಿದ್ದರು. ಈ ಪೈಕಿ 30,515 ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದು, ಶೇ.47.60ರಷ್ಟು ಫಲಿತಾಂಶ ಬಂದಿತ್ತು. ಮಾನವಿಕ ವಿಷಯಗಳಲ್ಲಿ 6,112 ಸ್ನಾತಕೋತ್ತರ ಪದವಿ, ಸಮಾಜ ವಿಜ್ಞಾನ ವಿಷಯಗಳಲ್ಲಿ 10,671 ಸ್ನಾತಕೋತ್ತರ ಪದವಿ, ಶಿಕ್ಷಣಶಾಸ್ತ್ರದಲ್ಲಿ 1072 ಸ್ನಾತಕ ಪದವಿ, ವಾಣಿಜ್ಯಶಾಸ್ತ್ರ ವಿಷಯಗಳಲ್ಲಿ 8,411 ಸ್ನಾತಕ ಮತ್ತು ಸ್ನಾತಕೋತ್ತರ ಪದವಿ, ನಿರ್ವಹಣಶಾಸ್ತ್ರ ವಿಷಯಗಳಲ್ಲಿ 358 ಸ್ನಾತಕೋತ್ತರ ಪದವಿ, ವಿಜ್ಞಾನ, ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ವಿಷಯಗಳಲ್ಲಿ 963 ಸ್ನಾತಕ ಮತ್ತು ಸ್ನಾತಕೋತ್ತರ ಪದವಿಗಳನ್ನು ಪ್ರದಾನ ಮಾಡಲಾಗುವುದು. ಇನ್ನು 2023–24ನೇ ಸಾಲಿನಲ್ಲಿ ಮಾನವಿಕ ವಿಷಯಗಳಲ್ಲಿ 2814 ಸ್ನಾತಕ ಹಾಗೂ ಸ್ನಾತಕೋತ್ತರ ಪದವಿ, ಸಮಾಜ ವಿಜ್ಞಾನ ವಿಷಯಗಳಲ್ಲಿ 2822 ಸ್ನಾತಕೋತ್ತರ ಪದವಿ, ಶಿಕ್ಷಣಶಾಸ್ತ್ರದಲ್ಲಿ 473 ಸ್ನಾತಕ ಪದವಿ, ವಾಣಿಜ್ಯಶಾಸ್ತ್ರದಲ್ಲಿ 1,482 ಸ್ನಾತಕ ಮತ್ತು ಸ್ನಾತಕೋತ್ತರ ಪದವಿ, ನಿರ್ವಹಣಶಾಸ್ತ್ರ ವಿಷಯಗಳಲ್ಲಿ 810 ಸ್ನಾತಕೋತ್ತರ ಪದವಿ, ವಿಜ್ಞಾನ, ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ವಿಷಯಗಳಲ್ಲಿ 2222 ಸ್ನಾತಕ ಮತ್ತು ಸ್ನಾತಕೋತ್ತರ ಪದವಿ ಪ್ರದಾನ ಮಾಡಲಾಗುವುದು ಎಂದು ಕುಲಪತಿ ವಿವರಿಸಿದರು. ಒಟ್ಟು 3,987 ಪುರುಷ ಹಾಗೂ 6,704 ಮಹಿಳಾ ಅಭ್ಯಾರ್ಥಿಗಳು ಸೇರಿ ಒಟ್ಟು 10,691 ವಿದ್ಯಾರ್ಥಿಗಳಿಗೆ ವಿವಿಧ ಪದವಿ ಪ್ರದಾನ ಮಾಡಲಾಗುವುದು.

### 8 ಗಣ್ಯರಿಗೆ ಗೌರವ ಡಾಕ್ಟರೇಟ್

ಮೈಸೂರಿನ ಯೋಗ ನರಸಿಂಹಸ್ವಾಮಿ ದೇವಾಲಯದ ಸಂಸ್ಥಾಪಕ ಪ್ರೊ.ಭಾಷ್ಯಂ ಸ್ವಾಮೀಜಿ, ಬೀದರ್ ಜಿಲ್ಲೆಯ ನಿವೃತ್ತ ಪ್ರಾಂಶುಪಾಲ ಶಿವಶಂಕರ ಟೊಕರೆ, ನಿವೃತ್ತ ಐಎಎಸ್ ಅಧಿಕಾರಿ ಡಾ.ಸಿ.ಸೋಮಶೇಖರ ಅವರಿಗೆ ಗೌರವ ಡಾಕ್ಟರೇಟ್ ನೀಡಲಾಗುವುದು ಎಂದು ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ ತಿಳಿಸಿದರು. ಮೌಲ್ಯಮಾಪನ ಕುಲಸಚಿವ ಡಾ.ಸಿ.ಎನ್.ಆನಂದ್ ಕುಮಾರ್, ಕುಲಸಚಿವ ಪ್ರೊ.ಎಸ್.ಕೆ.ನವೀನ್ ಕುಮಾರ್ ಭಾಗವಹಿಸಿದ್ದರು.

### ನೀನು ನಾಯಕನಾಗಲು ಸಾಧ್ಯವಿಲ್ಲ

ರೆಡ್ಡಿ ಹಾಗೂ ಬಿ.ನಾಗೇಂದ್ರ ನಡುವೆ ಮಾತಿನ ಚಕಮಕಿ ತೀವ್ರ ಸ್ವರೂಪಕ್ಕೆ ತಿರುಗಿತು.

### ಮಲತಾಯಿ ಧೋರಣೆ

ಎಂದು ನಾವು ತಿಳಿಸುತ್ತೇವೆ. ಏಕೆಂದರೆ ಈಗಿರುವ ಪರಿಸ್ಥಿತಿಯಲ್ಲಿ ಯಾವ ರಾಜ್ಯದಲ್ಲಿಯೂ ಇದನ್ನು ಜಾರಿಗೆ ತರಲು ಸಾಧ್ಯವಿಲ್ಲ. ಈಗ ನಾಲ್ಕೈದು ತಿಂಗಳು ವ್ಯವಸಾಯದ ಕಾಲ. ಈ ಸಮಯದಲ್ಲಿ ರೈತರು ಅವರವರ ಕೂಲಿಯನ್ನು ಅವರು ಪಡೆದುಕೊಳ್ಳುತ್ತಿದ್ದರು. ಇಂತಹ ಸಮಯದಲ್ಲಿಯೇ ನರೇಗಾ ಯೋಜನೆ ತೆಗೆದು ಹಾಕಿದರೆ ಯಾರಿಗೂ ಏನೂ ಅನುಕೂಲವಾಗುವುದಿಲ್ಲ ಎಂದು ಟೀಕಿಸಿದರು.

ಮಾನವ ದಿನಗಳನ್ನು 125 ದಿನಗಳಿಗೆ ಹೆಚ್ಚಳ ಮಾಡಿದ್ದೇವೆ ಎಂದು ಕೇಂದ್ರ ಸರ್ಕಾರ ಹೇಳಬಹುದು. ಆದರೆ ಬೇರೆ ಸಮಯದಲ್ಲಿ ಇಷ್ಟು ದಿನಗಳ ಕಾಲ ಕೆಲಸ ನೀಡಲು ಸಾಧ್ಯವಿಲ್ಲ. ಒಂದೊಂದು ಪಂಚಾಯತಿಗೆ ತಲಾ 1–1.5 ಕೋಟಿ ರೂ. ಅನುದಾನ ನಷ್ಟವಾಗುತ್ತಿದೆ. ಜಾಬ್ ಕಾರ್ಡ್ ಹೊಂದಿರುವವರಿಗೂ ನಷ್ಟ ಎಂದು ತಿಳಿಸಿದರು.

### ರೈತನ ಮೇಲೆ ಚಿರತೆ ದಾಳಿ

ತಿಳಿಸಿದ್ದಾರೆ. ಎಸಿಎಫ್ ಸುರೇಶ್ ಕುಮಾರ್ ಮಾತನಾಡಿ, ಚಿರತೆ ದಾಳಿ ಮಾಡಿದ್ದರೆ ಉಗುರಿನ ಗುರುತು ಇರಬೇಕಿತ್ತು. ಚಿರತೆ ಮೈಮೇಲೆ ಎಗರಿರಬಹುದು. ಡ್ರೋನ್ ಮೂಲಕ ಪರಿಶೀಲನೆ ನಡೆಸಲಾಗುವುದು. ಬೋನ್ ಕೂಡ ಇರಿಸಲಾಗುವುದು ಎಂದು ಹೇಳಿದರು. ಈ ಭಾಗದಲ್ಲಿ ಚಿರತೆ ಹಾವಳಿ ಹೆಚ್ಚಾಗುತ್ತಿದ್ದು, ಸೆರೆಹಿಡಿಯುವಂತೆ ಗ್ರಾಮಸ್ಥರು ಒತ್ತಾಯಿಸಿದ್ದಾರೆ.

### ಕಾಡಾನೆ ದಾಳಿ: ಕಾವಲುಗಾರ ಸಾವು

ತೋಟದಿಂದ ಹೊರಬಂದ ಕಾಡಾನೆ ದಾಳಿ ನಡೆಸಿದೆ. ಗಂಭೀರ ಗಾಯಗೊಂಡ ಅವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಘಟನೆ ಮಾಹಿತಿ ತಿಳಿದು ಅರಣ್ಯಾಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಕಾಡಾನೆ ದಾಳಿಗೆ ಕಾವಲುಗಾರ ಮೃತಪಟ್ಟ ಘಟನೆ ಬಳಿಕ ತಿತಿಮತಿ ಹಾಗೂ ವಿರಾಜಪೇಟೆ ವಲಯ ಅರಣ್ಯ ಇಲಾಖೆ ವತಿಯಿಂದ ಗೌರಿಬೆಟ್ಟ ವ್ಯಾಪ್ತಿಯಲ್ಲಿ ಜಂಟಿಯಾಗಿ ಕಾಡಾನೆಯನ್ನು ಕಾಡಿಗಟ್ಟುವ ಕಾರ್ಯಾಚರಣೆ ಕೈಗೊಳ್ಳಲಾಯಿತು.

## ವಕೀಲರಿಂದ ಸ್ವಚ್ಛತಾ ಕಾರ್ಯ



ಗುಂಡ್ಲುಪೇಟೆ: ಪಟ್ಟಣದ ನ್ಯಾಯಾಲಯಗಳ ಸಂಕೀರ್ಣ ಮತ್ತು ಸುತ್ತಲಿನ ಪರಿಸರದಲ್ಲಿ ಶುಕ್ರವಾರ ಸ್ವಚ್ಛತಾ ಕಾರ್ಯ ನಡೆಸಲಾಯಿತು.

ತಾಲೂಕು ಕಾನೂನು ಸೇವೆಗಳ ಸಮಿತಿ ಹಾಗೂ ವಕೀಲರ ಸಂಘದ ವತಿಯಿಂದ ರಾಷ್ಟ್ರೀಯ ಸ್ವಚ್ಛತಾ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಸ್ವಚ್ಛತಾ ಕಾರ್ಯಕ್ರಮಕ್ಕೆ ಹಿರಿಯ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶ ಬಸವರಾಜ ಎಚ್. ತಳವಾರ್ ಚಾಲನೆ ನೀಡಿದರು. ನಂತರ ಮಾತನಾಡಿ ನಾವು ವಾಸಿರುವ ಪ್ರದೇಶ, ಕೆಲಸ ಮಾಡುವ ಸ್ಥಳಗಳನ್ನು ಸ್ವಚ್ಛವಾಗಿಟ್ಟುಕೊಳ್ಳುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ತಿಳಿಸಿದರು. ವೈಯಕ್ತಿಕ ಮತ್ತು ಸಾರ್ವಜನಿಕ ಸ್ವಚ್ಛತೆಯ ಕಾಳಜಿ ಸ್ವಚ್ಛ ಭಾರತ ಪರಿಕಲ್ಪನೆ ಸಾಕಾರಗೊಳ್ಳಲು ಕೊಡುಗೆ ನೀಡಿದಂತೆ. ಹೀಗಾಗಿ ಸ್ವಚ್ಛತೆ ವಿಷಯದಲ್ಲಿ ಯಾವುದೇ ಸಂಕೋಚವಿಲ್ಲದೇ ಪಾಲ್ಗೊಳ್ಳಿ ಎಂದು ಸಲಹೆ ನೀಡಿದರು. ಕೆಲವೇ ನಿಮಿಷಗಳ ಶ್ರಮದಿಂದ ಪರಿಸರ ಸ್ವಚ್ಛವಾಗುತ್ತದೆ. ಶ್ರಮವನ್ನು ಹಂಚಿಕೆ ಮಾಡಿಕೊಂಡು ದಿನದಲ್ಲಿ ಕೆಲಸ ನಿಮಿಷಗಳಾದರೂ ಸ್ವಚ್ಛತೆಗೆ ಮೀಸಲಿಡಿ. ಜನರಲ್ಲೂ ಈ ಬಗ್ಗೆ ಅರಿವು ಮೂಡಿಸಿ ಎಂದು ಕಿವಿಮಾತು ಹೇಳಿದರು. ಈ ವೇಳೆ ವಕೀಲರ ಸಂಘದ ಅಧ್ಯಕ್ಷ ಟಿ.ಎಸ್.ವೆಂಕಟೇಶ್, ಕಾರ್ಯದರ್ಶಿ ಜವರಾಜುಪಾಳ್ಯ ಮತ್ತು ನ್ಯಾಯಾಂಗ ಇಲಾಖೆ ನೌಕರರು ಹಾಜರಿದ್ದರು.

## ವಿಶೇಷಚೇತರಿಗೆ ಪಿಎಚ್‌ಡಿವರೆಗೆ ಶಿಕ್ಷಣ



ಮೈಸೂರು: ವಿಶೇಷಚೇತನರಿಗೆ ಕೇವಲ ಡಿಪ್ಲೋಮಾ ಮಾತ್ರವಲ್ಲ ಪದವಿ, ಸ್ನಾತಕೋತ್ತರ ಪದವಿ ಹಾಗೂ ಪಿಎಚ್.ಡಿ ವರೆಗಿನ ವಿದ್ಯಾಭ್ಯಾಸಕ್ಕೆ ಸಕಲ ಸೌಲಭ್ಯ ಕಲ್ಪಿಸಲಾಗುವುದು ಎಂದು ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿಯ ಸಮಕುಲಾಧಿಪತಿ ಹಾಗೂ ತಾಂತ್ರಿಕ ವಿಭಾಗದ ನಿರ್ದೇಶಕ ಡಾ.ಬಿ. ಸುರೇಶ್ ಭರವಸೆ ನೀಡಿದರು.

ನಗರದ ಎಸ್‌ಜೆಸಿಇ ಕ್ಯಾಂಪಸ್ಸಿನಲ್ಲಿ ಇರುವ ಜೆಎಸ್‌ಎಸ್ ವಿಶೇಷ ಚೇತನರ ಪಾಲಿಟೆಕ್ನಿಕ್‌ನಲ್ಲಿ ಗುರುವಾರ ರಾಜ್ಯಮಟ್ಟದ ವಿಜ್ಞಾನ ವಸ್ತು ಪ್ರದರ್ಶನ ಹಾಗೂ ಮುಕ್ತ ದಿನ ಉದ್ಘಾಟನಾ ಸಮಾರಂಭದ ಮುಖ್ಯಅತಿಥಿಯಾಗಿ ಮಾತನಾಡಿದ ಅವರು, ಈಗ ಕಂಪ್ಯೂಟರ್ ಸೈನ್ಸ್‌ನಲ್ಲಿ ಪದವಿ ಆರಂಭಿಸಲಾಗಿದೆ. ಮುಂದೆ ಸ್ನಾತಕೋತ್ತರ ಪದವಿ ಹಾಗೂ ಸಂಶೋಧನೆಗೂ ಅವಕಾಶ ಮಾಡಿಕೊಡಲಾಗುವುದು ಎಂದರು. ಕಾರ್ಯಕ್ರಮವನ್ನು ಉದ್ಘಾಟಿಸಿದ ಕರ್ನಾಟಕ ವಿಜ್ಞಾನ ಮತ್ತು ತಾಂತ್ರಿಕ ಅಕಾಡೆಮಿಯ ಸಿಇಒ ಡಾ.ಆರ್.ಆನಂದ ಮಾತನಾಡಿ, ವಸ್ತು ಪ್ರದರ್ಶನದಲ್ಲಿನ ಪ್ರಾತ್ಯಕ್ಷಿಕೆಗಳನ್ನು ವೀಕ್ಷಿಸಿದಾಗ, ವಿಶೇಷ ಚೇತನರಲ್ಲಿ ಯಾವುದೇ ಮಿತಿಗಳು ಕಾಣುತ್ತಿಲ್ಲ. ಬದಲಾಗಿ ಆಲೋಚನೆಗಳು, ಆತ್ಮವಿಶ್ವಾಸ ಮತ್ತು ಸೃಜನಶೀಲತೆ ಸ್ಪಷ್ಟವಾಗಿ ಗೋಚರಿಸುತ್ತಿವೆ. ಅಂಗವೈಕಲ್ಯವು ಸಾಮರ್ಥ್ಯಕ್ಕೆ ಅಡ್ಡಿಯಲ್ಲ. ಅದು ಹೊಸ ರೀತಿಯಲ್ಲಿ ಯೋಚಿ ಸುವ ಶಕ್ತಿಯಾಗಿದೆ ಎಂಬುದನ್ನು ಮಾಡೆಲ್‌ಗಳನ್ನು ತಯಾರಿಸುವ ಮೂಲಕ ಸಾಬೀತುಪ ಡಿಸಲಾಗಿದೆ ಎಂದರು. ಪಾಲಿಟೆಕ್ನಿಕ್‌ನ ಪ್ರಾಂಶುಪಾಲ ಬಿ.ಇಳಂಗೋವನ್ ಅಧ್ಯಕ್ಷತೆ ವಹಿಸಿದ್ದರು. ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಮುಖ್ಯ ಅತಿಥಿಯಾ ಗಿದ್ದರು. ಎನ್.ಎಂ.ಶಿವಕುಮಾರಸ್ವಾಮಿ. ಕೆ. ಕುಶಾಲ್ ಸ್ವಾಗತಿಸಿದರು. ಡಾ. ಎಸ್.ಜಿ. ಶ್ರೀಕಂಠಸ್ವಾಮಿ ವಂದಿಸಿದರು. ಡಾ.ಪಳನಿಸ್ವಾಮಿ ಕಾರ್ಯಕ್ರಮ ನಿರೂಪಿಸಿದರು. ಅಮೂಲ್ಯ ಪ್ರಾರ್ಥಿಸಿದರು.

**▶▶ ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿಯ ಸಮಕುಲಾಧಿಪತಿ, ತಾಂತ್ರಿಕ ವಿಭಾಗದ ನಿರ್ದೇಶಕ ಡಾ.ಬಿ. ಸುರೇಶ್ ಭರವಸೆ**

# ಸ್ವಾಭಿಮಾನಿ ದಲಿತರು ಜೆಡಿಎಸ್ ಸೇರಿ

## ರಾಜ್ಯ ಜೆಡಿಎಸ್ ವಕ್ತಾರ ನರಸಿಂಹಮೂರ್ತಿ ಹೇಳಿಕೆ



ರಾಮನಗರ: ಕಾಂಗ್ರೆಸ್ ಪಕ್ಷವನ್ನು ಗೆಲ್ಲಿಸಿರುವ ಮೂಲ ಕಾಂಗ್ರೆಸ್ಸಿಗರು ಇಂದು ಮೂಲೆ ಗುಂಪಾಗಿದ್ದಾರೆ. ಈ ಪೈಕಿ ಬಹುತೇಕರು ಕಾಂಗ್ರೆಸ್ ಪಕ್ಷವನ್ನು ತೊರೆಯುತ್ತಿದ್ದಾರೆ. ಕಾಂಗ್ರೆಸ್‌ನಲ್ಲಿರುವ ದಲಿತ ನಾಯಕರಿಗೆ ಆತ್ಮಾಭಿಮಾನ ಮತ್ತು ಸ್ವಾಭಿಮಾನ ಇದ್ದರೆ ಆ ಪಕ್ಷ ತೊರೆದು ಜೆಡಿಎಸ್ ಪಕ್ಷ ಸೇರ್ಪಡೆಯಾಗಲಿ ಎಂದು ರಾಜ್ಯ ಜೆಡಿಎಸ್ ವಕ್ತಾರ ನರಸಿಂಹಮೂರ್ತಿ ತಿಳಿಸಿದರು.

ನಗರದಲ್ಲಿರುವ ಜಿಲ್ಲಾ ಜೆಡಿಎಸ್ ಕಚೇರಿಯಲ್ಲಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು. ಆಡಳಿತರೂಢ ಕಾಂಗ್ರೆಸ್ ನಲ್ಲಿ ಮೂಲ ಮತ್ತು ವಲಸಿಗ ನಾಯಕರ ನಡುವೆ ತಿಕ್ಕಾಟ ನಡೆಯುತ್ತಿದೆ. ಮೂಲ ಕಾಂಗ್ರೆಸ್ಸಿಗರಾದ ದಲಿತ ನಾಯಕರನ್ನು ಪಕ್ಷದಲ್ಲಿ ಸರಿಯಾಗಿ ನಡೆಸಿಕೊಡುತ್ತಿಲ್ಲ. ನೀವೆಲ್ಲರು ಜೆಡಿಎಸ್ ಪಕ್ಷಕ್ಕೆ ಬಂದಲ್ಲಿ ತುಂಬು ಹೃದಯದಿಂದ ಸ್ವಾಗತಿಸಿ , ಗೌರವಯುತವಾಗಿ ನಡೆಸಿಕೊಳ್ಳುತ್ತೇವೆ ಎಂದರು.

ಮಾಗಡಿ ಕ್ಷೇತ್ರದಲ್ಲಿ ಜೆಡಿಎಸ್ ನಿಂದ ವಲಸೆ ಹೋದ ನಾಯಕರು ಶಾಸಕರಾಗಿದ್ದಾರೆ. ವಲಸಿಗ 'ರಾದ ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿದ್ದು, ಮೂಲ ಕಾಂಗ್ರೆಸ್ಸಿಗ ಡಿ.ಕೆ.ಶಿವಕುಮಾರ್ ಅವರಿಗೆ ಅವಕಾಶವೇ ಸಿಗುತ್ತಿಲ್ಲ. ಕಾಂಗ್ರೆಸ್ ನಲ್ಲಿ ಮೂಲ ಮತ್ತು ವಲಸಿಗ ಕಾಂಗ್ರೆಸ್ಸಿಗರ ನಡುವೆ ಸಾಕಷ್ಟು ಭಿನ್ನಾಭಿಪ್ರಾಯಗಳಿದ್ದು, ಇಬ್ಬರ ನಡುವೆ ಹೊಂದಾಣಿಕೆ ಸಾಧ್ಯವಾಗದೆ ತಿಕ್ಕಾಟ ನಡೆಯುತ್ತಿದೆ. ಮೂಲ ಕಾಂಗ್ರೆಸ್ಸಿಗರಿಗೆ ಅವಕಾಶಗಳೇ ಸಿಗುತ್ತಿಲ್ಲ. ಜಿಲ್ಲೆಯಲ್ಲಿಯೂ ಇದೇ ಪರಿಸ್ಥಿತಿ ನಿರ್ಮಾಣವಾಗಿದೆ. ಇದಕ್ಕೆ ಮಾಗಡಿ ಕ್ಷೇತ್ರದಲ್ಲಿ ಕಾಂಗ್ರೆಸ್ ನ ದಲಿತ ಮುಖಂಡ ಸಿ.ಜಯರಾಂ ರಾಜೀನಾಮೆ ನೀಡಿರುವುದೇ ಸಾಕ್ಷಿ. ಈಗಾಗಲೇ ರಾಜ್ಯದ ಕಾಂಗ್ರೆಸ್ ನಲ್ಲಿ ರಾಜೀನಾಮೆ ಪರ್ವ ಶುರುವಾಗಿದೆ ಎಂದು ನರಸಿಂಹಮೂರ್ತಿ ಹೇಳಿದರು. ಸುದ್ದಿಗೋಷ್ಠಿಯಲ್ಲಿ ಜೆಡಿಎಸ್ ತಾಲೂಕು ಅಧ್ಯಕ್ಷ ಸಬ್ಬಕೆರೆ ಶಿವಲಿಂಗಯ್ಯ, ಮುಖಂಡರಾದ ಯೋಗೇಶ್, ಶಿವಣ್ಣ, ಕುಮಾರ್, ಭೈರವ, ರವಿ ಇದ್ದರು.

### ದಲತರಿಗೆ ಅನ್ಯಾಯ: ಗೋವಿಂದರಾಜು

**ಜೆಡಿಎಸ್ ಯುವ ಮುಖಂಡ ಗೋವಿಂದರಾಜು ಮಾತನಾಡಿ, ದಲಿತರ ಅಭಿವೃದ್ಧಿ, ರಕ್ಷಣೆಯೇ ನಮ್ಮ ಗುರಿ ಎಂದು ಪ್ರಚಾರ ಮಾಡಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಿತು. ಆದರೀಗ ದಲಿತರ ಮೇಲೆಯೇ ಶೈಕ್ಷಣಿಕ, ಆರ್ಥಿಕ, ಸಾಮಾಜಿಕ 'ವಾಗಿ ದೌರ್ಜನ್ಯ ಎಸಗುತ್ತಿದೆ. ರಾಜ್ಯದಲ್ಲಿ ದಲಿತ ಹೆಣ್ಣು ಮಕ್ಕಳ ಅಪಹರಣ, ಜಾತಿ ನಿಂದನೆ, ಮರ್ಯಾದೆಗೇಡು ಹತ್ಯೆಗಳು ಹೆಚ್ಚಾಗಿದೆ ಎಂದು ದೂರಿದರು. ವಿದೇಶದಲ್ಲಿ ವ್ಯಾಸಂಗ ಮಾಡುತ್ತಿರುವ ದಲಿತ ವಿದ್ಯಾರ್ಥಿಗಳಿಗೆ ನೀಡುತ್ತಿದ್ದ ಧನ ಸಹಾಯ ಕಡಿತಗೊಳಿಸಲಾಗಿದೆ. ನಿಗಮ ಮಂಡಳಿಗಳಲ್ಲಿ ಸಾಲಸೌಲಭ್ಯ ನೀಡಲಾಗುತ್ತಿಲ್ಲ. ಎಸ್ಸಿಪಿ ಮತ್ತು ಟಿಎಸ್ಪಿಯ ಸಾವಿರಾರು ಕೋಟಿ ರು.ಗಳನ್ನು ಗ್ಯಾರಂಟಿ ಯೋಜನೆಗಳಿಕೆ ಬಳಕೆ ಮಾಡಿಕೊಂಡು ದಲಿತರಿಗೆ ಅನ್ಯಾಯ ಮಾಡುತ್ತಿದೆ ಎಂದು ಟೀಕಿಸಿದರು.**

### ಇಂದಿರಾ, ರಾಜೀವ್ ಹೆಸರು ತೆಗೆದು ಮಹಾತ್ಮ ಗಾಂಧಿ ಹೆಸರಿಸುವಿರಾ?

**ರಾಜ್ಯ ಸರ್ಕಾರದ 25 ಯೋಜನೆಗಳು, 55 ಶೈಕ್ಷಣಿಕ ಸಂಸ್ಥೆಗಳು ರಾಜೀವ್ ಗಾಂಧಿ, 27 ಯೋಜನೆಗಳು, 21 ಶೈಕ್ಷಣಿಕ ಸಂಸ್ಥೆಗಳು ಇಂದಿರಾ ಗಾಂಧಿ, 22 ಸಂಸ್ಥೆಗಳು ನೆಹರು ಹೆಸರಿನಲ್ಲಿವೆ. ಕ್ರೀಡಾಕೂಟಗಳು 23 ರಾಜೀವ್ ಗಾಂಧಿ , 4 ಇಂದಿರಾ ಗಾಂಧಿ, 2 ನೆಹರು ಹೆಸರಿನಲ್ಲಿವೆ ಎಂದು ಟೀಕಿಸಿದರು. ಇನ್ನು ರಸ್ತೆ ಮತ್ತು ಕಟ್ಟಡಗಳಲ್ಲಿ ಗಾಂಧಿ ಕುಟುಂಬದ 74 ಹೆಸರುಗಳಿವೆ. 51 ಪ್ರಶಸ್ತಿಗಳು ನಕಲಿ ಗಾಂಧಿಗಳ ಹೆಸರಿನಲ್ಲಿವೆ. 37 ಸಂಸ್ಥೆಗಳು ಮತ್ತು ಆಚರಣೆಗಳು ನೆಹರು ಮತ್ತು ಇಂದಿರಾ ಹೆಸರಿನಲ್ಲಿದೆ. 39 ವೈದ್ಯಕೀಯ ಸಂಸ್ಥೆಗಳು, 15 ಸ್ಕಾಲರ್ ಶಿಪ್‌ಗಳು, 15 ರಾಷ್ಟ್ರೀಯ ಉದ್ಯಾನಗಳು, 5 ವಿಮಾನ ನಿಲ್ದಾಣ ಮತ್ತು ಬಂದರುಗಳು ನಕಲಿ ಗಾಂಧಿಗಳ ಹೆಸರಿನಲ್ಲಿವೆ. ಕಾಂಗ್ರೆಸ್ ಸರ್ಕಾರಕ್ಕೆ ಮಹಾತ್ಮರ ಮೇಲೆ ಅಷ್ಟೊಂದು ಗೌರವ ಇದ್ದರೆ ನಕಲಿ ಗಾಂಧಿಗಳ ಹೆಸರು ತೆಗೆದು ಗಾಂಧೀಜಿ ಹೆಸರಿಡಲಿ ಎಂದು ನರಸಿಂಹಮೂರ್ತಿ ಸವಾಲು ಹಾಕಿದರು.**

### ವಿಬಿ ಜಿ ರಾಮ್ ಜಿ ಸಮರ್ಥನೆ

**ಕೇಂದ್ರ ಸರ್ಕಾರ ಮನರೇಗಾ ಯೋಜನೆ ಹೆಸರನ್ನು ವಿಬಿ ಜಿ ರಾಮ್ ಜಿ ಎಂದು ಬದಲಾವಣೆ ಮಾಡಿ ಪಾರದರ್ಶಕತೆಗೆ ಒತ್ತು ಕೊಟ್ಟಿದೆ. ಆದರೆ, ಗ್ರಾಮೀಣ ಜನರ ಬಗ್ಗೆ ಬದುಕಿನ ಬಗ್ಗೆ ಅನುಕಂಪ ಇಲ್ಲದ ಕಾಂಗ್ರೆಸ್ ಸರ್ಕಾರ ಬೂಟಾಟಿಕೆ ಹೋರಾಟ ನಡೆಸುತ್ತಿದೆ. ಅಲ್ಲದೆ, ರಾಜ್ಯದ ಎಲ್ಲ ಗ್ರಾಮ ಪಂಚಾಯಿತಿಗಳಿಗೂ ಮಹಾತ್ಮ ಗಾಂಧೀಜಿ ಹೆಸರಿಡಲು ಹೊರಟಿರುವುದು ಜನರ ಗಮನವನ್ನು ಬೇರೆಡೆ ಸೆಳೆಯುವ ಉದ್ದೇಶವಾಗಿದೆ. ಅಷ್ಟಕ್ಕೂ ಜವಾಹರ್ ರೋಜ್ಗಾರ್ ಯೋಜನೆಯನ್ನು ಮನರೇಗಾ ಎಂದು ಬದಲಾಯಿಸಿದ್ದು ಯಾರೆಂದು ಪ್ರಶ್ನಿಸಿದರು.**

## ಸಿಎಂ, ಪತ್ನಿ ಕಳಂಕ ಮುಕ್ತ



ಮೈಸೂರು: ಮುಡಾ ನಿವೇಶನಗಳ ಹಂಚಿಕೆ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಅವರ ಪತ್ನಿ ಪಾರ್ವತಿ ಅವರು ಕಳಂಕಮುಕ್ತರಾಗಿದ್ದು, ಸತ್ಯಕ್ಕೆ ಜಯ ಸಿಕ್ಕಂತಾಗಿದೆ ಎಂದು ಕರ್ನಾಟಕ ಪ್ರದೇಶ ಕುರುಬರ ಸಂಘದ ಮಾಜಿ ಅಧ್ಯಕ್ಷ ಬಿ. ಸುಬ್ರಹ್ಮಣ್ಯ ಶ್ಲಾಘಿಸಿದರು.

ಲೋಕಾಯುಕ್ತ ಪೊಲೀಸರ ಬಿ ರಿಪೋರ್ಟ್ ಅಂಗೀಕರಿಸಿದ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ನಿರ್ಧಾರವನ್ನ ಸ್ವಾಗತಾರ್ಹ. ಸಿದ್ದರಾಮಯ್ಯ ಹಾಗೂ ಅವರ ಪತ್ನಿ ಪಾರ್ವತಿ ಅವರ ಹೆಸರಿಗೆ ಮಸಿ ಬಳಿಯಬೇಕು ಅಂತ ಕಾಣದ ಕೈಗಳು ಹಾಗೂ ವಿಪಕ್ಷಗಳು ಇಲ್ಲಸಲ್ಲದ ಷಡ್ಯಂತ್ರ ನಡೆಸಿದವು. ಮುಖ್ಯಮಂತ್ರಿಗಳನ್ನ ಜೈಲಿಗೆ ಕಳಿಸಬೇಕೆಂದು ವ್ಯವಸ್ಥಿತ ಪಿತೂರಿ ನಡೆಸಿದ್ರು, ಇಡಿಯನ್ನೂ ಛೂ ಬಿಟ್ಟರು. ಸುಳ್ಳೇ ಸತ್ಯವೆಂದು ಪಾದಯಾತ್ರೆ ಮಾಡಿ ಜನರಿಗೆ ಮಕ್ಮೇಲ್ ಟೋಪಿ ಹಾಕಿದ್ರು, ಈಗ ನ್ಯಾಯಾಲಯದ ಆದೇಶ ವಿಪಕ್ಷಗಳಿಗೆ ಕಪಾಳ ಮೋಕ್ಷ ಮಾಡಿದಂತಾಗಿದೆ ಎಂದರು. ಬಿಜೆಪಿಯವರು ಹಿಂದುಳಿದ ವರ್ಗದ ನಾಯಕ ಅನ್ನೋ ಕಾರಣಕ್ಕೆ ಷಡ್ಯಂತ್ರ ಮಾಡಿದ್ರು. ರಾಜಕೀಯವಾಗಿ ಸಿದ್ದರಾಮಯ್ಯರನ್ನ ಎದುರಿಸಲಾಗದೇ ಇಡಿಯನ್ನ ದುರ್ಬಳಕೆ ಮಾಡಿಕೊಂಡು, ಪಾರ್ವತಿ ಅವರ ವಿರುದ್ಧ ಸುಳ್ಳು ಪ್ರಕರಣವನ್ನು ಸೃಷ್ಟಿಸಿ, ಮಾನಸಿಕವಾಗಿಯೂ ಕಿರುಕುಳ ನೀಡಿದ್ದರು. ಈ ಮೊದಲು ಸುಪ್ರೀಂ ಆದೇಶ ಈಗ ಜನಪ್ರತಿನಿಧಿಗಳ ನಿರ್ಧಾರದಿಂದ ವಿರೋಧಿಗಳಿಗೆ ಮುಖಭಂಗವಾಗಿದೆ ಎಂದು ಹೇಳಿದರು.

## ನೆಮ್ಮದಿಯಿಂದ ನಾಡಿಗೆ ಭಾಷೆಯೇ ಕಾರಣ



ಮೈಸೂರು: ನಾವು ನೆಮ್ಮದಿಯಿಂದ ನಾಡು ಕಟ್ಟಿಕೊಳ್ಳಲು ಕನ್ನಡ ಭಾಷೆ ಕಾರಣ ಎಂದು ಕರ್ನಾಟಕ ಸುಗಮ ಸಂಗೀತ ಪರಿಷತ್ ಜಿಲ್ಲಾಧ್ಯಕ್ಷ ನಾಗರಾಜ ವಿ. ಬೈರಿ ಹೇಳಿದರು.

ನಗರದ ಸುಬ್ಬರಾಯನಕೆರೆ ಸ್ವಾತಂತ್ರ್ಯ ಉದ್ಯಾನವನದಲ್ಲಿ ಶುಕ್ರವಾರ ಕರ್ನಾಟಕ ರಕ್ಷಣಾ ವೇದಿಕೆ [ಕನ್ನಡಸೇನೆ] ನಗರ ಹಾಗೂ ಜಿಲ್ಲಾ ಘಟಕ ಉದ್ಘಾಟಿಸಿ ಮಾತನಾಡಿದ ಅವರು, ಸ್ವಾತಂತ್ರ್ಯ ನಂತರ ಭಾಷಾವಾರು ಪ್ರಾಂತ್ಯಗಳು ರಚನೆಯಾದವು. ಇದರಿಂದಾಗಿ ಕನ್ನಡನಾಡನ್ನು ಭಾಷೆಯ ಆಧಾರದ ಸಶಕ್ತವಾಗಿ ಕಟ್ಟಲು ಸಾಧ್ಯವಾಯಿತು ಎಂದರು.

ಇಷ್ಟಾದರೂ ತಮಿಳುನಾಡಿನ ಊಟಿ, ತಾಳವಾಡಿ, ಕೇರಳದ ಕಾಸರಗೋಡು, ಬೆಳಗಾವಿ ಗಡಿಯ ಒಂದಷ್ಟು ಪ್ರದೇಶಗಳು ಕರ್ನಾಟಕಕ್ಕೆ ಸೇರಬೇಕಿತ್ತು ಎಂದು ಅವರು ಹೇಳಿದರು.

ಮುಖ್ಯ ಅತಿಥಿಯಾಗಿದ್ದ ಸಮಾಜ ಸೇವಕ ಕೆ.ರಘುರಾಂ ವಾಜಪೇಯಿ ಮಾತನಾಡಿ, ಮೈಸೂರಿನ ಅರಮನೆ ಆವರಣದಲ್ಲಿ ಭುವನೇಶ್ವರಿ ದೇವಿಯ ದೇವಸ್ಥಾನ ಇದೆ. ರಾಜರು ಕನ್ನಡಕ್ಕೆ ಸಾಕಷ್ಟು ಪ್ರೋತ್ಸಾಹ ನೀಡಿ, ಬೆಳೆಸಿದ್ದಾರೆ. ಆದ್ದರಿಂದ ಇವತ್ತು ಮಕ್ಕಳಿಗೆ ಮನೆಯಿಂದಲೇ ಕನ್ನಡ ಕಲಿಸುವ ಕೆಲಸ ಮಾಡಬೇಕು ಎಂದರು.

ಕರವೇ– ಕನ್ನಡಸೇನೆ ಜಿಲ್ಲಾಧ್ಯಕ್ಷ ಆರ್. ಶ್ರೀನಿವಾಸ ಪ್ರಾಸ್ತಾವಿಕ ಭಾಷಣ ಮಾಡಿದರು. ರಾಜ್ಯಾಧ್ಯಕ್ಷ ಎನ್. ಅರುಣ್ ಕುಮಾರ್ ಅಧ್ಯಕ್ಷತೆ ವಹಿಸಿದ್ದರು. ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಕರ್ನಾಟಕ ರಾಜ್ಯ ರೈತ ಸಂಘಟನೆ [ಮೂಲ] ಜಿಲ್ಲಾಧ್ಯಕ್ಷ ಬನ್ನೂರು ನಾರಾಯಣ, ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್ತು ಅಧ್ಯಕ್ಷೆ ಛೋಂದಮ್ಮ ಪೂಣಚ್ಚ ಮುಖ್ಯ ಅತಿಥಿಗಳಾಗಿದ್ದರು. ಇದಕ್ಕೂ ಮೊದಲು ಉಚಿತ ಆರೋಗ್ಯ ತಪಾಸಣಾ ಶಿಬಿರ, ರಂಗೋಲಿ ಸ್ಪರ್ಧೆ, ಕಂಸಾಳೆ, ಡೊಳ್ಳು ಕುಣಿತ ಮೊದಲಾದ ಜಾನಪದ ತಂಡಗಳಿಂದ ಕಲಾ ಪ್ರದರ್ಶನ, .ಯೋಗೇಶ್ ಮತ್ತು ತಂಡದಿಂದ ಸಾಂಸ್ಕೃತಿಕ ಕಾರ್ಯಕ್ರಮ ಏರ್ಪಡಿಸಲಾಗಿತ್ತು.

### ರಾಜೀವ್ ಗೌಡಗೆ ಜಾಮೀನು

ರಾಜೀವ್ ಗೌಡ ಬೆಂಬಲಿಗರಿಗೆ ನ್ಯಾಯಾಧೀಶರು ಖಡಕ್ ವಾರ್ನಿಂಗ್ ನೀಡಿದ್ದಾರೆ. ನ್ಯಾಯಾಲಯದ ಆವರಣದ ಒಳಗೆ ಆಗಲಿ, ಹೊರಗೆ ಆಗಲಿ ಜೈಕಾರ ಹಾಕುವಂತಿಲ್ಲ. ಪಟಾಕಿ ಸಿಡಿಸುವಂತಿಲ್ಲ ಎಂದು ತಾಕೀತು ಮಾಡಿದ್ದಾರೆ.

### ಮದುವೆ ಸ್ಥಗಿತ

ಹಿಂದೆ ಹುಡುಗನೊಬ್ಬ ಕರೆ ಮಾಡಿ ಮದುವೆ ರದ್ದು ಮಾಡು ಎಂದು ಬೆದರಿಕೆ ಹಾಕಿದ್ದ. ನಾನು ಅದನ್ನು ಉದಾಸೀನ ಮಾಡಿದ್ದೆ. ಈಗ ಕೊಲೆ ಮಾಡಲು ಯತ್ನಿಸುವ ಹಂತಕ್ಕೆ ಹೋಗಿದ್ದಾರೆ. ಮದುವೆ ಸದ್ಯ ಸ್ಥಗಿತಗೊಂಡಿದೆ. ಮುಂದೆ ಹಿರಿಯರು ತೀರ್ಮಾನ ಕೈಗೊಳ್ಳಲಿದ್ದಾರೆ ಎಂದು ಹೇಳಿದರು. ಕೊಳ್ಳೇಗಾಲ ಪಟ್ಟಣ ಠಾಣೆಯಲ್ಲಿ ದೂರು ದಾಖಲಾಗಿದೆ. ಆರೋಪಿಗಳ ಪತ್ತೆಗೆ ಬಲೆ ಬೀಸಿದ್ದಾರೆ.

### ಅಶ್ವಥ್ ನಾರಾಯಣ್‌ಗೆ ಜೈಲು

ನಿವೇಶನಗಳಾಗಿ ವಿಂಗಡಿಸಿ ಮಾರಾಟ ಮಾಡಿದ ಆರೋಪ ಹೊತ್ತಿದ್ದಾರೆ. ಈ ಸಂಬಂಧ ಮೈಸೂರಿನ ಡಾ.ಕಾವ್ಯಶ್ರೀ ದೂರು ನೀಡಿದ್ದರು. ಅದರನ್ವಯ ತೀರ್ಪು ಹೊರಬಿದ್ದಿದೆ. ಕೆಂಗೇರಿ ಹೋಬಳಿ ವ್ಯಾಪ್ತಿಯ ರಾಮಸಂದ್ರ ಗ್ರಾಮದ ಸರ್ವೆ ನಂಬರ್ 100/2ರಲ್ಲಿನ ರೈತರ 4 ಎಕರೆ 30 ಗುಂಟೆ ಕೃಷಿ ಜಮೀನನ್ನು ಕ್ರಯಕ್ಕೆ ಪಡೆದಿದ್ದರು. ಭೂ ಪರಿವರ್ತನೆ ಮಾಡದೆ ಸೈಟ್ ಮಾಡಿ ಮಾರಾಟ ಮಾಡಿದ್ದರು. ಕಾವ್ಯಶ್ರೀ ಅವರಿಗೆ 1 ಲಕ್ಷ ರೂ. ಪರಿಹಾರ ನೀಡುವಂತೆ ಕೋರ್ಟ್ ಆದೇಶಿಸಿದೆ.

### ವಿದ್ಯಾರ್ಥಿಗಳಿಗೆ ಪದವಿ

ಆಚರಿಸಲಾಗುತ್ತಿದೆ. ವಿಶ್ವವಿದ್ಯಾಲಯದಲ್ಲಿ ವಿದ್ಯಾಭ್ಯಾಸ ಮಾಡಿದ್ದ 96 ಸಾವಿರ ವಿದ್ಯಾರ್ಥಿಗಳಿಗೆ ತೊಂದರೆಯಾಗಿತ್ತು. ತಾಂತ್ರಿಕ ಹಾಗೂ ಅರೆ ವೈದ್ಯಕೀಯ ಕೋರ್ಸ್ ಹೊರತುಪಡಿಸಿ 30 ಸಾವಿರ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಗುವುದು ಎಂದು ತಿಳಿಸಿದರು. ವಿಶ್ವವಿದ್ಯಾಲಯದ ಘಟಿಕೋತ್ಸವ ಭವನದಲ್ಲಿ ಬೆಳಗ್ಗೆ 11.30ಕ್ಕೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಧ್ಯಕ್ಷತೆಯಲ್ಲಿ ನಡೆಯುವ ಘಟಿಕೋತ್ಸವದಲ್ಲಿ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ. ಸುಧಾಕರ್, ಕೇಂದ್ರ ಶಿಕ್ಷಣ ಸಚಿವ ಡಾ.ಸುಕಾಂತ ಮಜುಂ ದಾರ್ ಭಾಗವಹಿಸಲಿದ್ದಾರೆ ಎಂದರು.

### ವೈದ್ಯಾಧಿಕಾರಿ ಡಾ.ಕಾವ್ಯ ಕರೆ

## ಸ್ತನ–ಗರ್ಭಕೋಶದ ಕ್ಯಾನ್ಸರ್ ಅರಿವಿರಲಿ



ಗುಂಡ್ಲುಪೇಟೆ: – ಪಟ್ಟಣದ ಕೆಬ್ಬೆಕಟ್ಟೆ ಶ್ರೀ ಶನೇಶ್ವರ ಸ್ವಾಮಿ ದೇವಸ್ಥಾನದ ಅವರಣದಲ್ಲಿ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ. ಸಿ ಟ್ರಸ್ಟ್ (ರಿ) ಮಾರ್ಗದರ್ಶನದೊಂದಿಗೆ ತಾಲೂಕು ಮಟ್ಟದ ಮಹಿಳಾ ವಿಚಾರ ಗೋಷ್ಠಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು

ಈ ಕಾರ್ಯಕ್ರಮ ಉದ್ಘಾಟಿಸಿ ಸ್ಪಂದನ ಆಸ್ಪತ್ರೆಯ ವೈದ್ಯಾಧಿಕಾರಿ ಡಾಕ್ಟರ್ ಕಾವ್ಯ ರವರು ಮಾತನಾಡತ್ತಾ ಸ್ತನದ ಕ್ಯಾನ್ಸರ್ ಮತ್ತು ಗರ್ಭಕೋಶದ ಕ್ಯಾನ್ಸರ್ ಬಗ್ಗೆ ಮತ್ತು ಅವುಗಳ ಗುಣ ಲಕ್ಷಣಗಳು ಮತ್ತು ಅವುಗಳನ್ನು ತಡೆಗಟ್ಟುವ ವಿಧಾನ ಇವುಗಳ ಬಗ್ಗೆ ಇದರ ಬಗ್ಗೆ ನಾವು ಎಚ್ಚೆತ್ತುಕೊಳ್ಳುವ ಬಗ್ಗೆ ವಿವರವಾಗಿ ಮಾಹಿತಿ ನೀಡಿದರು

ನಂತರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಚಾಮರಾಜನಗರ ಜಿಲ್ಲಾ ನಿರ್ದೇಶಕ ದಿನೇಶ್ ಎ. ರವರು ಮಾತನಾಡುತ್ತ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬೆಳೆದು ಬಂದ ದಾರಿ ಮಹಿಳೆಯರ ಸ್ವಾಲಂಬಿಗಳಾಗಿ ಬದುಕಲು ಸ್ವ ಸಹಾಯ ಸಂಘಗಳು ಮತ್ತು ಪ್ರಗತಿ ಬಂಧು ಸಂಘಗಳ ರಚನೆ ಮಾಶಾಸನ ಜನಮಂಗಳ ವಾತ್ಸಲ್ಯ ಮನ ದೇವಸ್ಥಾನ ಗಳ ಜೀರ್ಣೋದ್ಧಾರ ಕೆರೆ ಕಾಮಗಾರಿಯ ಜ್ಞಾನ ವಿಕಾಸ್ ಕೇಂದ್ರಗಳು ಹೀಗೆ ಹಲವಾರು ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಿದರು

ಮಹಿಳಾ ಸಾಂತ್ವಾನ ಇಲಾಖೆಯ ಸಮಾಲೋಚಕರಾದ ಎನ್ ಎಂ ಸರಸ್ವತಿ ರವರು ಮಾತನಾಡಿ ಬಾಲ್ಯ ವಿವಾಹದ ಬಗ್ಗೆ ಬಾಲ್ಯ ವಿವಾಹದಿಂದ ಹಾಗುವ ಸಮಸ್ಯೆ ಗಳು ಮತ್ತು ಅವರ ಮೇಲೆ ಬೀರುವ ಪರಿಣಾಮಗಳು ಮತ್ತು ಕಾನೂನಿನಗೆ ಸಂಬಂಧ ಪಟ್ಟಂತಹ ಕ್ರಮಗಳ ಬಗ್ಗೆ ವಿವರವಾಗಿ ತಿಳಿಸದರು

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಂಯೋಜಕಿ ರುದ್ರಮ್ಮ ಬಸಪ್ಪ ಅಧ್ಯಕ್ಷತೆ ವಹಿಸಿ ಮಾತನಾಡಿ ದರು ಈ ಸಂದರ್ಭದಲ್ಲಿ ಪೌರಕಾರ್ಮಿಕರನ್ನು ಸನ್ಮಾನಿಸಿ ಗೌರವಿಸಲಾಯಿತ್ತು

ರಂಗೋಲಿ ಸ್ಪರ್ಧೆ. ಹೂ ಕುಚ್ಚು ಸ್ಪರ್ಧೆ. ದೀಪಾಲಂಕಾರ ಸ್ಪರ್ಧೆ. ಜಾನಪದ ನೃತ್ಯ ಸ್ಪರ್ಧೆ. ಯಲ್ಲಿ ಬಾಗವಹಿಸಿದವರಿಗೆ ಬಹುಮಾನ ವಿತರಣೆ ಮಾಡಿ ಮಹಿಳಾ ಪ್ರತಿಬೆಗಳನ್ನು ಗುರುತಿಸಲಾಯಿತ್ತು ಈ ವೇಳೆ ತಾಲೂಕು ಯೋಜನಾಧಿಕಾರಿ. ಚಂದ್ರಶೇಖರ್ ಸಮನ್ವಯಾಧಿಕಾರಿ ಚೈತ್ರ ಹಾಗೂ ಸೇವಾ ಪ್ರತಿನಿಧಿಗಳು ಮತ್ತು ಕೇಂದ್ರದ ಸದಸ್ಯರು ಭಾಗವಹಿಸಿದ್ದರು

## ವಿಶ್ವಬಾಕ್ಸ್ ದಿನಕ್ಕೆ 75ಮಂದಿ ಆಯ್ಕೆ

ಮೈಸೂರು: ಸಿಎಚ್‌ಆರ್‌ಓ ಫೋರಂ ಹಾಗೂ ಎಡಿನ್ ಫೌಂಡೇಷನ್ ಸಂಯುಕ್ತಾಶ್ರಯದಲ್ಲಿ ಫೆ. 1 ರಂದು ಹಮ್ಮಿಕೊಳ್ಳಲಿರುವ ವಿಶ್ ಬಾಕ್ಸ್ ದಿನದ ಅಂಗವಾಗಿ ಅನುಕೂಲ ಪಡೆಯಲು 75 ಮಂದಿ ಮಕ್ಕಳನ್ನು ಆಯ್ಕೆ ಮಾಡಲಾಗಿದೆ ಎಂದು ಪದಾಧಿಕಾರಿ ಗೌತಮ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಬೋಗಾದಿಯ ನೆಲೆ ಫೌಂಡೇಷನ್, ಕಿರಗಸೂರಿನ ಶಿವಾಂಬ ಪ್ರತಿಷ್ಠಾನಗಳ ಮಕ್ಕಳು ಇವರಾಗಿದ್ದಾರೆ. ಅಂದು ಇವರನ್ನು ಜಿ.ಆರ್.ಎಸ್. ಫ್ಯಾಂಟಸಿ ಪಾರ್ಕ್ಗೆ ಕರೆದೊಯ್ದು, ವಿವಿಧ ಮನರಂಜನಾ ಆಟ ಆಡಿಸಲಾಗುವುದು. ವಿಶೇಷ ಬಫೆ ಊಟ ಇರಲಿದೆ. ಇವರಿಗೆ ಉಚಿತ ಬರವಣಿಗೆ ಸಾಮಗ್ರಿ ಕಿಟ್, ವಿಶ್ ಬಾಕ್ಸ್ ವಾರ್ಷಿಕ ಪಂಚಾಂಗ ವಿತರಿಸಲಾಗುವುದೆಂದರು. ಕುಶಾಲ್ ರಾವ್, ಕಿರಣ್‌ಕುಮಾರ್, ಬಿಂದು ಶರತ್ ಇದ್ದರು.

## ನಾಳೆ ಮಾಚಿದೇವರ ಜಯಂತ್ಯುತ್ಸವ

ಮೈಸೂರು:ಮಡಿವಾಳ ಮಾಚಿದೇವರ ಜಯಂತ್ಯುತ್ಸವ ಫೆ.1ರಂದು ಮಧ್ಯಾಹ್ನ 12ಕ್ಕೆ ಕಲಾಮಂದಿರದಲ್ಲಿ ನಡೆಯಲಿದೆ ಎಂದು ಮಡಿವಾಳ ಸಮುದಾಯದ ಮುಖಂಡ ಎಸ್.ಎಸ್. ಪ್ರಶಾಂತ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಅಂದು ಬೆಳಗ್ಗೆ 9ಕ್ಕೆ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದ ಬಳಿಯಿಂದ ಭವ್ಯ ಮೆರವಣಿಗೆ ಹೊರಟು ಕಲಾಮಂದಿರ ಸೇರಲಿದೆ. ಇದರಲ್ಲಿ 501 ಕಲಸ ಹೊತ್ತವರು ಪಾಲ್ಗೊಳ್ಳಲಿದ್ದಾರೆ. ಬಳಿಕ ಮಧ್ಯಾಹ್ನ 12ಕ್ಕೆ ಕಲಾಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ಜರುಗಲಿದೆ. ಶಾಸಕ ಕೆ. ಹರೀಶ್‌ಗೌಡ ಅಧ್ಯಕ್ಷತೆ ವಹಿಸುವರು, ಇನ್ನಿತರ ಗಣ್ಯರು ಪಾಲ್ಗೊಳ್ಳಲಿದ್ದಾರೆ. ಹೀಗಾಗಿ ನಗರ ಮತ್ತು ತಾಲೂಕಿನ ಮಡಿವಾಳ ಸಮುದಾಯದ ಲ್ಯಾಂಡ್ರಿ ಅಂಗಡಿಗಳವರು ಅಂದು ರಜೆ ಮಾಡಿ ಪಾಲ್ಗೊಳ್ಳಬೇಕೆಂದು ಕೋರಿದರು. ರವಿನಂದನ್, ಪಿ.ಜಿ. ಕೇಶವ, ಚನ್ನಕೇಶವ, ಜಯರಾಂ ದುದ್ದಗೆರೆ ಮೊದಲಾದವರು ಇದ್ದರು.

# ಕುಷ್ಠರೋಗ ಮುಕ್ತ ಜಿಲ್ಲೆಯಾಗಲು ಸಾರ್ವಜನಿಕರ ಸಹಕಾರ ಅಗತ್ಯ

## ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿ ಮಂಜುಳಾ ಕರೆ

## ರಾಮನಗರದಲ್ಲಿ ಸ್ಪರ್ಶ್ ಕುಷ್ಠರೋಗ ಅರಿವು ಕಾರ್ಯಕ್ರಮ

ರಾಮನಗರ: ಜಿಲ್ಲಾದ್ಯಂತ ಕುಷ್ಠರೋಗ ಸೋಂಕಿತರ ಸಂಖ್ಯೆ 14 ಇದೆ. ಶೂನ್ಯಕ್ಕೆ ಇಳಿಸುವ ನಿಟ್ಟಿನಲ್ಲಿ ಸಾರ್ವಜನಿಕರ ಸಹಕಾರದ ಅಗತ್ಯವಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿ ಮಂಜುಳಾ ಕರೆ ನೀಡಿದ್ದಾರೆ.

ಜಿಲ್ಲಾ ಪಂಚಾಯತ್‌ನ ಮಿನಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿಗಳ ಕಚೇರಿ ಹಾಗೂ ಐಕಾನ್ ನರ್ಸಿಂಗ್ ಕಾಲೇಜಿನ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಸ್ಪರ್ಶ್ ಕುಷ್ಠರೋಗ ಅರಿವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕ್ಷಯ ರೋಗ ನಿರ್ಮೂಲನಾಧಿಕಾರಿ ಡಾ ಶಶಿಕಿರಣ್, ಜಿಲ್ಲಾ ಮಲೇರಿಯಾ ರೋಗ ನಿರ್ಮೂಲನಾಧಿಕಾರಿ ಡಾ. ಪದ್ಮಾವತಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ದಾಸಯ್ಯ, ಆರೋಗ್ಯ ನಿರೀಕ್ಷಣಾಧಿಕಾರಿ ಅನುರೂಪ, ಎಂ.ಐ.ಎಸ್ ಶೃತಿ, ನರ್ಸಿಂಗ್ ಕಾಲೇಜು ವಿದ್ಯಾರ್ಥಿಗಳು ಹಾಗೂ ಆರೋಗ್ಯ ಇಲಾಖೆ ಸಿಬ್ಬಂದಿಗಳು ಹಾಜರಿದ್ದರು.

### ಕುಷ್ಠರೋಗದ ಬಗ್ಗೆ ಕಳಂಕ ಬೇಡ: ಅರ್ಪಿತ

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಅರ್ಪಿತ ಮಾತನಾಡಿ, ಕುಷ್ಠರೋಗಿಗಳನ್ನು ಪ್ರೀತಿ ವಿಶ್ವಾಸದಿಂದ ಕಾಣಬೇಕು. ಅವರ ಆತ್ಮಗೌರವಕ್ಕೆ ಧಕ್ಕೆಯಾಗದಂತೆ ಎಚ್ಚರವಹಿಸಬೇಕು. ಕುಷ್ಠರೋಗಕ್ಕೆ ಅಂಟಿರುವ ಕಳಂಕವನ್ನು ಹೋಗಲಾಡಿಸಲು ಬದ್ಧರಾಗಿ ಅವರನ್ನು ಸಮಾಜದ ಮುಖ್ಯ ವಾಹಿನಿಯಲ್ಲಿ ಗೌರವಯುತವಾಗಿ ಬದುಕಲು ಅವಕಾಶ ಕಲ್ಪಿಸಬೇಕು. ಮಹಾತ್ಮ ಗಾಂಧೀಜಿಯವರ ಕನಸಾದ ಕುಷ್ಠರೋಗ ಮುಕ್ತ ಭಾರತ ಕಟ್ಟಲು ಕಾಯ, ವಾಚ, ಮಾನಸಾ ಶ್ರಮಿಸಬೇಕೆಂದು ಪ್ರತಿಜ್ಞಾವಿಧಿ ಬೋಧಿಸಿದರು.




### ಫೆ.13ರವರೆಗೆ ಅಭಿಯಾನ: ಡಾ.ಕುಮಾರ್

ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ. ಕುಮಾರ್ ಮಾತನಾಡಿ, ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನವು ಜನವರಿ 30 ರಿಂದ ಫೆಬ್ರವರಿ 13ರವರೆಗೆ ಜಿಲ್ಲೆಯಾದ್ಯಂತ ನಡೆಯಲಿದೆ, ಕುಷ್ಠರೋಗದ ಬಗ್ಗೆ ಅರಿವು ಮೂಡಿಸುವುದು ಈ ಕಾರ್ಯಕ್ರಮದ ಉದ್ದೇಶ. ಇದು ಮೈಕೋ ಬ್ಯಾಕ್ಟೀರಿಯಂ ಲೆಪ್ರೆ ಎಂಬ ರೋಗಾಣುವಿನಿಂದ ಹರಡುತ್ತದೆ. ದೇಹದ ಮೇಲೆ ಯಾವುದೇ ಸ್ಪರ್ಶ ಜ್ಞಾನವಿಲ್ಲದ ತಿಳಿ ಬಿಳಿ ಅಥವಾ ತಾಮ್ರ ಬಣ್ಣದ ಮಚ್ಚೆಗಳು ಕಾಣಿಸುವುದು, ಕೈಕಾಲುಗಳಲ್ಲಿ ಜೋಮು ಹಿಡಿದು ಸ್ಪರ್ಶ ಜ್ಞಾನವಿಲ್ಲದಿರುವುದು, ಕೈಕಾಲುಗಳಲ್ಲಿ ಹಾಗೂ ಮುಖದಲ್ಲಿ ಎಣ್ಣೆ ಸವರಿದಂತೆ ಹೊಳಪು ಇರುವುದು ರೋಗಲಕ್ಷಣವಾಗಿರುತ್ತದೆ. ಈ ರೋಗಲಕ್ಷಣಗಳು ಕಂಡುಬಂದಲ್ಲಿ ಹತ್ತಿರದ ಸರ್ಕಾರಿ ಆಸ್ಪತ್ರೆಯಲ್ಲಿ ಪರೀಕ್ಷಿಸಿಕೊಂಡು ರೋಗವನ್ನು ಬಹು ಔಷಧಿ ಚಿಕಿತ್ಸೆಯಿಂದ ಸಂಪೂರ್ಣವಾಗಿ ಗುಣಪಡಿಸಬಹುದೆಂದು ತಿಳಿಸಿದರು.

## ಮಾದಕಗಳ ಮಾರಾಟ: ಐದು ವರ್ಷ ಕಠಿಣ ಕಾರಾಗೃಹ ಶಿಕ್ಷೆ

ಮೈಸೂರು: ನಗರದ ಉದಯಗಿರಿ ಪೊಲೀಸ್ ಠಾಣೆಯ ಮಾದಕ ವಸ್ತು ಮಾರಾಟ ಪ್ರಕರಣದಲ್ಲಿ 2 ಆರೋಪಿಗಳಿಗೆ ನ್ಯಾಯಾಲಯದಿಂದ 5 ವರ್ಷಗಳ ಕಠಿಣ ಕಾರಾಗೃಹ ಶಿಕ್ಷೆ ಮತ್ತು ತಲಾ 50,000 ದಂಡ ವಿಧಿಸಿ ನ್ಯಾಯಾಲಯ ಆದೇಶಿಸಿದೆ.





ನಗರದ ಉದಯಗಿರಿ ಪೊಲೀಸ್ ಠಾಣಾ ಮೊ.ಸಂ46/2023 ಓಆಕಖ ಪ್ರಕರಣದಲ್ಲಿ ಆರೋಪಿಗಳಾದ ರಾಜೀವ್ ನಗರ ನಿವಾಸಿ ಮುದಸೀರ್ ಅಹಮದ್ ಅಲಿಯಸ್ ಮುದ್ದು ಬಿನ್ ಬಶೀರ್ ಅಹಮದ್(37) ಮತ್ತು ಮೊಹಮ್ಮದ್ ಇಮ್ರಾನ್ ಅಲಿಯಸ್ ಬಬನ್ ಅಮೀರ್ ಬಿನ್ ಲೇಟ್ ಮೊಹಮ್ಮದ್ ಇಸ್ಮಾಯಿಲ್(38)ಗೆ ಮಾದಕ ವಸ್ತು ಮಾರಾಟ ಮತ್ತು ಸಾಗಾಟ ಪ್ರಕರಣದಲ್ಲಿ ಮೈಸೂರು 7ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವು ಜ.30ರಂದು 5 ವರ್ಷಗಳ ಕಠಿಣ ಕಾರಾಗೃಹ ವಾಸ ಮತ್ತು ತಲಾ 50,000 ದಂಡ ವಿಧಿಸಿ ಶಿಕ್ಷೆ ಪ್ರಕಟಿಸಿದೆ.ದಂಡ ಕಟ್ಟಲು ವಿಫಲವಾದಲ್ಲಿ ಹೆಚ್ಚಿನ 1 ವರ್ಷ ಹೆಚ್ಚಿನ ಕಾರಾಗೃಹ ವಾಸ ವಿಧಿಸಿ ಆದೇಶಿಸಿದೆ. ಸದರಿ ಪ್ರಕರಣದ ತನಿಖೆಯನ್ನು ಉದಯಗಿರಿ ಪೊಲೀಸ್ ಇನ್ಸ್ಪೆಕ್ಟರ್ ಕೆ.ಎನ್.ಸುಧಾಕರ್ ನಡೆಸಿದ್ದು, ನ್ಯಾಯಾಲಯದಲ್ಲಿ ಪ್ರಕರಣವನ್ನು ಸರ್ಕಾರಿ ಅಭಿಯೋಜಕಿ ಎನ್.ಬಿ.ವಿಜಯಲಕ್ಷ್ಮಿ ನಡೆಸಿದ್ದಾರೆ.

## ನಾಳೆಯಿಂದ ಮಧ್ವ, ಪುರಂದರ ನಮನ

ಮೈಸೂರು: ಹರಿದಾಸ ಸಂಗೀತ ಸಾಹಿತ್ಯೋತ್ಸವ ಸಮಿತಿ ವತಿಯಿಂದ ಫೆ. 1 ರಿಂದ 9 ರವರೆಗೆ ಶಾರದಾ ವಿಲಾಸ ಶತಮಾನೋತ್ಸವ ಭವನದಲ್ಲಿ ಮಧ್ವ– ಪುರಂದರ ನಮನ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಸಂಸ್ಥಾಪಕ ಎಸ್. ರವಿಕುಮಾರ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಗಾನಸಿರಿ ವೇದಾಂತ ಲಹರಿ ಭಾಗ– 13 ರ ಅಂಗವಾಗಿ ಸಮಗ್ರ ಪುರಾಣ ದರ್ಶನ ಹೆಸರಿನಲ್ಲಿ ಈ ಕಾರ್ಯಕ್ರಮ ನಡೆಯಲಿದೆ. ಈ ವೇಳೆ ಪ್ರಸಿದ್ಧ 9 ಮಂದಿ ವಿದ್ವಾಂಸರಿಂದ ಜ್ಞಾನಾಮೃತ ಹಾಗೂ ಪ್ರಖ್ಯಾತ 18 ಗಾಯಕರಿಂದ ಗಾನಾಮೃತವಿರಲಿದೆ. ನಿತ್ಯ ಸಂಜೆ 5 ರಿಂದ ರಾತ್ರಿ 8.30 ರವರೆಗೆ ಇರಲಿದೆ ಎಂದರು. ಫೆ. 1 ರಂದು ವಿಷ್ಣುಪುರಾಣ ಮತ್ತು ವಾಮನ ಪುರಾಣ, 2 ರಂದು ಕೂರ್ಮಪುರಾಣ ಮತ್ತು ಮಾರ್ಕಾಂಡೇಯ ಪುರಾಣ, 3 ರಂದು ಮತ್ಸ?ಯ ಪುರಾಣ ಮತ್ತು ಬ್ರಾಹ್ಮ ಪುರಾಣ, 4 ರಂದು ನಾರದ ಪುರಾಣ ಮತ್ತು ಬ್ರಹ್ಮವೈವರ್ತಪುರಾಣ, 5 ರಂದು ಲಿಂಗಪುರಾಣ ಮತ್ತು ಬ್ರಹ್ಮಾಂಡ ಪುರಾಣ, 6 ರಂದು ಗರುಡ ಪುರಣಾ ಮತ್ತು ಅಗ್ನಿಪುರಾಣ, 8 ರಂದು ವರಾಹ ಪುರಾಣ ಮತ್ತು ಸ್ಕಂದಪುರಾಣ ವಿಷಯ ಇರಲಿದೆ ಎಂದು ಮಾಹಿತಿ ನೀಡಿದರು. ಖಜಾಂಚಿ ಜಯಶ್ರೀ ಇದ್ದರು.



ಎಚ್.ಡಿ.ಕೋಟೆ: ಅರಣ್ಯ ಮತ್ತು ವಿಹಾರ ಧಾಮಗಳ ಅಧ್ಯಕ್ಷರಾಗಿ ಪುನರಾಯ್ಕೆಯಾದ ಎಚ್.ಡಿ.ಕೋಟೆ ವಿಧಾನ ಸಭಾ ಕ್ಷೇತ್ರದ ಶಾಸಕ ಅನಿಲ್ ಚಿಕ್ಕಮಾದು ಅವರನ್ನು ದಿ.ಎಸ್.ಚಿಕ್ಕಮಾದು ಅಭಿಮಾನಿಗಳ ಬಳಗದ ಅಧ್ಯಕ್ಷ ಜಿನ್ನಹಳ್ಳಿ ರಾಜನಾಯಕ ಅಭಿನಂದಿಸಿದರು. ಮೀನುಗಾರಿಕೆ ಘಟಕದ ತಾಲೂಕು ಅಧ್ಯಕ್ಷ ಮಹೇಶ್ ನಾಯಕ, ಡಿಐಜಿ ರವಿಚನ್ನಣ್ಣನವರ್, ಡಿವೈಎಸ್ಪಿ ಆನಂದ್ ಸೇರಿದಂತೆ ಮತ್ತಿತರರಿದ್ದಾರೆ.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ಪಂಚಾಯಿತಿವರೆಗೂ ಮನ್ರೇಗಾ ಹೋರಾಟ: ಮಾಜಿ ಸಂಸದ ಉಗ್ರಪ್ಪ



ಮೈಸೂರು: ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ(ಮನ್ರೇಗಾ) ಮರುಸ್ಥಾಪನೆಗೆ ಒತ್ತಾಯಿಸಿ ಪಾರ್ಲಿಮೆಂಟ್ ನಿಂದ ಪಂಚಾಯಿತಿವರೆಗೂ ಹೋರಾಟ ನಡೆಸಲಾಗುವುದು. ಅದರ ಭಾಗವಾಗಿ ಫೆ.1ರ ಅಹೋರಾತ್ರಿ ಹೋರಾಟ ನಡೆಯಲಿದೆ ಎಂದು ಎಂದು ಕೆಪಿಸಿಸಿ ಉಪಾಧ್ಯಕ್ಷರಾದ ಮಾಜಿ ಸಂಸದ ವಿ.ಎಸ್.ಉಗ್ರಪ್ಪ ತಿಳಿಸಿದರು.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಶುಕ್ರವಾರ ಸತ್ಯಾಗ್ರಹದ ಪೋಸ್ಟರ್ ಬಿಡುಗಡೆ ಮಾಡಿ ಮಾತನಾಡಿದ ಅವರು, ಫೆ.1ರಂದು ನಗರದ ಪುರಭವನದ ಆವರಣದಲ್ಲಿ ಸಂಜೆ 7ರಿಂದ ಬೆಳಿಗ್ಗೆ 7ರವರೆಗೆ ಅಹೋರಾತ್ರಿ ಧರಣಿ ಸತ್ಯಾಗ್ರಹವನ್ನು ಹಮ್ಮಿಕೊಳ್ಳಲಾಗಿದೆ. 'ವಿಬಿ–ಜಿ ರಾಮ್–ಜಿ' ವಿರುದ್ಧ ಕಾಂಗ್ರೆಸ್ ರಾಷ್ಟ್ರವ್ಯಾಪಿ ಹೋರಾಟ ನಡೆಸುತ್ತಿದೆ. ಹೋರಾಟದ ಭಾಗವಾಗಿ ಮೈಸೂರಿನಲ್ಲಿ ಅಹೋರಾತ್ರಿ ಸತ್ಯಾಗ್ರಹ ಹಮ್ಮಿಕೊಂಡಿದ್ದೇವೆ. ಈ ಭಾಗದ ಸಚಿವ ಡಾ.ಎಚ್.ಸಿ.ಮಹದೇವಪ್ಪ, ಕೆ.ವೆಂಕಟೇಶ್ ಎಲ್ಲಾ ಹಂತದ ನಾಯಕರು ಭಾಗವಹಿಸಲಿದ್ದಾರೆ ಎಂದು ವಿವರಿಸಿದರು.

'ವಿಬಿ–ಜಿ ರಾಮ್–ಜಿ' ಕರಾಳ ಕಾನೂನು. ಈ ಕಾಯ್ದೆ ರೈತರು, ದಲಿತರು, ಅಲ್ಪಸಂಖ್ಯಾತರಿಗೆ ಅಪಮಾನ ಮಾಡಿದ್ದಾರೆ. ಮನ್ರೇಗಾ ಹೆಸರು ಬದಲಿಸಿರುವ ಕೇಂದ್ರದ ಎನ್‌ಡಿಎ ಸರ್ಕಾರ ಸ್ವಾತಂತ್ರ್ಯ ಹೋರಾಟದ ರೂವಾರಿ ಮಹಾತ್ಮ ಗಾಂಧೀಜಿಗೆ ಅವಮಾನ ಮಾಡಿದೆ. ನೆಹರೂ ಮತ್ತು ಗಾಂಧೀಜಿ ವ್ಯಕ್ತಿತ್ವಕ್ಕೆ ಧಕ್ಕೆ ತರಲು ಹೆಸರು ಬದಲಾವಣೆ ಮಾಡುತ್ತಿದ್ದಾರೆ. ಇಂತಹ ವೇಳೆ ಮುಖ್ಯಮಂತ್ರಿ ಸಿದ್ದರಾಮ್‌ಂಯು, ಡಿಸಿಎಂ ಡಿ.ಕೆ. ಶಿವಕುಮಾರ್ ಕರ್ನಾಟಕದ 6 ಸಾವಿರ ಗ್ರಾಪಂಗಳಿಗೆ ಮಹಾತ್ಮ ಗಾಂಧೀಜಿ ಹೆಸರು ನಾಮಕರಣ ವಾಡಿ ಗೌರವ ಸಲ್ಲಿಸುತ್ತಿದ್ದಾರೆ. ಒಂದು ಪಂಚಾಯಿತಿಯಲ್ಲಿ ಒಂದು ಕೋಟಿ ಎಂದರೂ ಆರು ಸಾವಿರ ಕೋಟಿ ರೂ. ಉದ್ಯೋಗವನ್ನು ಕಿತ್ತುಕೊಂಡಿದ್ದಾರೆ ಎಂದರು.

ಭ್ರಷ್ಟಾಚಾರ ತಡೆ ಕಾಯ್ದೆಗೆ ತಿದ್ದುಪಡಿ ಮಾಡಲಾಗಿದೆ ಎಂದು ಬಿಂಬಿಸುವ ಬಿಜೆಪಿ ನಾಯಕರು 10 ವರ್ಷಗಳ ಅವಧಿಯಲ್ಲಿ ಒಂದೇ ಒಂದು ಅಕ್ರಮ ಪತ್ತೆ ಹಚ್ಚದೇ ಮೌನವಾಗಿದ್ದದ್ದು ಏಕೆ?, ಆರ್‌ಟಿಜಿಎಸ್ ಮೂಲಕ ಲಂಚ ಪಡೆದ ಬಿ.ವೈ.ವಿಜಯೇಂದ್ರ ಭ್ರಷ್ಟಾಚಾರದ ಬಗ್ಗೆ ಮಾತನಾಡುವುದು ಹಾಸ್ಯಾಸ್ಪದವಾಗಿದೆ. ಭಾವನಾತ್ಮಕ ವಿಚಾರಗಳಿಂದ ದೇಶದಲ್ಲಿ ಗಲಭೆ ಸೃಷ್ಟಿಸಲು ಪ್ರಯತ್ನಿಸಿ, ಅದು ಸಾಧ್ಯವಾಗದಿದ್ದಕ್ಕೆ ಈಗ ನಿರುದ್ಯೋಗಿಗಳ ಉದ್ಯೋಗದ ಹಕ್ಕನ್ನು ಕಸಿಯುತ್ತಿದೆ. ಸ್ಥಳೀಯ ಆಡಳಿತ ಗ್ರಾಮ ಪಂಚಾಯಿತಿಗಳನ್ನು ತನ್ನ ಹಿಡಿತಕ್ಕೆ ತೆಗೆದುಕೊಳ್ಳಲು ಕೇಂದ್ರ ಸರ್ಕಾರ ಈ ಕಾಯ್ದೆಯನ್ನು ರೂಪಿಸಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.ಸ್ವಾತಂತ್ರ್ಯನಂತರದ ಕೇಂದ್ರ ಆಡಳಿತದ ಸರ್ಕಾರದ ಒಟ್ಟು ಸಾಲ 54 ಸಾವಿರ ಕೋಟಿ ಸಾಲ ಇದ್ದದ್ದು ಪ್ರಧಾನಿ ನರೇಂದ್ರಮೋದಿಯವರ ಆಡಳಿತದ ಬಳಿಕ 185ಲಕ್ಷ ಕೋಟಿ ಏರಿಕೆಯಾಗಿದೆ. ಇಷ್ಟೊಂದು ಹಣ ಬಳಕೆ ಮಾಡಿರುವ ನೀವು ರಾಷ್ಟ್ರದಲ್ಲಿ ಒಂದು ಗುರುತರವಾದ ಸಾಧನೆ ಏನೂ ಮಾಡಿದ್ದೀರಿ. ಡ್ಯಾಂ ಕಟ್ಟಿದ್ದೀರಾ ಅಥವಾ ಕಾಂಗ್ರೆಸ್ ಮಾಡಿರುವಂತೆ ಯಾವುದಾದರೂ ಒಂದು ಜನಪರ ಯೋಜನೆ ಜಾರಿಗೊಳಿಸಿದ್ದೀರಾ ಎಂದು ಪ್ರಶ್ನಿಸಿದರು. 10 ಗ್ರಾಮ ಚಿನ್ನ 1ಲಕ್ಷ 1 ಕೆಜಿ ಬೆಳ್ಳಿ ನಾಲ್ಕು ಲಕ್ಷ ಡಿಸೆಲ್, ಪೆಟ್ರೋಲ್ ಬೆಲೆಯೂ ಸಾಕಷ್ಟು ಏರಿಕೆ ಕಂಡಿದಿದೆ. ಇವರ ಅವಧಿಯಲ್ಲಿ ಯಾವುದರ ಬೆಲೆ ಇಳಿಸಿದ್ದಾರೆಂದು ಹೇಳಲಿ ಎಂದರು. ಕಾಂಗ್ರೆಸ್ ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯಕುವಾರ್, ನಗರಾಧ್ಯಕ್ಷ ಆರ್.ಮೂರ್ತಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಅರುಣ್‌ಕುವಾರ್, ಮುಖಂಡರಾದ ಎಂ.ಶಿವಣ್ಣ, ನಾಗೇಶ್, ರಮೇಶ್, ರವಿಪ್ರಕಾಶ್, ಶಿವಪ್ರಸಾದ್, ಈಶ್ವರ್ ಚಕ್ಕಡಿ, ಕೆ.ಮಹೇಶ್, ಗಿರೀಶ್ ಹಾಜರಿದ್ದರು.

### ಬ್ಯಾಲೆಟ್ ಪೇಪರ್‌ನಲ್ಲಿ ಬನ್ನಿ

ಮತಕ್ಕಾಗಿ ಸಮಾಜವನ್ನು ಒಡೆದಾಳುವ ಪ್ರಯತ್ನ ಮಾಡಿದರು. ದೇಶದ ಜನರಿಗೆ ಮತಯಂತ್ರಗಳ ಮೇಲೆ ನಂಬಿಕೆ ಇಲ್ಲವಾಗಿದೆ. ಬಿಜೆಪಿ ಜನಾದೇಶದ ಮೇಲೆ ಬಂದಿಲ್ಲ ಎಲ್ಲಾ ಕಡೆಗಳಲ್ಲಿಯೂ ವಾಮಾಮಾರ್ಗದ ಮೂಲಕವೇ ಅಧಿಕಾರಕ್ಕೆ ಬಂದಿದ್ದಾರೆ. ಬ್ಯಾಲೆಟ್ ಪೇಪರ್ ಮೂಲಕ ಚುನಾವಣೆ ಗೆಲ್ಲಲಿ ನೋಡೋಣ. ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಈ ಮಸೂದೆಯಲ್ಲಿ ರಾಮನ ಹೆಸರೂ ಇಲ್ಲ. ರಾಮನ ಹೆಸರಿದ್ದರೆ ಸಾರ್ವಜನಿಕ ಬದುಕಿನಿಂದ ನಿವೃತ್ತಿ ತೆಗೆದುಕೊಳ್ಳುತ್ತೇನೆ. ನನ್ನ ಸವಾಲನ್ನು ಬಿಜೆಪಿಯವರು ಸ್ವೀಕರಿಸಬೇಕು. ವಿಬಿ ಜಿ ರಾಮ್ ಜಿ ಕಾಯ್ದೆ ವಿಕಸಿತ ಭಾರತ ಕಾನೂನು ಅಲ್ಲ. ನಾಥೂರಾಮ್ ಗೋಡ್ಸೆ ಆಕ್ಟ್ ಆಗಿದೆ. ಹೀಗಾಗಿ ಗಾಂಧೀ(ಕಾಂಗ್ರೆಸ್) ವರ್ಸಸ್ ಗೋಡ್ಸೆ(ಬಿಜೆಪಿ) ಹೋರಾಟ ಶುರುವಾಗಿದೆ ಎಂದು ಉಗ್ರಪ್ಪ ಕಿಡಿಕಾರಿದರು.

## ಗ್ಯಾರಂಟಿ ಬಡವರ ನೆಮ್ಮದಿಯ ಜೀವನಕ್ಕೆ ಸಹಕಾರಿ

ಕೆ.ಆರ್.ಪೇಟೆ,ರಾಜ್ಯದ ನಮ್ಮ ಕಾಂಗ್ರೆಸ್ ನೇತೃತ್ವದ ಸರ್ಕಾರವು ಅಸ್ತಿತ್ವಕ್ಕೆ ಬಂದ ಮೇಲೆ ಸಿ.ಎಂ.ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಅನುಷ್ಠಾನಕ್ಕೆ ತರಲಾಗಿರುವ ಗ್ಯಾರಂಟಿ ಯೋಜನೆಗಳಿಂದ ಜನರ ಆರ್ಥಿಕ ಜೀವನ ಮಟ್ಟದಲ್ಲಿ ಗಣನೀಯ ಸಾಧನೆಯಾಗಿದೆ. ಐದೂ ಗ್ಯಾರಂಟಿ ಯೋಜನೆಗಳು ಬಡವರಿಗೆ ನೆಮ್ಮದಿಯ ಜೀವನಕ್ಕೆ ಸಹಕಾರಿಯಾಗಿವೆ ಎಂದು ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಅಗ್ರಹಾರಬಾಚಹಳ್ಳಿ ಎ.ಬಿ.ಕುಮಾರ್ ಹೇಳಿದರು. ಪಟ್ಟಣದ ತಾಲ್ಲೂಕು ಪಂಚಾಯತ್ ಸಭಾಂಗ ಣದಲ್ಲಿ ನಡೆದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾ ಡಿದರು. ಬಳಿಕ ಮಾತನಾಡಿದ ಎ.ಬಿ.ಕುಮಾರ್ ನಮ್ಮ ಕರ್ನಾಟಕ ಸರ್ಕಾರವು ಗ್ಯಾರಂಟಿ ಯೋಜ ನೆಗಳಿಗೆ ವರ್ಷಕ್ಕೆ ಸುಮಾರು 60ಸಾವಿರ ಕೋಟಿ ರೂಪಾಯಿಗಳನ್ನು ವೆಚ್ಚ ಮಾಡುತ್ತಿದೆ. ಇದೂವರೆವಿಗೂ ಸುಮಾರು 130ಸಾವಿರ ಕೋಟಿ ರೂಪಾಯಿಗಳನ್ನು ವೆಚ್ಚ ಮಾಡಲಾಗಿದೆ. ಎಂದರು.ಚೆಸ್ಕಾಂ ಕಾರ್ಯಪಾಲಕ ಇಂಜಿನಿಯರ್ ಪುಟ್ಟಸ್ವಾಮೀಗೌಡ ಮಾತನಾದರು.



ಸಭೆಯಲ್ಲಿ ತಾಲ್ಲೂಕು ಆಹಾರ ಇಲಾಖೆಯ ಶಿರಸ್ತೇದಾರ್ ನಟರಾಜ್, ಚೆಸ್ಕಾಂ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಪುಟ್ಟಸ್ವಾಮೀಗೌಡ, ತಾಲ್ಲೂಕು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಿಡಿಪಿಓ ವಿದ್ಯಾವತಿ, ಜಿಲ್ಲಾ ಉದ್ಯೋಗಾಧಿಕಾರಿ ವಿ.ನವೀನ್‌ಕುಮಾರ್, ಡಿಪೋ ಟ್ರಾಫಿಕ್ ಇನ್ಸ್ಪೆಕ್ಟರ್ ಗವಿಸಿದ್ದಪ್ಪ ಅವರು ತಮ್ಮ ತಮ್ಮ ಇಲಾಖೆಯ ಪ್ರಗತಿಯ ವರದಿಯನ್ನು ಮಂಡಿಸಿದರು. ಸಭೆಯಲ್ಲಿ ತಾಲೂಕು ಪಂಚಾಯ್ತಿ ಸಹಾಯಕ ಲೆಕ್ಕಾಧಿಕಾರಿ ಶಂಕರ್, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಸದಸ್ಯರಾದ ಮೆಣಸ ಸಿ.ಆರ್.ಪಿ. ಕುಮಾರ್, ಬೂಕನಕೆರೆ ರೂಪಾಚಂದ್ರಶೇಖರ್, ಬೊಮ್ಮೇನಹಳ್ಳಿ ಲತಾಹರೀಶ್, ಕನಕದಾಸನಗರ ಶಿವಮ್ಮ, ಕೆ.ಎಸ್.ಆರ್.ಟಿ.ಸಿ ಶಿವಣ್ಣ, ಇದ್ದರು.

## ಕಲಿಕಾ ಹಬ್ಬವು ಭಾಷಾ ಕೌಶಲ್ಯಗಳಿಗೆ ಸಂಬಂಧಿಸಿದೆ

ಚಾಮರಾಜನಗರ: ಎಫ್‌ಎಲ್‌ಎನ್ ಆಧಾರಿತ ಕಲಿಕಾ ಹಬ್ಬವು ಬಾಷಾ ಕೌಶಲ್ಯಗಳಿಗೆ ಸಂಬಂಧಪಟ್ಟಿದೆ ಎಂದು ಬಿಆರ್ ಪಿ ರಮೇಶ್ ತಿಳಿಸಿದರು.



ತಾಲೂಕಿನ ಹೊಂಗನೂರು ಗ್ರಾಮದ ಅಂಬೇಡ್ಕರ್ ಬಡಾವಣೆಯ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಸಮೂಹ ಸಂಪನ್ಮೂಲ ಕೇಂದ್ರದಲ್ಲಿ ಜಿಲ್ಲಾ ಪಂಚಾಯತ್, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿಗಳ ಕಚೇರಿ, ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಶುಕ್ರವಾರ ನಡೆದ ಕ್ಲಸ್ಟರ್ ಹಂತದ ಎಫ್‌ಎಲ್‌ಎನ್ ಆಧಾರಿತ ಕಲಿಕಾ ಹಬ್ಬವನ್ನು ಉದ್ಘಾಟಿಸಿ ಮಾತನಾಡಿದ ಅವರು ಎಫ್ ಎಲ್ ಎನ್ ಕಲಿಕಾ ಹಬ್ಬವು ಹಬ್ಬದ ರೀತಿ ನಡೆಯುತ್ತಿದೆ. ಈ ಕಲಿಕಾ ಹಬ್ಬದ ಉದ್ದೇಶವೇನೆಂದರೆ ಮಕ್ಕಳು ಕಲಿಕೆಯ ಜೊತೆಗೆ ಸಂತೋಷದಾಯಕ ಕಲಿಕೆಯನ್ನುಂಟು ಮಾಡುವುದರ ಜೊತೆಗೆ ಮಕ್ಕಳಲ್ಲಿ ಬಾಷಾ ಕೌಶಲ್ಯ ಹಾಗೂ ಗಣಿತದ ಮೂಲ ಕ್ರಿಯೆಗಳನ್ನು ವೃದ್ಧಿಸುವಂತಹ ಕೆಲಸ ನಿರಂತರವಾಗಿ ಸರ್ಕಾರಿ ಶಾಲೆಗಳಲ್ಲಿ ನಡೆಯುವುದಾಗಿದೆ. 1ರಿಂದ 5ನೇ ತರಗತಿಯವರೆಗೆ ಇರುವಂತಹ ಕಲಿಕಾ ಪರಿಕರಗಳನ್ನು ಕಲಿಕಾ ಫಲ ಆಧಾರಿತವಾಗಿ ಚಟುವಟಿಕೆ ನಿರಂತರವಾಗಿ ನಡೆಯುತ್ತದೆ. ಈ ಚಟುವಟಿಕೆಯನ್ನು ಕ್ಲಸ್ಟರ್ ಹಂತಗಳಲ್ಲಿ ಪ್ರತಿಭಾನ್ವಿತ ವಿದ್ಯಾರ್ಥಿಗಳು ತಮ್ಮ ಉತ್ತಮ ಪ್ರದರ್ಶನವನ್ನು ನೀಡಿದರೆ ಆ ಮಕ್ಕಳಿಗೆ ಒಂದು ವೇದಿಕೆ ಕಲ್ಪಿಸಿ ಕೊಡುವುದಾಗಿದೆ. ಈ ಕಲಿಕಾ ಹಬ್ಬವು 7 ವಿವಿಧ ಹಂತಗಳಲ್ಲಿ ನಡೆಯುತ್ತದೆ. ಈ ಕಲಿಕಾ ಹಬ್ಬದಲ್ಲಿ 1ರಿಂದ 100 ಮಕ್ಕಳು ಭಾಗವಹಿಸಿ ಉತ್ತಮ ಪ್ರದರ್ಶನ ನೀಡಿದ ಮಕ್ಕಳಿಗೆ ಬಹುಮಾನ ನೀಡಲಾಗುತ್ತದೆ ಎಂದು ತಿಳಿಸಿದರು. ಇದೆ ವೇಳೆ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ರವಿರಾಮ್, ಸದಸ್ಯ ಚಾಮದಾಸಯ್ಯ, ಎಸ್ ಡಿ ಎಂಸಿ ಅಧ್ಯಕ್ಷ ಜಯರಾಜು ಹಾಗೂ ಸಾವಿತ್ರಿಬಾಯಿ ಪುಲೆ ಸಂಘದ ಜಿಲ್ಲಾ ಅಧ್ಯಕ್ಷೆ ಭವಾನಿದೇವಿ ಮಾತನಾಡಿದರು. ಇದಕ್ಕೂ ಮುಂಚೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮಕ್ಕಳಿಂಥ ಹಾಲರಿವೆ ಉತ್ಸವ ಮೆರವಣಿಗೆ ನಡೆಯಿತು. ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷ ರವಿರಾಮ್, ಸದಸ್ಯ ಚರ್ಮದಾಸಯ್ಯ, ಎಸ್ ಡಿ ಎಂ ಸಿ ಅಧ್ಯಕ್ಷರಾದ ಜಯರಾಜು, ಭಾಗ್ಯಮ್ಮ, ಸಾವಿತ್ರಿಬಾಯಿ ಪುಲೆ ಸಂಘದ ಜಿಲ್ಲಾಧ್ಯಕ್ಷೆ ಭವಾನಿದೇವಿ, ಹೊಂಗನೂರು ಕ್ಲಸ್ಟರ್ ನ ಸಿ ಆರ್ ಪಿ ಶಾಂತಮೂರ್ತಿ, ಮುಖ್ಯ ಶಿಕ್ಷಕರಾದ ಗೀತಾ. ಎಸ್, ಶ್ಯಾಂ ಸುಂದರ್, ನಿಂಗರಾಜು, ರಂಗಸ್ವಾಮಿ, ಮಹದೇವಸ್ವಾಮಿ, ಶಿಕ್ಷಕರಾದ ಶೀಲಾದೇವಿ, ನಂದಿನಿ. ಎ.ಎನ್, ಅನಿತಾ. ವೈ.ಬಿ, ಮಂಜುನಾಥ್ ಸ್ವಾಮಿ, ರವಿಕುಮಾರ್, ಜಯಲಕ್ಷ್ಮಿ, ಮಾದೇಶ್, ಜಯಪ್ರಕಾಶ್, ಗ್ರಾಮದ ಮುಖಂಡರು ಪೋಷಕರು ವಿದ್ಯಾರ್ಥಿಗಳು ಹಾಜರಿದ್ದರು.

## ಕುಸ್ತಿ ಪಟು ಟೈಗರ್ ಬಾಲಾಜಿ ಜೆಟ್ಟಿ ವಿಧಿವಶ

ಮೈಸೂರು: ನಗರದ ಹೆಸರಾಂತ ಕುಸ್ತಿ ಪಟು ಟೈಗರ್ ಬಾಲಾಜಿ ಜೆಟ್ಟಿ (67) ನಿಧನರಾದರು.



ನಗರದ ಸುಣ್ಣದಕೇರಿ ನಿವಾಸಿಯಾಗಿರುವ ಇವರು ಕುಸ್ತಿ ಪಂದ್ಯಗಳಲ್ಲಿ ರಾಜ್ಯ ಮತ್ತು ರಾಷ್ಟ್ರೀಯ ಮಟ್ಟದಲ್ಲಿ ಸ್ಪರ್ಧಿಸಿ ಗೆದ್ದು ಖ್ಯಾತಿ ಗಳಿಸಿದ್ದರು. ಕುಸ್ತಿ ಆಖಾಡದಲ್ಲಿ ತಮ್ಮ ಕುಸ್ತಿ ನೈಪುಣ್ಯತೆಯಿಂದ ಅಸಂಖ್ಯಾತ ಕುಸ್ತಿ ಪ್ರಿಯರ ಪಾಲಿಗೆ ಟೈಗರ್ ಎಂದೇ ಗುರುತಿಸಿಕೊಂಡಿದ್ದರು.

350ಕ್ಕೂ ಕುಸ್ತಿ ಪಂದ್ಯಗಳಲ್ಲಿ ಪಾಲ್ಗೊಂಡು ಗಮನ ಸೆಳೆದಿದ್ದರು.

ಪ್ರಸ್ತುತ ಮೈಸೂರು ಅರಮನೆಯಲ್ಲಿ ನಾಡಹಬ್ಬ ದಸರಾ ಉತ್ಸವದ ಕೊನೆಯ ದಿನ ನಡೆಯುವ ವಜ್ರಮುಷ್ಠಿ ಕಾಳಗಕ್ಕೆ ಮೈಸೂರಿನ ಉಸ್ತಾದ್ ಆಗಿ ಪೈಲ್ವಾನರನ್ನು ತರಬೇತಿಗೊಳಿಸುತ್ತಿದ್ದರು. ಕಳೆದ ನಾಲ್ಕು ದಿನಗಳ ಹಿಂದೆ ಅನಾರೋಗ್ಯ ನಿಮಿತ್ತ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದರು. ಚಿಕಿತ್ಸೆ ಫಲಕಾರಿಯಾಗದೆ ನಿಧನರಾದರು. ಇವರ ನಿಧನಕ್ಕೆ ಜೆಟ್ಟಿ ಜನಾಂಗದ ಹಲವಾರು ಮುಖಂಡರು ಸಂತಾಪ ಸೂಚಿಸಿದ್ದಾರೆ. ಇಂದು ಸಂಜೆ ಚಾಮುಂಡಿ ಬೆಟ್ಟ ತಪ್ಪಲಿನ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನೆರವೇರಿತು.

### ಆಕಾಮಿಯ ಜಿಲ್ಲಾ ಸಂಯೋಜಕ ಸುಭಾಷ್ ಮಾಡ್ರಳ್ಳಿ ಮಾಹಿತಿ

## ನಾಳೆ ಕರ್ನಾಟಕ ಪ್ರತಿಭಾ ಆಕಾಡೆಮಿಯಿಂದ ಪ್ರತಿಭಾ ಪುರಸ್ಕಾರ

ಚಾಮರಾಜನಗರ, ಮಾನವ ಬಂಧುತ್ವ ವೇದಿಕೆಯ ಅಂಗ ಸಂಸ್ಥೆಯಾದ ಕರ್ನಾಟಕ ಪ್ರತಿಭಾ ಅಕಾಡೆಮಿ ಜಿಲ್ಲಾ ಘಟಕದ ವತಿಯಿಂದಎಸ್‌ಎಸ್‌ಎಲ್ ಸಿ ಹಾಗೂ ಪಿಯುಸಿ ಯಲ್ಲಿ ಹೆಚ್ಚು ಅಂಕ ಪಡೆದ 50 ಮಕ್ಕಳಿಗೆ ಫೆ. 1 ರಂದು ಭಾನುವಾರ ಪ್ರತಿಭಾ ಪುರಸ್ಕಾರ ಹಮ್ಮಿಕೊಳ್ಳಲಾಗಿದೆ ಎಂದು ಆಕಾಮಿಯ ಜಿಲ್ಲಾ ಸಂಯೋಜಕ ಸುಭಾಷ್ ಮಾಡ್ರಳ್ಳಿ ಹೇಳಿದರು. ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ಅಂದು ನಗರದ ಸತ್ತಿರಸ್ತೆ ಸಿದ್ದಾರ್ಥ ಚಿತ್ರಮಂದಿರದ ಹತ್ತಿರವಿರುವ ಕಾಮಧೇನು ಕನ್ವೆನ್ಷನ್ ಹಾಲ್ ನಲ್ಲಿ ನಲ್ಲಿ ಬೆಳಿಗ್ಗೆ 11 ಗಂಟೆಗೆ ನಡೆಯುವ ಸಮಾರಂಭವನ್ನು ಎಂಎಸ್‌ಐಎಲ್ ಅಧ್ಯಕ್ಷರು, ಶಾಸಕರಾದ ಸಿ.ಪುಟ್ಟರಂಗಶೆಟ್ಟಿ ಉದ್ಘಾಟಿಸಲಿದ್ದಾರೆ.



ಕರ್ನಾಟಕ ಪ್ರತಿಭಾ ಆಕಾಡೆಮಿ ರಾಜ್ಯ ಸಂಚಾಲಕ ಪ್ರೋ ಎ.ಬಿ.ರಾಮಚಂದ್ರಪ್ಪ, ಜಿಲ್ಲಾಸಂಚಾಲಕ ಸುಭಾಷ್ ಮಾಡ್ರಹಳ್ಳಿ ಅಧ್ಯಕ್ಷತೆ ವಹಿಸಲಿದ್ದಾರೆ. ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಡಾ.ಅಶ್ವಿನಿ ಮುಖ್ಯಭಾಷಣ ಮಾಡುವವರು. ಮೈಸೂರು ವಿಭಾಗೀಯ ಸಂಚಾಲಕ ದ್ಯಾವಪ್ಪನಾಯಕ ಪುರಸ್ಕೃತ ವಿದ್ಯಾರ್ಥಿಗಳಿಗೆ ಪ್ರಶಸ್ತಿ ವಿತರಿಸಲಿದ್ದಾರೆ. ಮುಖ್ಯ ಅತಿಥಿಯಾಗಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಹೆಚ್.ವಿ.ಚಂದ್ರು, ಸಮಾಜಸೇವಕ ಶ್ರೀನಿಧಿ, ಕರ್ನಾಟಕ ರಾಜ್ಯ ಗ್ರಾಮ ಪಂಚಾಯತಿ ಸದಸ್ಯರ ಮಹಾ ಒಕ್ಕೂಟದ ಜಿಲ್ಲಾಧ್ಯಕ್ಷ ಕೆಂಪರಾಜು, ಜಿ.ಪಂ.ಮಾಜಿ ಸದಸ್ಯ ಎಸ್. ಸೋಮನಾಯಕ ಅರಕಲವಾಡಿ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಪು.ಶ್ರೀನಿವಾಸನಾಯಕ, ಅಹಿಂದ ಯುವ ಘಟಕ ದ ರಾಜ್ಯಾಧ್ಯಕ್ಷ ಮಹೇಶ್ ಹಳೇಪುರ, ಜಿಲ್ಲಾ ಕೆಡಿಪಿ ಸದಸ್ಯ ಸೈಯದ್ ಮುಸಾಯಿಬ್, ಕಾಂಗ್ರೆಸ್ ಹಿಂದುಳಿದ ವರ್ಗಗಳ ಪ್ರಧಾನ ಕಾರ್ಯದರ್ಶಿ ಕೆ.ಆರ್.ಮದನ್ ಕುಮಾರ್, ಸಮಾಜಸೇವಕರಾದ ಗಿರೀಶ್ ಬಾಬು, ಕಿರಣ್ ಎಸ್ ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಜಿಲ್ಲೆಯ ಪ್ರತಿ ತಾಲೂಕಿನಲ್ಲಿ ಸಮುದಾಯವಾರು ಅತಿ ಹೆಚ್ಚು ಅಂಕಪಡೆದ ಎಸ್‌ಎಸ್‌ಎಲ್ ಸಿಯಲ್ಲಿ 5 ವಿದ್ಯಾರ್ಥಿಗಳು ಪಿಯುಸಿ ಯಲ್ಲಿ 5 ವಿದ್ಯಾರ್ಥಿಗಳಿಗೆ ಒಟ್ಟು 50 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುತ್ತದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಕರ್ನಾಟಕ ಪ್ರತಿಭಾ ಅಕಾಡೆಮಿಯ ಗುಂಡ್ಲುಪೇಟೆ ತಾಲೂಕು ಸಂಚಾಲಕ ಆರ್.ಸೋಮಣ್ಣ, ಕೊಳ್ಳೇಗಾಲ ತಾಲೂಕು ಅಧ್ಯಕ್ಷ ಸುನೀಲ್, ಯಳಂದೂರು ತಾಲ್ಲೂಕು ಅಧ್ಯಕ್ಷ ಸುಂದರ್ ಕಲಿವೀರ್, ಜಿಲ್ಲಾ ಮಹಿಳಾ ಸಂಚಾಲಕಿ ಶಾಂತಕುಮಾರಿ ಹಾಜರಿದ್ದರು.

# ಅಕ್ರಮ ನಿವೇಶನಗಳ ವಾಪಾಸ್ ಪಡೆಯದಿದ್ದರೆ ಹೋರಾಟ

ಮೈಸೂರು: ರಾಜ್ಯ ಸರ್ಕಾರ ಮತ್ತು ಮೈಸೂರು ಅಭಿವೃದ್ಧಿ ಪ್ರಾಧಿಕಾರ ಶೇ.50:50ರಲ್ಲಿನ ಅಕ್ರಮ ನಿವೇಶನಗಳನ್ನು ಕೂಡಲೇ ವಶಕ್ಕೆ ಪಡೆದುಕೊಳ್ಳದಿದ್ದರೆ ಮುಂದೆ ಉಗ್ರ ಹೋರಾಟ ಮಾಡಲಾಗುವುದು ಎಂದು ರಾಜ್ಯ ಬಿಜೆಪಿ ಹಿಂದುಳಿದ ವರ್ಗಗಳ ಮೋರ್ಚಾದ ಅಧ್ಯಕ್ಷ ರಘು ಕೌಟಿಲ್ಯ ಹೇಳಿದರು.

ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಮುಡಾದಲ್ಲಿ ನಡೆದಿರುವ ಹಗರಣ ಕರ್ನಾಟಕ ಕಂಡ ಬಹುದೊಡ್ಡ ಹಗರಣವಾಗಿದೆ.

ಇದೊಂದು ಕರಾಳ ಅಧ್ಯಾಯವೆನಿಸಿದೆ. ಬೇಲಿಯೇ ಎದ್ದು ಹೊಲ ಮೇಯ್ದಂತೆ ನಿವೇಶನಗಳ ಲೂಟಿಯಾಗಿದೆ. ಪ್ರಸ್ತುತ ವ್ಯವಸ್ಥೆಯಲ್ಲಿ ವಿವಿಧ ಆಯಾಮಗಳಲ್ಲಿ ತನಿಖೆ ನಡೆಯುತ್ತಿದೆ. ಸಿಎಂ ಸಿದ್ದರಾಮಯ್ಯ ಅವರು ಆಗಿರುವ ಪ್ರಮಾದವನ್ನು ಒಪ್ಪಿಕೊಂಡು ನಿವೇಶನಗಳನ್ನು ವಾಪಸ್ ನೀಡಿದರು. ಆ ಬಳಿಕ ಮುಡಾ ಬದಲು ಮೈಸೂರು ಅಭಿವೃದ್ಧಿ ಪ್ರಾಧಿಕಾರ ಎಂದು ಮಾಡಿದ್ದಾರೆಂದರು.

ಆದರೆ ಎಂಡಿಎ ಕೂಡ ತನಗೆ ಸೇರಿದ ಆಸ್ತಿಯನ್ನು ರಕ್ಷಿಸಿಕೊಳ್ಳಲು ಮುಂದಾಗಿಲ್ಲ. ಕಬಳಿಕೆಯಾಗಿರುವ ನಿವೇಶನಗಳನ್ನು ವಶಕ್ಕೆ ಪಡೆಯಲು ಎಂಡಿಎ ಹಾಗೂ ರಾಜ್ಯ ಸರ್ಕಾರ ಮುಂದಾಗಿಲ್ಲ. ಈ ಕೂಡಲೇ ನಿವೇ ಶನಗಳನ್ನು ವಶಕ್ಕೆ ಪಡೆಯದಿದ್ದರೆ ಮತ್ತೆ ಹೋರಾಟ ಆರಂಭಿಸುವುದರ ಜೊತೆಗೆ ನ್ಯಾಯಾಲಯದ ಮೊರೆ ಹೋಗುತ್ತೇವೆ. ಈ ಕೂಡಲೇ ಎಂಡಿಎ ಜಾಹಿರಾತು ಹೊರಡಿಸಬೇಕು. ಅಕ್ರಮವಾಗಿ ನಿವೇಶನಗಳನ್ನು ಖರೀದಿ ಮಾಡದಂತೆ ಜಾಹೀರಾತು ಮೂಲಕ ಜನರಿಗೆ ತಿಳಿಸಬೇಕು. ಎಂಡಿಎಗೆ ಸೇರಿರುವ ನಿವೇಶಗಳಲ್ಲಿ ನಾಮಫಲಕಗಳನ್ನು ಅಳವಡಿಸಬೇಕೆಂದು ಆಗ್ರಹಿಸಿದರು.

ಈ ಸಂಬಂಧ ಈಗಾಗಲೇ ಜಾರಿ ನರ?ದೇಶ ನಾಲಯ (ಇಡಿ), ಲೋಕಾಯುಕ್ತ ತನಿಖೆ ನಡೆಸುತ್ತಿದೆ. ನ್ಯಾಯಮರ?ತಿ ದೇಸಾಯಿ ಆಯೋಗ ವರದಿಯನ್ನು ರ?ಕಾರಕ್ಕೆ ಸಲ್ಲಿಸಿದೆ. ಜಾರಿ ನರ?ದೇಶನಾಲಯ ನೂರಾರು ನಿವೇಶನಗಳನ್ನು ಈಗಾಗಲೇ ಮುಟ್ಟುಗೋಲು ಹಾಕಿ ಕೊಂಡು ಹಿಂದಿನ ಆಯುಕ್ತ ದಿನೇಶ್ ಕುಮಾರ್ ರನ್ನು ಬಂಧಿಸಿ ತನಿಖೆ ಮುಂದುವರಿಸಿದೆ. ಲೋಕಾಯುಕ್ತ ತನಿಖೆ ನಂಬಿಕೆಯನ್ನು ಕಾಯ್ದುಕೊಳ್ಳುವಲ್ಲಿ ವಿಫಲವಾ ಗುತ್ತದೆ. ಅಧಿಕಾರಸ್ಥರನ್ನು ರಕ್ಷಿಸುವುದಕ್ಕೆ ಆದ್ಯತೆ ನೀಡಿ, ತನಿಖೆ



ಕೈಗೆತ್ತಿಕೊಂಡಿದೆ ಎಂದರು.

ಅಂದಾಜಿನ ಪ್ರಕಾರ 5000 ಕ್ಕೂ ಹೆಚ್ಚು ನಿವೇಶನಗಳು ನೀತಿ ನಿಯಮಾವಳಿಗಳನ್ನು ಗಾಳಿಗೆ ತೂರಿ ಸ್ವೇಚ್ಛಾಚಾರವಾಗಿ ಹಂಚಿಕೆ ಮಾಡಲಾದ ಶೇ 50:50 ರ ಅನುಪಾತದ ನಿವೇಶನಗಳು ಪ್ರಾಧಿಕಾರದಲ್ಲಿ ರ?ಷಾನುಗಟ್ಟಲೆಯಿಂದ ನಿವೇಶನಕ್ಕಾಗಿ ರ?ಜಿ ಸಲ್ಲಿಸಿ ಕಾಯುತ್ತಿದ್ದ ನಿವೇಶನ ರಹಿತರ ಪಾಲಾಗಬೇಕಿತ್ತು. ಆದರೆ ವಿರ?ಯಾಸವೆಂದರೆ ?ಬೇಲಿಯೇ ಎದ್ದು ಹೊಲ ಮೇಯ್ದಂತೆ? ಪ್ರಾಧಿಕಾರದ ಇಬ್ಬರು ಆಯುಕ್ತರು ನಡೆಸಿದ ದರೋಡೆಕೋರ ತನವನ್ನು ನಾಚಿಸುವ ನಿವೇಶನಗಳ ಅಕ್ರಮ ಮಂಜೂರಾತಿ ಹಾಗೂ ಶುಲ್ಕ ರಹಿತ ಮಾರಾಟ ಪ್ರಕ್ರಿಯೆ ನಡೆಸಿದ್ದಾರೆ. ಈ ಹಿನ್ನೆಲೆಯಲ್ಲಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರವನ್ನು ಮೈಸೂರು ಅಭಿವೃದ್ಧಿ ಪ್ರಾಧಿಕಾರವಾಗಿ ಪರಿರ?ತಿಸಿ, ಮೈಸೂರು ನಗರದ ಅಭಿವೃದ್ಧಿಗೆ ಹಾಗೂ ಅಭಿವೃದ್ಧಿ ಪ್ರಾಧಿಕಾರದ ನಿವೇಶನಗಳು ಹಾಗೂ ಆಸ್ತಿಗೆ ಸೂಕ್ತ ರಕ್ಷಣೆ ಹಾಗೂ ಪಾರರ?ಶಕವಾಗಿ ನಿವೇಶನಗಳ ವಿತರಣೆಗೆ ಒಂದು ಹೊಸ ಮುನ್ನುಡಿ ಬರೆಯಲಾಗಿದೆ. ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸ್ಥಾನದಲ್ಲಿ ತಾವು ಕರಯ ನರವಹಿಸುತ್ತಿದ್ದೀರಿ. ಆದರೆ ಪ್ರಾಧಿಕಾರದ ಸಾವಿರಾರು ಕೋಟಿ ಬೆಲೆಬಾಳುವ ನಿವೇಶನಗಳನ್ನು ಮರಳಿ ಪ್ರಾಧಿ ಕಾರಕ್ಕೆ ವಾಪಾಸು ಪಡೆಯುವ ನಿಟ್ಟಿನಲ್ಲಿ ಅದನ್ನು ಮುಟ್ಟುಗೋಲು ಹಾಕಿಕೊಳ್ಳಲು ಈವರೆವಿಗೂ ನೀವು ಯಾವುದೇ ಹೆಜ್ಜೆ ಇಟ್ಟಂತೆ ಕಾಣುತ್ತಿಲ್ಲ ಎಂದು ಕಿಡಿಕಾರಿದರು. ಮಾಜಿ ಮೇಯರ್ ಸಂದೇಶ್ ಸ್ವಾಮಿ ಮಾತನಾಡಿ, ನರಸಿಂಹರಾಜ ಕ್ಷೇತ್ರದ ಜನರು ಅತ್ಯಂತ ಹೀನಾಯ ಸ್ಥಿತಿಯಲ್ಲಿ ಬದುಕುತ್ತಿದ್ದಾರೆ. ಇತ್ತೀಚೆಗೆ ಸಂಸದ ಯದು ವೀರ್ ಒಡೆಯರ್ ಎನ್ ಆರ್ ಕ್ಷೇತ್ರದ ಹಲವೆಡೆಗಳಲ್ಲಿ ಭೇಟಿ ನೀಡಿದಾಗ ಅಲ್ಲಿನ ವಾಸ್ತವ ಪರಿಸ್ಥಿತಿ ನೋಡಿ ದರು. ತನ್ವೀರ್ ಸೇಠ್ 6 ಬಾರಿ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಆದರೆ ಅವರದೇ ಸಮುದಾಯದ ಜನರು ಮೂಲಭೂತ ಸೌಕರ್ಯಗಳಿಂದ ವಂಚಿತರಾಗಿದ್ದಾರೆ. ಕಾಂಗ್ರೆಸ್ ಶಾಸಕರಿರುವ ಎನ್ ಆರ್ ಕ್ಷೇತ್ರಕ್ಕೂ ರಾಜ್ಯ ಸರ್ಕಾರ ಅನುದಾನ ನೀಡುತ್ತಿಲ್ಲ. ಶಾಸಕರನ್ನು ಕೇಳಿದರೆ ನಾನು ಯಾರಿಗೂ ಓಟ್ ಹಾಕಿ ಎಂದು ಕೇಳುವುದಿಲ್ಲ. ಆದರೂ ಜನರು ನನಗೆ ಓಟ್ ಹಾಕಿ ಗೆಲ್ಲಿಸುತ್ತಿದ್ದಾರೆಂಬ ಉಡಾಫೆ ಉತ್ತರ ನೀಡುತ್ತಿದ್ದಾರೆಂದರು. ಈ ಸಂಧರ್ಭ ದಲ್ಲಿ ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ, ಗ್ರಾಮಾಂತರ ಬಿಜೆಪಿ ಅಧ್ಯಕ್ಷ ಕುಂಬ್ರಳ್ಳಿ ಸುಬ್ಬಣ್ಣ, ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಮಾಜಿ ಅಧ್ಯಕ್ಷ ಮಿರ್ಲೆ ಶ್ರೀನಿವಾಸ್ ಗೌಡ, ಮಾಜಿ ಮೇಯರ್ ಸಂದೇಶ್ ಸ್ವಾಮಿ, ನಗರ ವಕ್ತಾರ ಮೋಹನ್, ಮಾದ್ಯಮ ಸಂಚಾಲಕ ಮಹೇಶ್ ರಾಜೇ ಅರಸ್ ಉಪಸ್ಥಿತರಿದ್ದರು.

## ಫೆ.1ರಂದು ನಗರದಲ್ಲಿ ಚಿಗುರು ಕಾರ್ಯಕ್ರಮ

**ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾಮಕ್ಕಳಿಗೆ ವಿವಿಧ ಸ್ಪರ್ಧೆ ಆಯೋಜನೆ**



ಚಾಮರಾಜನಗರ, ಯೂತ್ ಫಾರ್ ಸೇವಾ ಸಂಸ್ಥೆ ವತಿಯಿಂದ ಸರ್ಕಾರಿ ಶಾಲಾ ಮಕ್ಕಳಲ್ಲಿರುವ ಪ್ರತಿಭೆ ಗುರ್ತಿಸುವ ಸಂಬಂಧ 'ಚಿಗುರು' ಕಾರ್ಯಕ್ರಮ ಆಯೋಜನೆ ಮಾಡಲಾಗಿದ್ದು, ಅದರ ಉದ್ಘಾಟನಾ ಕಾರ್ಯಕ್ರಮ ಫೆ.1ರಂದು ಬೆಳಗ್ಗೆ 10ಕ್ಕೆ ನಗರದ ಕರಿನಂಜನಪುರ ರಸ್ತೆಯ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ನಡೆಯಲಿದೆ ಎಂದು ಯೂತ್ ಫಾರ್ ಸೇವಾ ಸಂಸ್ಥೆ ಜಿಲ್ಲಾ ಸಂಯೋಜಕ ತೇಜನಾಯಕ್ ಹೇಳಿದರು.

ನಗರದ ಜಿಲ್ಲಾಕಾರ್ಯನಿರತ ಪತ್ರಕರ್ತರ ಸಂಘದ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಜಿಲ್ಲೆಯಲ್ಲಿ ಕಳೆದ 3 ವರ್ಷಗಳಿಂದ ಯೂತ್ ಫಾರ್ ಸೇವಾ ಸಂಸ್ಥೆಯಿಂದ ಶಿಕ್ಷಣ, ಪರಿಸರ, ಮತ್ತು ಆರೋಗ್ಯ ಈ ಮೂರು ಮುಖ್ಯ ಕ್ಷೇತ್ರಗಳಲ್ಲಿ, ಸ್ವಯಂಸೇವಕರ ಮೂಲಕ ಸಮಾಜದಲ್ಲಿ ಪರಿವರ್ತನೆ ತರಲು ಮಕ್ಕಳ ಮೇಲೆ ಗುಣಾತ್ಮಕ ಪರಿಣಾಮ ಬೀರುವ ಕಾರ್ಯಕ್ರಮಗಳನ್ನು ಆಯೋಜಿಸುತ್ತಾ ಬರಲಾಗಿದೆ. ಯಾವುದೇ ಪ್ರತಿಫಲಾಪೇಕ್ಷೆಯಿಲ್ಲದೆ, ಸೇವಾ ಮನೋಭಾವದಿಂದ ಬರುವ ಸ್ವಯಂಸೇವಕರನ್ನು ಅವರ ಆಸಕ್ತಿಗನುಗುಣವಾಗಿ ಸೇವಾ ಚಟುವಟಿಕೆಗಳಲ್ಲಿ ಜೋಡಿಸಲಾಗುತ್ತಿದೆ. ಇದರ ಭಾಗವಾಗಿ ಸಂಸ್ಥೆಯು ಸಿಎಸ್ಆರ್ ಕಾರ್ಯಕ್ರಮದಡಿ ಶಾಲೆಗಳನ್ನು ದತ್ತು ತಗೆದುಕೊಂಡು ಮೂಲಭೂತ ಸೌಕರ್ಯಗಳು ಹಾಗೂ ಕಲಿಕಾ ಗುಣಮಟ್ಟವನ್ನು ಹೆಚ್ಚಿಸುವ ಕಾರ್ಯಕ್ರಮಗಳನ್ನು ಮಾಡುತ್ತಿದೆ. ಚಿಗುರು ಕಾರ್ಯಕ್ರಮದಲ್ಲಿ 30 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳ ಒಂದು ಶಾಲೆಯಿಂದ 36 ವಿದ್ಯಾರ್ಥಿಗಳಂತೆ 1200 ವಿದ್ಯಾರ್ಥಿಗಳಿಗೆ ಆಯೋಜಿಸುವ ಯೋಜನೆಯನ್ನು ಹೊಂದಲಾಗಿದೆ ಎಂದರು. ಬೆಳಗ್ಗೆ 10ಕ್ಕೆ ಡಿವೈಎಸ್ಪಿ ಸ್ನೇಹರಾಜ್ ಕಾರ್ಯಕ್ರಮ ಉದ್ಘಾಟಿಸುವರು. ಉದ್ಯಮಿ ವೆಂಕಟನಾಗಪ್ಪಶೆಟ್ಟಿ ಅಧ್ಯಕ್ಷತೆ ವಹಿಸುವರು. ಸುಜುಕಿ ಷೋರೂಂ ವ್ಯವಸ್ಥಾಪಕರಾದ ರೂಪಾ ನಾಗೇಂದ್ರ, ಉಪನ್ಯಾಸಕ ಸುರೇಶ್.ಎನ್. ಋಗ್ವೇದಿ, ಮರಿಯಾಲದ ಬಸವರಾಜೇಂದ್ರ ಆಸ್ಪತ್ರೆಯ ಪ್ರಸೂತಿ ಮತ್ತು ಸ್ತ್ರೀ ರೋಗತಜ್ಞೆ ಡಾ.ಶ್ವೇತಾಶಶಿಧರ್ ಸೇರಿದಂತೆ ಎಂದು ಯೂತ್ ಫಾರ್ ಸೇವಾ ಸಂಸ್ಥೆ ಪದಾಧಿಕಾರಿಗಳು ಭಾಗವಹಿಸುವರು ಎಂದರು.

### ಸ್ಪರ್ಧೆಗಳ ವಿವರ

ಚಿಗುರು ಕಾರ್ಯಕ್ರಮದಲ್ಲಿ 'ಜನಪದನೃತ್ಯ,' ರಂಗೋಲಿ, ಯೋಗ, ಸಮೂಹಗಾಯನ, 'ಮಣ್ಣಿನಮಾದರಿ' ಫೋಟಾಸ್ಯೆಂಟಿಸ್ಟ್, ಚಿತ್ರಕಲೆ, ವೇಷಭೂಷಣ, ಕಸದಿಂದ ರಸ, ಶ್ಲೋಕಪಠಣ, ರಿಲೇ, ಗೋಣಿಚೀಲದ ಓಟ' ಬೆಂಕಿಇಲ್ಲದ ಅಡುಗೆ' ರಸಪ್ರಶ್ನೆ ಸ್ಪರ್ಧೇಗಳನ್ನು ನಡೆಸಲಾಗುತ್ತದೆ. ಕಿರಿಯರ ಸ್ಪರ್ಧೇಯಲ್ಲಿ ನಾಲ್ಕನೇ ತರಗತಿವಿದ್ಯಾರ್ಥಿಗಳು, ಹಿರಿಯರ ಸ್ಪರ್ಧೇಯಲ್ಲಿ 6ರಿಂದ 7 ನೇ ತರಗತಿವಿದ್ಯಾರ್ಥಿಗಳು ಭಾಗವಹಿಸುವರು. ವಿಜೇತರಿಗೆ ಪ್ರಥಮ, ದ್ವಿತೀಯ, ತೃತೀಯ ಬಹುಮಾನವನ್ನು ಅಂದು ಮಧ್ಯಾಹ್ನ 3ಕ್ಕೆ ನಡೆಯುವ ಸಮಾರೋಪ ಸಮಾರಂಭದಲ್ಲಿ ವೇದಿಕೆ ಗಣ್ಯರಿಂದ ವಿತರಿಸಲಾಗುವುದು ಎಂದರು. ಚಿಗುರು ಕಾರ್ಯಕ್ರಮದಲ್ಲಿ ನಗರದ ಸಾರ್ವಜನಿಕರು, ಶಾಲಾಮಕ್ಕಳು, ಪೋಷಕರು ಹೆಚ್ಚಿನಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದರು. ಗೋಷ್ಠಿಯಲ್ಲಿ ಯೂತ್ ಫಾರ್ ಸೇವಾ ಸಂಸ್ಥೆ ಯೋಜನಾವ್ಯವಸ್ಥಾಪಕ ಡಾ.ಕೀರ್ತಿಕ್, ಯೂತ್ ಫಾರ್ ಸೇವಾ ಸಂಸ್ಥೆ ಜಿಲ್ಲಾಧ್ಯಕ್ಷ ಸ್ವರೂಪ್ ಹಾಜರಿದ್ದರು.

# ಮತದಾನದ ಜಾಗೃತಿ ಇರಲಿ

**ಹಿರಿಯ ಸಿವಿಲ್ ನ್ಯಾಯಾಧೀಶ ಈಶ್ವರ್ ಹೇಳಿಕೆ | ಮತದಾರರ ದಿನ**



ಚಾಮರಾಜನಗರ:– ಪ್ರಜಾಪ್ರಭುತ್ವದ ಬಲಿಷ್ಠತೆಗಾಗಿ ಹಾಗೂ ದೇಶದ ಉಜ್ವಲ ಭವಿಷ್ಯಕ್ಕಾಗಿ ಯುವಜನರು ಮತದಾನದ ಮಹತ್ವದ ಕುರಿತು ಜಾಗೃತರಾಗುವಂತೆ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳದ ಈಶ್ವರ ಅವರು ಸಲಹೆ ಮಾಡಿದರು.

ನಗರದ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿಂದು ಭಾರತ ಸರ್ಕಾರದ ಮೈ ಭಾರತ್ ಕೇಂದ್ರ, ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು, ಮತದಾರರ ಜಾಗೃತಿ ಕ್ಲಬ್ ಹಾಗೂ ನಗರದ ಜೈ ಭುವನೇಶ್ವರಿ ಕನ್ನಡ ಯುವ ವೇದಿಕೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮತದಾನ ಪ್ರತಿಯೊಬ್ಬರಿಗೂ ಪವಿತ್ರ ಹಾಗೂ ಅಮೂಲ್ಯವಾದದ್ದು. ಮತದಾನದಲ್ಲಿ ಪಾಲ್ಗೊಳ್ಳಲು ಈ ಹಿಂದೆ ಯುವಜನರು ಆಸಕ್ತಿ ತೋರುತ್ತಿರಲಿಲ್ಲ. ಚುನಾವಣೆಯಲ್ಲಿ ಭಾಗವಹಿಸುವ ಪ್ರಮಾಣವು ಕಡಿಮೆ ಇತ್ತು. ಇದನ್ನರಿತ ಭಾರತ ಚುನಾವಣಾ ಆಯೋಗವು ನಾಗರಿಕರು ವಿಶೇಷವಾಗಿ 18 ತುಂಬಿದ ಯುವಜನರಿಗೆ ಮತದಾನ ಜಾಗೃತಿ ಮೂಡಿಸಿ ಪ್ರೇರೆಪಿಸಲು ರಾಷ್ಟ್ರೀಯ ಮತದಾರರ ದಿನ ಆಚರಿಸಲು ನಿರ್ದೇಶನ ನೀಡಿದೆ. ಈ ಪ್ರಯುಕ್ತ 2011ರಿಂದ ದೇಶಾದ್ಯಂತ ರಾಷ್ಟ್ರೀಯ ಮತದಾರರ ದಿನ ಆಚರಿಸಿ ಮತದಾನದ ಬಗ್ಗೆ ಪ್ರತಿಯೊಬ್ಬರಿಗೂ ಅರಿವು ಮೂಡಿಸಲಾಗುತ್ತಿದೆ ಎಂದರು.

ಯುವಜನರು ಮತದಾನ ಸಂದರ್ಭದಲ್ಲಿ ಯಾವುದೇ ಹಣ, ಆಮಿಷಗಳಿಗೆ ಒಳಗಾಗದೇ, ಜಾತಿ, ಧರ್ಮಗಳಿಗೆ ಕಟ್ಟುಬೀಳದೇ ಚುನಾವಣೆಯಲ್ಲಿ ನಿರ್ಭೀತಿಯಿಂದ ಮತದಾನ ಮಾಡಬೇಕು. ದೇಶದ ಅಭಿವೃದ್ಧಿ ಚುನಾವಣೆಯಲ್ಲಿ ನಾವು ಆರಿಸುವ ವ್ಯಕ್ತಿಗಳನ್ನು ಅವಲಂಬಿಸಿದೆ. ಈ ನಿಟ್ಟಿನಲ್ಲಿ ಸಮಾಜದಲ್ಲಿ ಸಮಸ್ಯೆಗಳಿಗೆ ಸ್ಪಂದಿಸುವ, ಜನಸೇವಕರಾಗಿ ಕೆಲಸ ಮಾಡುವ ಯೋಗ್ಯ ಹಾಗೂ ಉತ್ತಮ ವ್ಯಕ್ತಿಗಳನ್ನು ಆರಿಸಬೇಕು. ಅದಕ್ಕಾಗಿ ಎಲ್ಲರೂ ಮತದಾನದ ಪ್ರಾಮುಖ್ಯತೆಯನ್ನು ಅರಿಯಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರಾದ ಈಶ್ವರ ತಿಳಿಸಿದರು.

ಮತದಾನದ ಕುರಿತ ಜಾಗೃತಿಗಾಗಿ ಕಾಲೇಜಿನಲ್ಲಿ ನಡೆದ ರಸಪ್ರಶ್ನೆ ಕಾರ್ಯಕ್ರಮದಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ, ಪ್ರಮಾಣಪತ್ರ ವಿತರಿಸಿ ಬಳಿಕ ಮಾತನಾಡಿದ ಹೆಚ್ಚುವರಿ ಜಿಲ್ಲಾಧಿಕಾರಿ ಟಿ. ಜವರೇಗೌಡ ಅವರು ರಾಜಪ್ರಭುತ್ವದ ಅಂದಿನ ಕಾಲದಲ್ಲಿ ಭಾರತೀಯರೆಲ್ಲರಿಗೂ ಸಮಾನ ಹಕ್ಕು, ಅವಕಾಶಗಳಿರಲಿಲ್ಲ. ಬಳಿಕ ಪ್ರಜಾಸತ್ಯಾತ್ಮಕ ಆಡಳಿತ ಚಿಂತನೆಯಡಿ ಪ್ರಜಾಪ್ರಭುತ್ವ ಅಳವಡಿಸಿಕೊಳ್ಳಲು ನಿರ್ಧರಿಸಲಾಯಿತು. ಪ್ರಜಾಪ್ರಭುತ್ವದಡಿ ಎಲ್ಲರಿಗೂ ಮತದಾನ ಮಾಡುವ ಅವಕಾಶ ಲಭ್ಯವಾಗಿದೆ. ಒಂದೊಂದು ಮತವು ಬಹಳ ಅಮೂಲ್ಯವಾಗಿದೆ. ಒಂದು ಮತದ ಮಹತ್ವವನ್ನು ಇಡೀ ದೇಶಕ್ಕೆ ಪರಿಚಯಿಸಿದ ಕೀರ್ತಿ ಚಾಮರಾಜನಗರಕ್ಕೆ ಸಲ್ಲುತ್ತದೆ ಈ ನಿಟ್ಟಿನಲ್ಲಿ ಪ್ರಜ್ಞಾವಂತರಾದ ನಾವೆಲ್ಲರೂ ಮತದಾನದ ಬಗ್ಗೆ ಹೆಚ್ಚಿನ ಅರಿವು ಹೊಂದಬೇಕು ಎಂದು ತಿಳಿಸಿದರು.

### ನೇತ್ರದಾನದಂತೆ ಮತದಾನವೂ ಶ್ರೇಷ್ಠವಾದದ್ದು

**ಮತದಾನದ ಪ್ರತಿಜ್ಞಾವಿಧಿ ಬೋಧಿಸಿ ಮಾತನಾಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ. ಮುತ್ತುರಾಜು ಅವರು ರಕ್ತದಾನ, ನೇತ್ರದಾನದಂತೆ ಮತದಾನವೂ ಶ್ರೇಷ್ಠವಾದದ್ದು. ಮತವನ್ನು ದಾನ ಮಾಡಬೇಕೆ ಹೊರತು ಮಾರಾಟ ಮಾಡಬಾರದು. ಮತದಾನದ ಬಗ್ಗೆ ನಿರಂತರ ಜಾಗೃತಿ ಮೂಡಿಸಲು ಪ್ರತಿವರ್ಷ ಜನವರಿ 25ರಂದು ರಾಷ್ಟ್ರೀಯ ಮತದಾರರ ದಿನ ಆಚರಿಸಲಾಗುತ್ತಿದೆ. ಸದೃಢ ಸಮಾಜ ನಿರ್ಮಾಣಕ್ಕಾಗಿ ನಾವೆಲ್ಲರೂ ಮತದಾನದ ಮಹತ್ವದ ಅರಿತು ಇತರರಿಗೂ ತಿಳಿಹೇಳಬೇಕು ಎಂದರು.**


ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ. ಬಿ.ಎಸ್. ಮಹದೇವಸ್ವಾಮಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನ ರಾಜ್ಯಶಾಸ್ತ್ರ ವಿಭಾಗದ ಸಹ ಪ್ರಾಧ್ಯಾಪಕರಾದ ಸಿ. ಶೈಲೇಶ್ ಕುಮಾರ್, ಜೈ ಭುವನೇಶ್ವರಿ ಕನ್ನಡ ಯುವ ವೇದಿಕೆ ಅಧ್ಯಕ್ಷರಾದ ಜಿ. ಬಂಗಾರು, ದೈಹಿಕ ಶಿಕ್ಷಣ ನಿರ್ದೇಶಕರಾದ ಡಾ. ಶಾಂತರಾಜು, ಮೈ ಭಾರತ್ ಕೇಂದ್ರದ ಸಹನಾ, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಫೆ.2ರಂದು ಮಡಿವಾಳ ಮಾಚಿದೇವ ಜಯಂತಿ

ಚಾಮರಾಜನಗರ:– ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತಾಶ್ರಯದಲ್ಲಿ ಮಡಿವಾಳ ಮಾಚಿದೇವ ಜಯಂತಿಯನ್ನು ಫೆಬ್ರವರಿ 2ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಎಂ.ಎಸ್.ಐ.ಎಲ್. ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಅಧ್ಯಕ್ಷತೆ ವಹಿಸುವರು. ಲೋಕಸಭಾ ಸದಸ್ಯರಾದ ಸುನೀಲ್ ಬೋಸ್ ಅವರು ಘನ ಉಪಸ್ಥಿತಿ ವಹಿಸುವರು. ಶಾಸಕರಾದ ಎ.ಆರ್. ಕೃಷ್ಣಮೂರ್ತಿ, ಹೆಚ್.ಎಂ. ಗಣೇಶ್ ಪ್ರಸಾದ್, ಡಾ. ಎಂ.ಆರ್. ಮಂಜುನಾಥ, ಡಾ. ಡಿ. ತಿಮ್ಮಯ್ಯ, ಸಿ.ಎನ್. ಮಂಜೇಗೌಡ, ಮಧು. ಜಿ. ಮಾದೇಗೌಡ, ಕೆ. ವಿವೇಕಾನಂದ, ಕಾವೇರಿ ಜಲಾನಯನ ಯೋಜನೆ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪಿ. ಮರಿಸ್ವಾಮಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ವಿ. ಚಂದ್ರು, ಚಾಮರಾಜನಗರ ಮತ್ತು ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ (ಮುನ್ನ) ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಕಾಗಲವಾಡಿ ನಿವೃತ್ತ ಮುಖ್ಯ ಶಿಕ್ಷಕರಾದ ಎ. ಸಿದ್ದಯ್ಯ ಅವರು ಮುಖ್ಯ ಭಾಷಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.



## ಕೆ.ಬಿ.ಲಿಂಗರಾಜುಗೆ ಅಭಿನಂದನೆ

ಮೈಸೂರು: ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಗೌರವ ಡಾಕ್ಟರೇಟ್ ಪದವಿ ಪುರಸ್ಕೃತರಾದ ಕೆ.ಬಿ.ಲಿಂಗರಾಜುರನ್ನು ಮಾಜಿ ಶಾಸಕ ಎಲ್.ನಾಗೇಂದ್ರ ಅಭಿನಂದಿಸಿದರು.ಈ ಸಂಧರ್ಭದಲ್ಲಿ ವೈ. ಭೈರಪ್ಪ ರವರು, ನಗರ ಎಸ್ ಟಿ ಮೋರ್ಚಾ ಅಧ್ಯಕ್ಷ ಪಡುವಾರಹಳ್ಳಿ ಎಂ ರಾಮಕೃಷ್ಣ,ಮಾಜಿ ನಗರಪಾಲಿಕೆ ಸದಸ್ಯ ಎಂ ಚಿಕ್ಕವೆಂಕಟು,ಅಶ್ವಥ್ ಗೌಡ, ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕ್ ನಿರ್ದೇಶಕರಾದ ಎನ್ ಯೋಗಾನಂದ್, ಕೆ ಗಿರೀಶ್, ಜಯಣ್ಣ, ದಿನೇಶ್, ಶಿವುಗೌಡ, ಎಸ್.ಪ್ರವೀಣ್, ಪ್ರಮೋದ್, ಚೆಲುವಣ್ಣ, ನವೀನ್, ನಾಗೇಶ್, ಕೇಬಲ್ ವೆಂಕಟೇಶ, ಮೋಹನ್, ಜೆಡಿಎಸ್ ವಾರ್ಡ್ ಅದ್ಯಕ್ಷ ಶರತ್, ವೆಂಕಟ, ಬಸವರಾಜ್, ಮಂಜು, ಸರ್ವೇಶ್, ಫೋಟೋ ನಾಗೇಶ್, ಶ್ರೀನಿವಾಸ್, ರಮೇಶ್ ಇದ್ದಾರೆ.



## ಸ್ತ್ರೀ ಜ್ಞಾನವಿಕಾಸ ಕೇಂದ್ರಗಳು ಸ್ವಾವಲಂಬನೆಗೆ ಸಹಕಾರಿ

ಕೆ.ಆರ್.ಪೇಟೆ. ಮಹಿಳೆಯರ ಸ್ವಾವಲಂಬಿ ಜೀವನ ನಿರ್ವಹಣೆಗೆ ಮಹಿಳಾ ಸಬಲೀಕರಣದಂತಹ ಕಾರ್ಯಕ್ರಮ ಅವಶ್ಯಕ. ಈ ನಿಟ್ಟಿನಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಜ್ಞಾನ ವಿಕಾಸ ಕೇಂದ್ರದ ಕಾರ್ಯಕ್ರಮ ಮಹಿಳೆಯರ ಸ್ವಾವಲಂಬಿ ಮತ್ತು ಸ್ವಾಭಿಮಾನಿ ಬದುಕಿಗೆ ಸಹಕಾರಿ ಎಂದು ಶ್ರೀ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಚನ್ನರಾಯಪಟ್ಟಣ ಜಿಲ್ಲಾ ನಿರ್ದೇಶಕ ಡಾ.ಯೋಗೇಶ್ ತಿಳಿಸಿದರು.

ತಾಲ್ಲೂಕಿನ ಕಸಬಾ ಹೋಬಳಿಯ ಬಿಬಿ ಕಾವಲು ಗ್ರಾಮದಲ್ಲಿ ಕಿಕ್ಕೇರಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಹರಿಹರಪುರ ವಲಯ ವತಿಯಿಂದ ಜ್ಞಾನವಿಕಾಸ ಸಂಯುಕ್ತ ಆಶ್ರಯದಲ್ಲಿ ನೂತನ ಮಹಿಳಾ ಜ್ಞಾನ ವಿಕಾಸ ಕೇಂದ್ರ ಉದ್ಘಾಟನಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು ಮಹಿಳೆ ನಿಶ್ಚಿಂತೆಯಿಂದ ತನ್ನ ಬದುಕು ಕಟ್ಟಿಕೊಳ್ಳಲು ಲೋಕ ಜ್ಞಾನ ಹೊಂದಿರಬೇಕು ಈ ಕಾರಣದಿಂದ ಮಹಿಳಾ ಜ್ಞಾನ ವಿಕಾಸ ಕೇಂದ್ರ ಮಹಿಳೆಯರಿಗೆ ಶಿಕ್ಷಣ, ಆರೋಗ್ಯ, ನೈರ್ಮಲ್ಯ, ಸ್ವಯಂ ಉದ್ಯೋಗ ಸೇರಿದಂತೆ ವಿವಿಧ ಸಾಮಾಜಿಕ ಜ್ಞಾನದ ಮಾಹಿತಿ ನೀಡಿ ಜಾಗೃತಿಗೊಳಿಸುವ, ನಿರ್ಗತಿಕರರಿಗೆ ಮನೆ ರಚನೆಯ ವಾತ್ಸಲ್ಯ ಕಾರ್ಯಕ್ರಮ, ಸ್ವಾಸ್ಥ್ಯ ಸಂಕಲ್ಪ ಕಾರ್ಯಕ್ರಮ ನಮ್ಮ ಸಮಾಜಕ್ಕೆ ಮಾದರಿ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಗ್ರಾ.ಪಂ ಸದಸ್ಯ ಮೋಹನ್ ಗ್ರಾಮೀಣ ಭಾಗದಲ್ಲಿ ಪೋಕ್ಸೊ ಪ್ರಕರಣಗಳು ಹೆಚ್ಚಾಗಿ ದಾಖಲಾಗುತ್ತಿದ್ದು, ಮಹಿಳೆಯರು ಈ ಬಗ್ಗೆ ಗಂಭೀರವಾಗಿ



ಆಲೋಚಿಸಬೇಕಾಗಿದೆ. ಹೆಣ್ಣು ಮಕ್ಕಳು ವಯಸ್ಸಿಗೆ ಬಾರದೆ ವಿವಾಹ ಮಾಡುವುದರಿಂದ ದೈಹಿಕವಾಗಿ ಸೊರಗುವರು. ಇದರಿಂದ ಅನೇಕ ಕಾಯಿಲೆಗೆ ತುತ್ತಾಗುತ್ತಾರೆ,ಎಂದು ತಿಳಿಸಿದರು.

ಬಳಿಕ ಮಾತನಾಡಿದ ಶ್ರೀ ಮಲ್ಲಿಕಾರ್ಜುನ ಚಾರಿಟೇಬಲ್ ಟ್ರಸ್ಟ್ ನ ಟ್ರಸ್ಟಿ ಗಂಜಿಗೆರೆ ಮಹೇಶ್ ಮಹಿಳೆಯರು ಜ್ಞಾನ–ವಿಜ್ಞಾನ, ಕಾರ್ಮಿಕ ಕ್ಷೇತ್ರ, ಸೇವಾ ಕ್ಷೇತ್ರ, ಉದ್ಯಮ, ಪುರುಷರಿಗಷ್ಟೇ ಎಂದೇ ನಂಬಲಾದ ವೃತ್ತಿಗಳಲ್ಲೂ ಸ್ಥಾನವನ್ನು ನಿರ್ಮಿಸಿ ಕೊಂಡಿದ್ದಾರೆ. ಮಹಿಳೆಯರು ಶಿಕ್ಷಣ, ಉದ್ಯೋಗ, ವೈಜ್ಞಾನಿಕ ಸಂಶೋಧನೆ, ಸಮಾಜಸೇವಾ ಕ್ಷೇತ್ರಗಳಲ್ಲಿ ಮುಂಚೂಣಿಯಲ್ಲಿದ್ದಾರೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಕಿಕ್ಕೇರಿ ಶ್ರೀ ಧರ್ಮಸ್ಥಳ ಯೋಜನಧಿಕಾರಿ ಪ್ರಸಾದ್, ಗ್ರಾ.ಪಂ ಮಾಜಿ ಅಧ್ಯಕ್ಷ ಡೊಂಕಯ್ಯ, ಹಿರಿಯ ಮುಖಂಡ ಸಿಂಗಯ್ಯ,ಶ್ರೀ ಮಲ್ಲಿಕಾರ್ಜುನ ಚಾರಿಟೇಬಲ್ ಟ್ರಸ್ಟ್ ನ ಟ್ರಸ್ಟಿ ಗಂಜಿಗೆರೆ ಮಹೇಶ್, ಸಂಸ್ಥೆಯ ಮೇಲ್ವಿಚಾರಕಿ ಸಂಗೀತ ದಿನೇಶ್, ಸಮನ್ವಯ ಅಧಿಕಾರಿ ನಂದಿನಿ,ಸೇವಾಪ್ರತಿನಿಧಿ ವೀಣಾ, ಮಂಜುಳ, ಶ್ರುತಿ, ಪೂರ್ಣಿಮಾ, ಗೀತಾ,ರೇಖಾ, ಸೇರಿದಂತೆ ಗ್ರಾಮಸ್ಥರು ಇದ್ದರು.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ


## ನಗರಸಭೆ ಪೌರಾಯುಕ್ತರಿಗೆ ಬೀಳ್ಕೊಡುಗೆ

ಚಾಮರಾಜನಗರ, ಚಾಮರಾಜನಗರ ಜಿಲ್ಲಾ ಕೇಂದ್ರದ ನಗರಸಭೆಯಲ್ಲಿ ನಿಮ್ಮೆಲ್ಲರ ಸಹಕಾರದಿಂದ ಉತ್ತಮ ಸೇವೆ ಸಲ್ಲಿಸಲು ಕಾರಣವಾಗಿದೆ. ಪೌರ ಕಾರ್ಮಿಕರಿಗೆ ನಿವೇಶನ ಹಾಗೂ ಪೌರ ಕಾರ್ಮಿಕರ ಸೇವೆಯನ್ನು ಖಾಯಂ ಮಾಡಿದ್ದು ತೃಪ್ತಿ ತಂದಿದೆ ಎಂದು ನಿಗರ್ಮಿತ ಪೌರಾಯುಕ್ತ ರಾಮದಾಸ್ ತಿಳಿಸಿದರು.

ನಗರದ ನಗರಸಭೆ ಸಭಾಂಗಣದಲ್ಲಿ ಅಲ್ಲಿನ ನೌಕರರು ಹಾಗೂ ಸಿಬ್ಬಂದಿಗಳು ನೀಡಿದ ಬಿಳ್ಕೊಡುಗೆಯನ್ನು ಸ್ವೀಕರಿಸಿ ಮಾತನಾಡಿದ ಅವರು ನನ್ನ ಅಧಿಕಾರದ ಅವಧಿಯಲ್ಲಿ ಜಿಲ್ಲೆಯ ಶಾಸಕರು, ಸಚಿವರು, ನಗರಸಭೆ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರು ಮತ್ತು ನಮ್ಮ ಇಲಾಖೆಯ ಎಲ್ಲಾ ನೌಕರರು ಉತ್ತಮ ಸಹಕಾರ ನೀಡಿದರು. ಪ್ರತಿಯೊಂದು ಕೆಲಸ ಕಾರ್ಯಗಳನ್ನು ಸಹ ನಿರ್ವಹಿಸುವ ಮೂಲಕ ನೌಕರರ ಕೊರತೆ ಇದ್ದರು ಸಹ ಹೆಚ್ಚುವರಿ ಕೆಲಸ ಕಾರ್ಯಗಳನ್ನು ನಿರ್ವಹಿಸಿದ್ದೀರಿ, ಇದಕ್ಕಾಗಿ ನಿಮ್ಮೆಲ್ಲರಿಗೂ ನಾನು ಅಭಾರಿಯಾಗಿದ್ದೇನೆ ಎಂದರು.

**ಚಾ.ನಗರ ನಗರಸಭೆ ಪೌರಾಯುಕ್ತನಾಗಿ ಉತ್ತಮ ಸೇವೆ ಸಲ್ಲಿಸಿದ ತೃಪ್ತಿ ಇದೆ : ರಾಮದಾಸ್**

ನಗರಸಭೆ ಕಾರ್ಯಕ್ರಮ ಸಂಯೋಜಕ ವೆಂಕಟನಾಯಕ ಮಾತನಾಡಿ ರಾಮದಾಸ್ ಅವರು



ಸದಾ ಹಸ್ನುಖಿಗಳಾಗಿ ನಮ್ಮೆಲ್ಲರಿಗೂ ಮಾರ್ಗದರ್ಶನ ನೀಡುತಿದ್ದರು. ನೌಕರರ ಬಗ್ಗೆ ಬಹಳ ವಿಶ್ವಾಸ, ಪ್ರೀತಿಯನ್ನು ಹೊಂದಿದ್ದರು. ಮೃದು ಸ್ವಭಾವದಿಂದ ಇದ್ದವರು. ಇನ್ನು ಹೆಚ್ಚಿನ ಅಧಿಕಾರ ಅವರಿಗೆ ದೊರೆಯಲಿ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪ್ರಬಾರ ಪೌರಾಯುಕ್ತ ಪ್ರಕಾಶ್, ಪರಿಸರ ಇಂಜಿನಿಯರ್ ರೂಪ, ಮ್ಯಾನೇಜರ್ ಸುಧಾರಾಣ , ಹಿರಿಯ ಆರೋಗ್ಯ ಅಧಿಕಾರಿ ಮಂಜು, ಇಂಜಿನಿಯರ್ ಶಿವಶಂಕರ್ ಆರಾಧ್ಯ, ನಗರಸಭೆ ಮಾಜಿ ಅಧ್ಯಕ್ಷ ಸುರೇಶ್‌ನಾಯಕ, ಮಾಜಿ ಸದಸ್ಯ ಮಹೇಶ್, ಎಲ್. ಸುರೇಶ್, ಮಹದೇವ್, ಮಹೇಶ್ ಚಿನ್ನಮ್ಮ ಹಾಗೂ ಸಿಬ್ಬಂದಿ ವರ್ಗದವರು ಹಾಜರಿದ್ದರು.

**ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಪುಣ್ಯತಿಥಿ ಪ್ರಯುಕ್ತ**

## ಉದ್ಯಾನ ಸ್ವಚ್ಛಗೊಳಿಸುವ ಮೂಲಕ ಗೌರವ

ಗುಂಡ್ಲುಪೇಟೆ: ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಪುಣ್ಯತಿಥಿ ಪ್ರಯುಕ್ತ ಪಟ್ಟಣದ ಪುರಸಭೆ ವ್ಯಾಪ್ತಿಗೆ ಬರುವ ಆಶೀರ್ವಾದ ಲೇಔಟ್ ನ ಉದ್ಯಾನವನವನ್ನು ಸ್ವಚ್ಛ ಮಾಡುವ ಮೂಲಕ ಮಹಾತ್ಮ ಗಾಂಧೀಜಿಯವರಿಗೆ ಗೌರವ ಸಲ್ಲಿಸಲಾಯಿತು ಮತ್ತು ಒಂದು ನಿಮಿಷ ಅವರ ಆತ್ಮಕ್ಕೆ ಶಾಂತಿ ಸಿಗಲೆಂದು ಪುರಸಭೆ ಸಿಬ್ಬಂದಿ ಮತ್ತು ಪೌರಕಾರ್ಮಿಕರು ನೀರು ಸರಬರಾಜುದಾರರು ಮೌನಚರಣೆ ಮಾಡಿ ಅವರ ತತ್ವಗಳನ್ನು ಸ್ಮರಣೆ ಮಾಡಿಸಲಾಯಿತು.

ಸತ್ಯ, ಅಹಿಂಸೆ ಮತ್ತು ಸ್ವಚ್ಛತೆಯ ಮೂಲಕ ದೇಶವನ್ನು ಬದಲಾಯಿಸಿದ ಮಹಾನ್ ನಾಯಕನಿಗೆ ನಾವು ಗೌರವ ಸಲ್ಲಿಸಲು ಇಲ್ಲಿ ಸೇರಿದ್ದೇವೆ, ಗಾಂಧೀಜಿಯವರು "ಸ್ವಚ್ಛತೆಯೇ ಸೇವೆ" ಎಂಬ ಅವರ ಕನಸಿನ ಭಾರತ ಸ್ವಚ್ಛ, ಶಾಂತ ಮತ್ತು ಶಿಸ್ತಿನ ರಾಷ್ಟ್ರವಾಗಿತ್ತು. ಆ ಕನಸನ್ನು ನಿಜಗೊಳಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ, ಇಂದು ನಾವು ಪಾರ್ಕ್ ಅನ್ನು ಸ್ವಚ್ಛಗೊಳಿಸುವ ಮೂಲಕ ಗಾಂಧೀಜಿಯವರಿಗೆ ನಿಜವಾದ ಗೌರವ ಸಲ್ಲಿಸುತ್ತಿದ್ದೇವೆ. ಇದು ಕೇವಲ ಕಾರ್ಯಕ್ರಮವಲ್ಲ ?



ಇದು ನಮ್ಮ ಜವಾಬ್ದಾರಿಯನ್ನು ನೆನಪಿಸುವ ಒಂದು ಸಂಕೇತ. ನಾವು ಪ್ರತಿದಿನ ಸ್ವಲ್ಪವಾದರೂ ಸ್ವಚ್ಛತೆಗೆ ಕೊಡುಗೆ ನೀಡಿದರೆ, ಗಾಂಧೀಜಿಯವರ ಕನಸಿನ "ಸ್ವಚ್ಛ ಭಾರತ" ನಿಜವಾಗುತ್ತದೆ. ಗಾಂಧೀಜಿಯವರ ಮೌಲ್ಯಗಳನ್ನು ನೆನೆದು, ನಮ್ಮ ಪಟ್ಟಣ ಸ್ವಚ್ಛ ಮತ್ತು ಹಸಿರು ಆಗಲು ಒಟ್ಟಾಗಿ ಕೆಲಸ ಮಾಡೋಣ ಎಂದು ಅವರ ತತ್ವಗಳನ್ನು ಪರಿಪಾಲಿಸಲಾಯಿತು. ಈ ವೇಳೆ, ಪುರಸಭೆ ಮುಖ್ಯ ಅಧಿಕಾರಿ ಶರವಣ. ಪರಿಸರ ಅಭ್ಯರ್ಥಿ ಮಹೇಶ್, ಹಿರಿಯ ಆರೋಗ್ಯ ನಿರೀಕ್ಷಕರಾದ ಸುಷ್ಮಾ ಮತ್ತು ಪರಮೇಶ್ ಮೇಸ್ತ್ರಿ ,ಮೂರ್ತಿ ಸಿದ್ದರಾಜು, ಜೆಸಿಬಿ ಕುಮಾರ್,ಅಭಿ ಯಂತರುಗಳಾದ ಅನುಪಮಾ, ಮಂಜುನಾಥ್ ಹಾಜರಿದ್ದರು.

# ಸಂಕ್ಷಿಪ್ತ ಸುದ್ದಿ

## ಇಂದು ಕೌನ್ಸಿಲಿಂಗ್

**ತುಮಕೂರು:** ಸರ್ಕಾರಿ ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕರಿಗೆ ಹಿರಿಯ ಮುಖ್ಯ ಶಿಕ್ಷಕರಾಗಿ ಜೇಷ್ಠತೆ ಮತ್ತು ರೋಸ್ಟರ್ ಆಧಾರದ ಮೇಲೆ ಸ್ಥಾನಪನ್ನ ಬಡ್ತಿ ನೀಡಲು ಜನವರಿ 31ರಂದು ಬೆಳಿಗ್ಗೆ 10.30 ಗಂಟೆಗೆ ತುಮಕೂರು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರ ಕಚೇರಿಯಲ್ಲಿ ಕೌನ್ಸಿಲಿಂಗ್ ನಡೆಯಲಿದೆ.

ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಗೆ ಕಳುಹಿಸಲಾಗಿರುವ ಪಟ್ಟಿಯಲ್ಲಿರುವ ಶಿಕ್ಷಕರು ಕಡ್ಡಾಯವಾಗಿ ಕೌನ್ಸಿಲಿಂಗ್‌ಗೆ ಹಾಜರಾಗಲು ತಿಳಿಸಲಾಗಿದೆ. ಗೈರು ಹಾಜರಾದ ಶಿಕ್ಷಕರಿಗೆ ಫ್ರಾಕ್ಸಿ ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿಗೊಳಿಸಲಾಗುವುದು ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫೆ.1ರಂದು "ಶ್ರೀ ಮಡಿವಾಳ ಮಾಚಿದೇವ ಜಯಂತಿ"

**ತುಮಕೂರು:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್, ಜಿಲ್ಲಾ/ ತಾಲ್ಲೂಕು ಮಡಿವಾಳ ಸಂಘದ ವತಿಯಿಂದ ಫೆಬ್ರವರಿ 1ರಂದು ಬೆಳಿಗ್ಗೆ 11 ಗಂಟೆಗೆ ನಗರದ ಡಾ: ಗುಬ್ಬಿವೀರಣ್ಣ ಕಲಾಕ್ಷೇತ್ರದಲ್ಲಿ "ಶ್ರೀ ಮಡಿವಾಳ ಮಾಚಿದೇವ ಜಯಂತಿ" ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಖಾತೆ ಸಚಿವ ಹಾಗೂ ಕ್ಷೇತ್ರದ ಸಂಸದ ವಿ.ಸೋಮಣ್ಣ ಅವರ ಘನ ಉಪಸ್ಥಿತಿಯಲ್ಲಿ ಗೃಹ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ: ಜಿ.ಪರಮೇಶ್ವರ ಕಾರ್ಯಕ್ರಮವನ್ನು ಉದ್ಘಾಟಿಸುವರು. ಚಿತ್ರದುರ್ಗ ಶ್ರೀ ಮಾಚಿದೇವ ಮಹಾಸಂಸ್ಥಾನ ಮಠದ ಪೀಠಾಧಿಪತಿ ಜಗದ್ಗುರು ಡಾ: ಶ್ರೀ ಶ್ರೀ ಬಸವ ಮಾಚಿದೇವ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸುವರು. ನಗರ ವಿಧಾನಸಭಾ ಕ್ಷೇತ್ರದ ಶಾಸಕ ಜಿ.ಬಿ.ಜ್ಯೋತಿಗಣೇಶ್ ಅಧ್ಯಕ್ಷತೆವಹಿಸುವರು. ಕಾರ್ಯಕ್ರಮದಲ್ಲಿ ಜಿಲ್ಲೆಯ ವಿವಿಧ ಸಚಿವರು, ಶಾಸಕರು, ಜನಪ್ರತಿನಿಧಿಗಳು, ಮಡಿವಾಳ ಸಮುದಾಯದ ಸಂಘ-ಸಂಸ್ಥೆಗಳ ಅಧ್ಯಕ್ಷರು, ಪದಾಧಿಕಾರಿಗಳು, ಸದಸ್ಯರು ಹಾಗೂ ಮುಖಂಡರು ಭಾಗವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಸರ್ಕಾರಿ ಇಲಾಖೆಗಳ ಅಧಿಕಾರಿ/ಸಿಬ್ಬಂದಿ ವರ್ಗ, ಸಮಾಜದ ಗಣ್ಯರು, ವಿವಿಧ ಸಮುದಾಯದ ಮುಖಂಡರು, ಕಲಾವಿದರು, ಜಿಲ್ಲೆಯ ಮಡಿವಾಳ ಸಮುದಾಯದ ಸಂಘ-ಸಂಸ್ಥೆಗಳ ಅಧ್ಯಕ್ಷರು, ಪದಾಧಿಕಾರಿಗಳು, ಸದಸ್ಯರು, ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಈಶ್ವರ್ ಕು ಮಿರ್ಜಿ ತಿಳಿಸಿದ್ದಾರೆ.

## ಮಾ.15ರವರೆಗೆ ವಿಶೇಷ ನೋಂದಣಿ ಅಭಿಯಾನ

**ತುಮಕೂರು:** ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಶ್ರಮಯೋಗಿ ಮಾನ್-ಧನ್ ಹಾಗೂ ಎನ್‌ಪಿಎಸ್-ಟ್ರೇಡರ್ಸ್ ಯೋಜನೆಯಡಿ ಅಸಂಘಟಿತ ವಲಯದ ಕಾರ್ಮಿಕರು, ವ್ಯಾಪಾರಿಗಳು ಹಾಗೂ ಸ್ವಯಂ ಉದ್ಯೋಗಿಗಳನ್ನು ನೋಂದಾಯಿಸಲು ಮಾರ್ಚ್ 15ರವರೆಗೆ "ವಿಶೇಷ ನೋಂದಣಿ ಅಭಿಯಾನ"ವನ್ನು ಹಮ್ಮಿಕೊಳ್ಳಲಾಗಿದೆ.

ಈ ಯೋಜನೆಯಡಿ 18 ರಿಂದ 40 ವರ್ಷದೊಳಗಿನ ಅಸಂಘಟಿತ ಕಾರ್ಮಿಕರು ನೋಂದಾಯಿಸಿಕೊಳ್ಳಬಹುದಾಗಿದೆ. ವಯಸ್ಸಿಗನುಗುಣವಾಗಿ ಮಾಸಿಕ 55 ರಿಂದ 200 ರೂ. ಗಳವರೆಗೆ ವಂತಿಕೆ ಪಾವತಿ ಮಾಡಬೇಕು. ಕೇಂದ್ರ ಸರ್ಕಾರದ ವತಿಯಿಂದ ಅಷ್ಟೇ ವಂತಿಕೆ ಪಾವತಿಸಿ ಬ್ಯಾಂಕ್ ಖಾತೆಯಲ್ಲಿ ಸದರಿ ಮೊತ್ತವನ್ನು ಸಂಗ್ರಹಿಸಲಾಗುತ್ತದೆ. 60 ವರ್ಷ ಪೂರ್ಣಗೊಂಡ ನಂತರ ಮಾಸಿಕ 3,000 ರೂ. ಪಿಂಚಣಿ ಸೌಲಭ್ಯ ಪಡೆಯಬಹುದಾಗಿದೆ.

ಯೋಜನೆಯಡಿ ನರೇಗಾ ಕಾರ್ಮಿಕರು, ಎಸ್‌ಹೆಚ್‌ಜಿ ಸದಸ್ಯರು, ಕೃಷಿ ಕಾರ್ಮಿಕರು, ಅಂಗನವಾಡಿ ಕಾರ್ಮಿಕರು, ಮಧ್ಯಾನದ ಬಿಸಿ ಊಟದ ಕಾರ್ಮಿಕರು, ಆಶಾ ಕಾರ್ಯಕರ್ತೆಯರು, ಬೀದಿ ಬದಿ ವ್ಯಾಪಾರಿಗಳು, ಗೃಹ ಕಾರ್ಮಿಕರು, ಮೀನುಗಾರರು, ಇನ್ನಿತರೆ ಅಸಂಘಟಿತ ವಲಯಗಳ ಕಾರ್ಮಿಕರು ಹಾಗೂ ವ್ಯಾಪಾರಿಗಳು ತಮ್ಮ ಆಧಾರ್ ಕಾರ್ಡ್, ಬ್ಯಾಂಕ್ ಪಾಸ್‌ಪುಸ್ತಕ ಹಾಗೂ ಮೊದಲ ತಿಂಗಳ ವಂತಿಕೆಯೊಂದಿಗೆ ಸಮೀಪದ ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ನೋಂದಣಿಯಾಗಿ ಯೋಜನೆಯ ಸದುಪಯೋಗ ಪಡೆದುಕೊಳ್ಳಬಹುದಾಗಿದೆ.

# ಮಂಡ್ಯದಲ್ಲಿ ಕನ್ನಡ ಭವನ ನಿರ್ಮಾಣಕ್ಕೆ ಅಡಿಗಲ್ಲು

## 5.50 ಕೋಟಿ ರು ವೆಚ್ಚದ ಭವನಕ್ಕೆ ಶಂಕುಸ್ಥಾಪನೆ ನೆರವೇರಿಸಿದ ಜಿಲ್ಲಾ ಉಸ್ತುವಾರಿ ಸಚಿವರು

**ಮಂಡ್ಯ:** 5.50 ಕೋಟಿ ರುವೆಚ್ಚದಲ್ಲಿಮಂಡ್ಯ ನಗರದ ಸರ್ ಎಂ. ವಿಶ್ವೇಶ್ವರಯ್ಯ ಒಳಾಂಗಣ ಕ್ರೀಡಾಂಗಣದ ಆವರಣದಲ್ಲಿ ಕನ್ನಡ ಭವನ ನಿರ್ಮಾಣಕ್ಕೆ ಪರಮಪೂಜ್ಯ ಜಗದ್ಗುರು ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿಯವರ ದಿವ್ಯ ಸಾನಿಧ್ಯದಲ್ಲಿ ಹಾಗೂ ಕೃಷಿ ಸಚಿವರು ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಎನ್ ಚಲುವರಾಯಸ್ವಾಮಿ ಅವರು ಶುಕ್ರವಾರ ಕನ್ನಡ ಭವನ ನಿರ್ಮಾಣದ ಶಂಕುಸ್ಥಾಪನೆ ನೆರವೇರಿಸಿದರು.

ಕನ್ನಡದ ಐಕ್ಯತೆಯ ಧ್ಯೋತಕವಾಗಿ ನಮ್ಮ ಸಾಹಿತ್ಯ, ಸಂಸ್ಕೃತಿ, ಪರಂಪರೆಯನ್ನು ಬಿಂಬಿಸುವ ಹಾಗೂ ನಾಡು-ನುಡಿಯ ಬಗೆಗಿನ ಅಭಿಮಾನವನ್ನು ಜನ ಮನದಲ್ಲಿ ಮೂಡಿಸುವ ನಿಟ್ಟಿನಲ್ಲಿ ಸರ್ವೆ ನಂ 2 ರಲ್ಲಿ 0.13ಗುಂಟೆ ಸರ್ಕಾರಿ ಜಮೀನನ್ನು ಕನ್ನಡ ಭವನ ನಿರ್ಮಿಸುವ ಉದ್ದೇಶಕ್ಕಾಗಿ ಜಾಗವನ್ನು ಗುರುತಿಸಲಾಗಿದೆ.



ಈ ಸಂದರ್ಭದಲ್ಲಿ ಮಂಡ್ಯ ವಿಧಾನಸಭಾ ಕ್ಷೇತ್ರದ ಶಾಸಕರಾದ ರವಿಕುಮಾರ್, ಮೇಲುಕೋಟೆ ವಿಧಾನಸಭಾ ಕ್ಷೇತ್ರದ ಶಾಸಕರಾದ ದರ್ಶನ್ ಪುಟ್ಟಣ್ಣಯ್ಯ, ಮೂಡ ಅಧ್ಯಕ್ಷರಾದ ಬಿ.ಪಿ.ಪ್ರಕಾಶ್, ಜಿಲ್ಲಾಧಿಕಾರಿಗಳಾದ ಡಾ ಕುಮಾರ, ಜಿಪಂ ಸಿಇಒ ಕೆ. ಆರ್. ನಂದಿನಿ, ಪೊಲೀಸ್ ವರಿಷ್ಠಾಧಿಕಾರಿ ಡಾ ವಿ.ಜೆ.ಶೋಭಾರಾಣಿ ಹಾಗೂ ಇತರೆ ಗಣ್ಯರು ಉಪಸ್ಥಿತರಿದ್ದರು.

# ಬುದನೂರು ಉತ್ಸವದಲ್ಲಿ 3 ದಿನ ಹೆಲಿ ಟೂರಿಸಂ

**ಮಂಡ್ಯ:** ಫೆ.21, 22ರಂದು ನಡೆಯಲಿರುವ ಬೂದನೂರು ಉತ್ಸವ-2026ರ ಪ್ರಯುಕ್ತ ಪ್ರವಾಸಿಗರನ್ನು ಆಕರ್ಷಿಸುವ ಸಲುವಾಗಿ ಮೂರು ದಿನಗಳ ಹೆಲಿ ಟೂರಿಸಂ ಆಯೋಜಿಸಿರುವ ಹಿನ್ನೆಲೆಯಲ್ಲಿ ಶಾಸಕ ಪಿ.ರವಿಕುಮಾರ್ ನೇತೃತ್ವದಲ್ಲಿ ಸ್ಥಳ ಪರಿಶೀಲಿಸಲಾಯಿತು.

ಫೆ. 20ರಿಂದ 3 ದಿನಗಳ ಕಾಲ ಹೆಲಿ ಟೂರಿಸಂ ಅನ್ನು ಆಯೋಜನೆ ಮಾಡಲಾಗಿದ್ದು ಸಾರ್ವಜನಿಕರು ಹೆಲಿಕಾಪ್ಟರ್ ಮೂಲಕ ಬೂದನೂರು ಉತ್ಸವವನ್ನು ಕಣ್ತುಂಬಿಕೊಳ್ಳಬಹುದು. ಈ ನಿಟ್ಟಿನಲ್ಲಿ ಜಿಲ್ಲಾಧಿಕಾರಿ ಡಾ. ಕುಮಾರ, ಜಿಲ್ಲಾ ಪಂಚಾಯಿತಿ ಸಿಇಒ ಕೆ.ಆರ್.ನಂದಿನಿ ಅವರು 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ನಡೆದ ಹೋಟೆಲ್ ಅಮರಾವತಿ ಬಳಿ ಇರುವ ಸ್ಥಳವನ್ನು ಪರಿಶೀಲನೆ ನಡೆಸಿದರು. ಉಪವಿಭಾಗಾಧಿಕಾರಿ ಶಿವಮೂರ್ತಿ, ಅಪರ ಪೊಲೀಸ್ ಅಧಿಕ್ಷಕ ಸಿ.ಇ.ತಿಮ್ಮಯ್ಯ ಹಾಜರಿದ್ದರು.



# ಫೆ.21,22 'ಬೂದನೂರು ಉತ್ಸವ 'ಅದ್ದೂರಿ ಆಚರಣೆಗೆ ಸಿದ್ದತೆ

## ಬುದನೂರಿನಲ್ಲಿ ಅನಂತಪದ್ಮನಾಭ ದೇವಾಲಯ ಜಿಲ್ಲೆಗೆ ಹೆಮ್ಮೆಯ ಸಂಗತಿ: ಶಾಸಕ

**ಮಂಡ್ಯ:** ಕಳೆದ ಬಾರಿಯ ಬುದನೂರು ಉತ್ಸವವನ್ನು ವಿಜೃಂಭಣೆಯಿಂದ ನಡೆಸಲಾಗಿತ್ತು ಸದರಿ ವರ್ಷವೂ ಸಹ ಅದ್ದೂರಿಯಾಗಿ ಬುದನೂರು ಉತ್ಸವವನ್ನು ಆಚರಿಸಲಾಗುವುದು ಎಂದು ಮಂಡ್ಯ ವಿಧಾನಸಭಾ ಕ್ಷೇತ್ರದ ಶಾಸಕ ಪಿ ರವಿಕುಮಾರ್ ಶುಕ್ರವಾರ ಹೇಳಿದರು.

ಬೂದನೂರು ಉತ್ಸವ -2026 ರ ಪೂರ್ವ ತಯಾರಿ ಚಟುವಟಿಕೆಗಳ ಕುರಿತು ಚರ್ಚಿಸಲು ಶುಕ್ರವಾರ ಜಿಪಂ ಸಭಾಂಗಣದಲ್ಲಿ ಸಭೆ ಆಯೋಜಿಸಲಾಗಿತ್ತು

ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಸಕ ರವಿ ಕುಮಾರ್ ಅವರು ಮಾತನಾಡಿ ಕಳೆದ ಬಾರಿ ಸರ್ಕಾರದಿಂದ 15 ಲಕ್ಷ ಹಣ ಮಾತ್ರ ಬೂದನೂರು ಉತ್ಸವಕ್ಕೆ ಬಿಡುಗಡೆ ಮಾಡಲಾಗಿತ್ತು ಯಾರಿಂದಲೂ ಹಣ ಕೇಳದೆ ಸುಮಾರು 1 ಕೋಟಿ ವೆಚ್ಚದಲ್ಲಿ ಕಳೆದ ಬಾರಿಯ ಬುದನೂರು ಉತ್ಸವವನ್ನು ವಿಜೃಂಭಣೆಯಿಂದ ನಡೆಸಲಾಗಿತ್ತು ಎಂದು ಹೇಳಿದರು.

ಸ್ಥಳೀಯ ಗ್ರಾಮಸ್ಥರ ಹಾಗೂ ಸಾರ್ವಜನಿಕರ ಸಹಕಾರದಿಂದ ಈ ಬಾರಿಯ ಬುದನೂರು ಉತ್ಸವವನ್ನು ವಿಜೃಂಭಣೆಯಿಂದ ಆಚರಿಸೋಣ. ಪ್ರವಾಸಿಗರನ್ನು ಹಾಗೂ ಸ್ಥಳೀಯರಿಗಾಗಿ ಸದರಿ ವರ್ಷದ ಉತ್ಸವದಲ್ಲಿ ಫೆಬ್ರವರಿ 20 ರಿಂದ 3 ದಿನಗಳ ಕಾಲ ಹೆಲಿ ಟೂರಿಸಂ ಆಯೋಜನೆ ಮಾಡಲಾಗುತ್ತದೆ. ಸ್ಥಳೀಯರು ಹಾಗೂ ಸಾರ್ವಜನಿಕರಿಗೆ ಕೈಗೆಟುಕುವ ದರದಲ್ಲಿ ಬೆಲೆ ನಿಗದಿಪಡಿಸಲಾಗುವುದು. ಹೆಲಿಕಾಪ್ಟರ್ ಮೇಲಿಂದ ಸಾರ್ವಜನಿಕರು ಬುದನೂರು ಉತ್ಸವವನ್ನು ಕಣ್ತುಂಬಿಕೊಳ್ಳಬಹುದು ಎಂದು ಹೇಳಿದರು.



ಕೇರಳದಲ್ಲಿ ಬಿಟ್ಟರೆ ಅನಂತಪದ್ಮನಾಭ ದೇವಾಲಯ ಇರುವುದು ಮಂಡ್ಯ ಜಿಲ್ಲೆಯ ಬೂದನೂರಿನಲ್ಲಿ ಮಾತ್ರ ಇದು ನಮ್ಮ ಜಿಲ್ಲೆಗೆ ಹೆಮ್ಮೆಯ ಸಂಗತಿಯಾಗಿದೆ. ಬೂದನೂರು ಉತ್ಸವಕ್ಕೆ ಬರಲು ಸಾರ್ವಜನಿಕರಿಗೆ ವಾಹನಗಳ ಸೌಲಭ್ಯ ಹಾಗೂ ವಾಹನಗಳಿಗೆ ಅಚ್ಚುಕಟ್ಟಾಗಿ ಪಾರ್ಕಿಂಗ್ ವ್ಯವಸ್ಥೆಯನ್ನು ಕಲ್ಪಿಸಲಾಗುವುದು ಎಂದರು.

ವಿವಿಧ ಕಲಾತಂಡಗಳೊಂದಿಗೆ ಹಳೆಬೂದನೂರಿನಿಂದ ಮೆರವಣಿಗೆ ಪ್ರಾರಂಭವಾಗಲಿದೆ. ಸ್ಥಳೀಯರು ಸಹಕರಿಸಿದರೆ 37 ಪೂಜಾ ಕುಣಿತ ತಂಡಗಳನ್ನು ಮೆರವಣಿಗೆಯಲ್ಲಿ ಆಯೋಜಿಸಿ ಅದ್ದೂರಿಯಾಗಿ ಮೆರವಣಿಗೆ ಮಾಡಲಾಗುವುದು. ಆಹಾರ ಮೇಳವನ್ನು ಸಹ ಸದರಿ ಉತ್ಸವದಲ್ಲಿ ನಡೆಸಲಾಗುವುದು ಎಂದು ತಿಳಿಸಿದರು.

ಕಸಬಾ ಹೋಬಳಿ ಪ್ರತಿ ಮನೆಯಿಂದ ರಂಗೋಲಿ ಸ್ಪರ್ಧೆ ಆಯೋಜಿಸಲಾಗುವುದು. ರಂಗೋಲಿ ಸ್ಪರ್ಧೆಯಲ್ಲಿ ವಿಜೇತರಾದ ಮೂರು ಜನರಿಗೆ ನಗದು ಬಹುಮಾನ ನೀಡಲಾಗುವುದು. ಭಾಗವಹಿಸಿದ ಎಲ್ಲಾ ಸ್ಪರ್ಧಾಳುಗಳಿಗೆ ವೈಯಕ್ತಿಕವಾಗಿ ನನ್ನ ಕಡೆಯಿಂದ ವಿಶೇಷ ಉಡುಗೊರೆಯನ್ನು ನೀಡಲಾಗುವುದು. ಮಕ್ಕಳಿಗೆ ಚಿತ್ರ ಕಲೆ ಸ್ಪರ್ಧೆ ಆಯೋಜನೆ ವಿಜೇತರಿಗೆ ನಗದು ಬಹುಮಾನ ಮತ್ತು ಭಾಗವಹಿಸಿದವರಿಗೆ ಉಡುಗೊರೆಯನ್ನು ನೀಡಲಾಗುವುದು ಎಂದು ತಿಳಿಸಿದರು.

ವರ್ಷದ ಬುದನೂರು ಉತ್ಸವದಲ್ಲಿ ಎರಡು ದಿನಗಳ ಕಾಲ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಸ್ಥಳೀಯ ಕಲಾವಿದರಿಗೆ ಹೆಚ್ಚಿನ ಆದ್ಯತೆಯನ್ನು ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ನೀಡಲಾಗುವುದು. ಗುರು ಕಿರಣ್ ಮತ್ತು ರಾಜೇಶ್ ಕೃಷ್ಣನ್ ಅವರಿಂದ ಸಂಗೀತ ರಸಮಂಜರಿ ಕಾರ್ಯಕ್ರಮವನ್ನು ಆಯೋಜಿಸಲಾಗುವುದು ಎಂದು ಹೇಳಿದರು.

ಜಿಲ್ಲಾಧಿಕಾರಿ ಡಾ.ಕುಮಾರ ಅವರು ಮಾತನಾಡಿ 2024 ರಲ್ಲಿ ಬೂದನೂರು ಉತ್ಸವವನ್ನು ಯಶಸ್ವಿಯಾಗಿ ಆಚರಣೆ ಮಾಡಲಾಗಿತ್ತು. ಬೂದನೂರಿನ ಕಾಶಿ ವಿಶ್ವನಾಥ ಮತ್ತು ಅನಂತಪದ್ಮನಾಭಯದ ವಾಸ್ತು ಶಿಲ್ಪ ಬೇಲೂರು ಹಳೇಬೀಡಿನಷ್ಟೆ ಸುಂದರವಾಗಿದೆ. ನಮ್ಮ ಸಾಂಸ್ಕೃತಿಕ ಪರಂಪರೆಯನ್ನು ಬಿಂಬಿಸುವ ದೇವಾಲಯಗಳಾಗಿ ಹೊರಹೊಮ್ಮಿದೆ. ದೇವಾಲಯದ ಕಲೆ ವಾಸ್ತುಶಿಲ್ಪವನ್ನು ಉಳಿಸಬೇಕು ಎಂಬ ಸದುದ್ದೇಶದಿಂದ ಮಂಡ್ಯ ವಿಧಾನಸಭಾ ಕ್ಷೇತ್ರದ ಶಾಸಕರಾದ ರವಿಕುಮಾರ್ ಅವರು ಬೂದನೂರು ಉತ್ಸವವನ್ನು ಆಚರಿಸಲು ಮುಂದಾಗಿದ್ದಾರೆ ಎಂದು ಹೇಳಿದರು.

ಬೂದನೂರು ಉತ್ಸವದ ಪೂರ್ವ ತಯಾರಿಗಾಗಿ ಈಗಾಗಲೇ ಸ್ವಾಗತ ಸಮಿತಿ, ವೇದಿಕೆ ಸಮಿತಿ ಸೇರಿದಂತೆ ಸಮೀತಿಗಳನ್ನು ರಚಿಸಲಾಗಿದೆ. ಬೂದನೂರು ಉತ್ಸವದಲ್ಲಿ ಸ್ಥಳೀಯರಿಗೆ ದೇಶಿ ಕ್ರೀಡೆಗಳನ್ನು ಆಯೋಜಿಸಲಾಗುವುದು. ವಸ್ತು ಪ್ರದರ್ಶನ ಮಳಿಗೆಗಳನ್ನು ತೆರೆಯಲಾಗುವುದು. ಗ್ರಾಮೀಣ ಕ್ರೀಡೆಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು. ಮಹಿಳೆಯರು ಮತ್ತು ಸಾರ್ವಜನಿಕರಿಗೆ ಪ್ರೋತ್ಸಾಹ ನೀಡಲು ರಂಗೋಲಿ, ಚಿತ್ರ ಕಲೆ, ಅಗ್ಗ ಜಗ್ಗಾಟ. ಕಬ್ಬಡಿ ಸೇರಿದಂತೆ ಇನ್ನಿತರ ಕ್ರೀಡೆಗಳನ್ನು ಆಯೋಜಿಸಲಾಗುತ್ತದೆ ಎಂದು ಹೇಳಿದರು.

ಗ್ರಾಮಸ್ಥರು ಮತ್ತು ಸ್ಥಳೀಯ ಮುಖಂಡರುಗಳು ಬುದನೂರು ಉತ್ಸವವನ್ನು ತಮ್ಮ ಮನೆಯ ಕಾರ್ಯಕ್ರಮ ಎಂದು ಭಾವಿಸಿ. ಮನಸ್ಥಪ ಬಿಟ್ಟು ಉತ್ಸವವನ್ನು ಯಶಸ್ವಿಯಾಗಿ ಆಚರಣೆ ಮಾಡಬೇಕು ಎಂದು ಹೇಳಿದರು.

ಹುತಾತ್ಮ ದಿನಾಚರಣೆ ಅಂಗವಾಗಿ ಮೌನಾಚರಣೆ

ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರು ಹುತಾತ್ಮರಾದ ನೆನಪಿಗಾಗಿ ಎಲ್ಲಾ ಅಧಿಕಾರಿಗಳು ಎರಡು ನಿಮಿಷಗಳ ಕಾಲ ಮೌನಾಚರಣೆ ಮಾಡಲಾಯಿತು.

ಸಭೆಯಲ್ಲಿ ಜಿಲ್ಲಾಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಆರ್ ನಂದಿನಿ. ಅಪರ ಜಿಲ್ಲಾಧಿಕಾರಿ ಬಿ.ಸಿ ಶಿವಾನಂದ ಮೂರ್ತಿ, ಉಪ ವಿಭಾಗಾಧಿಕಾರಿ ಶಿವಮೂರ್ತಿ, ಅಪರ ಪೊಲೀಸ್ ಅಧೀಕ್ಷಕರಾದ ತಿಮ್ಮಯ್ಯ, ಮಂಡ್ಯ ತಹಶೀಲ್ದಾರ್ ವಿಶ್ವನಾಥ್, ಮುಡಾ ಅಧ್ಯಕ್ಷ ಬಿ.ಪಿ ಪ್ರಕಾಶ್, ಮನ್ ಮುಲ್ ಅಧ್ಯಕ್ಷ ಶಿವಕುಮಾರ, ಮಾಜಿ ಜಿಲ್ಲಾ ಪಂಚಾಯತ್ ಸದಸ್ಯ ಯೋಗೇಶ್ ಸೇರಿದಂತೆ ಇನ್ನಿತರ ಗಣ್ಯರು ಉಪಸ್ಥಿತರಿದ್ದರು.

# ಕುಷ್ಠರೋಗಿಗಳನ್ನು ಘನತೆಯಿಂದ ಕಾಣಬೇಕು: ಡಾ.ಕುಮಾರ

**ಮಂಡ್ಯ:** ಕುಷ್ಠರೋಗಿಗಳ ಸಾಮಾಜಿಕವಾಗಿ ತಾರತಮ್ಯದಿಂದ ಕಾಣದೆ ಘನತೆಯಿಂದ ಕಾಣಬೇಕು ಎಂಬ ಅರಿವು ಮೂಡಿಸಲು ಜಾಥಾ ಆಯೋಜನೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ( ಕುಷ್ಠರೋಗ ನಿರ್ಮೂಲನಾ ವಿಭಾಗ) ಇವರ ಸಂಯುಕ್ತಾಶ್ರಯದಲ್ಲಿ ಇಂದು ಜಿಲ್ಲಾಧಿಕಾರಿಗಳ ಕಚೇರಿಯ ಮುಂಭಾಗದಲ್ಲಿ "ತಾರತಮ್ಯವನ್ನು ಕೊನೆಗೊಳಿಸುವುದು ಘನತೆಯನ್ನು ಕಾಪಾಡುವುದು" ಎಂಬ ಘೋಷವಾಕ್ಯದಡಿ ಆಯೋಜಿಸಲಾಗಿದ್ದ ಕುಷ್ಠರೋಗ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಹಸಿರು ನಿಶಾನೆ ತೋರಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಕುಷ್ಠರೋಗದ ಗುಣ ಲಕ್ಷಣಗಳ ಹೊಂದಿರುವವರು ತಕ್ಷಣ ಸ್ಥಳೀಯ ವೈದ್ಯರನ್ನು ಸಂಪರ್ಕಿಸಿ ಸೂಕ್ತ ಚಿಕಿತ್ಸೆ ಪಡೆಯಬೇಕು. ಮಹಾತ್ಮ ಗಾಂಧೀಜಿ ಅವರು ಕುಷ್ಠರೋಗ ನಿರ್ಮೂಲನೆಗಾಗಿ ಹೋರಾಡಿದವರು ಅವರ ಪುಣ್ಯಸ್ಮರಣೆಯ ದಿನದಂದು ಕುಷ್ಠರೋಗ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.



ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಆರ್ ನಂದಿನಿ ಅವರು ಮಾತನಾಡಿ ಕುಷ್ಠರೋಗದ ಕುರಿತು ಅರಿವು ಮೂಡಿಸಲು ಜಿಲ್ಲಾ ಮಟ್ಟದ ಜಾಗೃತಿ ಜಾಥಾ ಆಯೋಜಿಸಲಾಗಿದೆ. ಇದರ ಮುಖ್ಯ ಉದ್ದೇಶ ಕುಷ್ಠರೋಗಿಗಳನ್ನು ಸಮಾಜದಲ್ಲಿ ಘನತೆಯಿಂದ ಕಾಣುವುದು ಹಾಗೂ ಗೌರವಯುತವಾಗಿ ನಡೆಸಿಕೊಳ್ಳುವುದಾಗಿದೆ. ಅದರಲ್ಲೂ ಮುಖ್ಯವಾಗಿ ಕುಟುಂಬದವರು ಕುಷ್ಠರೋಗಿಗಳನ್ನು ಉತ್ತಮವಾಗಿ ಕಂಡಾಗ ಮಾತ್ರ ಕುಷ್ಠರೋಗಿಗಳು ಮಾನಸಿಕವಾಗಿ ಕುಗ್ಗದೆ ಸಮಾಜದಲ್ಲಿ ಬದುಕಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಎಲ್ಲರಂತೆ ಕುಷ್ಠರೋಗಿಗಳಿಗೂ ಸಮಾಜದಲ್ಲಿ ಮುಕ್ತ ಅವಕಾಶ ದೊರೆಯಬೇಕು. ಅವರು ಸಹ ಸರ್ವಗಿಣ ಅಭಿವೃದ್ಧಿ ಹೊಂದಬೇಕು ಹೊಂದಬೇಕು ಎಂದು ಜಾಗೃತಿ ಜಾಥಾವನ್ನು ಹಮ್ಮಿಕೊಳ್ಳಲಾಗಿದೆ. ಕುಷ್ಠರೋಗಿಗಳ ಮನೆಗೆ ಭೇಟಿ ನೀಡಿ ಅವರ ಕುಟುಂಬಕ್ಕೆ ಧೈರ್ಯ ತುಂಬುವುದು ಸಹ ಇದರ ಉದ್ದೇಶ. ಕುಷ್ಠರೋಗ ಗುಣಮುಖ ವಾಗುವ ಕಾಯಿಲೆ, ಕುಷ್ಠರೋಗಿಗಳನ್ನು ಮುಟ್ಟುವುದರಿಂದ ಕಾಯಿಲೆ ಹರಡುವುದಿಲ್ಲ ಎಂಬುದರ ಕುರಿತು ಅರಿವು ಮೂಡಿಸುವ ಕೆಲಸ ಮಾಡಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಕೆ ಮೋಹನ್, ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ.ಎಂ.ಎನ್ ಆಶಾಲತಾ, ಆರ್ .ಸಿ ಎಚ್ ಅಧಿಕಾರಿ ಡಾ.ಕೆ.ಪಿ ಅಶ್ವಥ್, ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ. ಸೋಮಶೇಖರ್, ಆರೋಗ್ಯ ನಿರೀಕ್ಷಣಾಧಿಕಾರಿ ವೇಣು ಗೋಪಾಲ್, ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ ಪುರಸ್ಕೃತರಾದ ಬಿ.ಎಸ್ ಅನುಪಮಾ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಶ್ರೀ ಪುರುಷ ಎಂಬ ಹೆಸರಿನಲ್ಲಿ "ಕನ್ನಡ ಭವನ": ಎನ್ ಚಲುವರಾಯಸ್ವಾಮಿ

**ಮಂಡ್ಯ:** 800 ವರ್ಷಗಳ ಹಿಂದೆ ಗಂಗಾ ಸಾಮ್ರಾಜ್ಯವನ್ನು ಕಟ್ಟಿ ಸಾಹಿತ್ಯ ಲೋಕಕ್ಕೆ ಕಾಣಿಕೆಯನ್ನು ನೀಡಿದ ಗಂಗ ಸಾಮ್ರಾಟ ಶ್ರೀ ಪುರುಷನ ಹೆಸರಿನಲ್ಲಿ ಕನ್ನಡ ಭವನ ಕಟ್ಟಬೇಕು. ಶ್ರೀ ಪುರುಷ ಕನ್ನಡ ಭವನವನ್ನು 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸವಿ ನೆನಪಿಗಾಗಿ ಎನ್ನುವುದನ್ನು ಬರೆದು, ಅದರ ಜೊತೆಗೆ ಶ್ರೀ ಪುರುಷ ಕನ್ನಡ ಭವನ ಎಂಬ ನಾಮಾಂಕಿತವನ್ನು ಮಾಡಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಎನ್. ಚೆಲುವರಾಯಸ್ವಾಮಿ ಅವರು ತಿಳಿಸಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಗರಸಭೆ,ಹಾಗೂ ಕನ್ನಡ ಸಾಹಿತ್ಯ ಪರಿಷತ್ ಇವರ ಸಹಯೋಗದಲ್ಲಿ 87 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಸವಿನೆನಪಿಗಾಗಿ " ಕನ್ನಡ ಭವನ " ಕಟ್ಟಡ ನಿರ್ಮಾಣದ ಶಂಕು ಸ್ಥಾಪನೆಯ ಕಾರ್ಯಕ್ರಮ ವನ್ನು ಉದ್ಘಾಟಿಸಿ ಮಾತನಾಡಿದರು.

87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಜಿಲ್ಲೆಯಲ್ಲಿ ಪಕ್ಷಾತೀತವಾಗಿ ಸಾರ್ವಜನಿಕರು, ಸಾಹಿತಿಗಳು, ಸಾಹಿತ್ಯ ಅಭಿಮಾನಿಗಳು ಮತ್ತು ಅನೇಕ ಸಂಘಟನೆಗಳು ನೀಡಿದ ಸಹಕಾರದಿಂದ ಯಶಸ್ವಿಯಾಗಿ ಮಾಡಲಾಯಿತು. ಅದರ ಸವಿ ನೆನಪಿಗಾಗಿ "ಕನ್ನಡ ಭವನ" ಕಟ್ಟಡದ ನಿರ್ಮಾಣದ ಶಂಕು ಸ್ಥಾಪನೆಯನ್ನು ನೆರವೇರಿಸಲಾಗಿದೆ ಎಂದು ಅವರು ತಿಳಿಸಿದರು.

87 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ವನ್ನು ಬಹುಶಃ ಇತಿಹಾಸದಲ್ಲಿ ಮೊದಲಬಾರಿಗೆ ಜಿಲ್ಲೆಯಲ್ಲಿ ಸಾಹಿತ್ಯ ಸಮ್ಮೇಳನವನ್ನು ದೊಡ್ಡ ಮಟ್ಟದಲ್ಲಿ ಇಡೀ ರಾಜ್ಯ, ರಾಷ್ಟ್ರ, ಪ್ರಪಂಚದ ಅನೇಕ ಕನ್ನಡಿಗರು ಮೆಚ್ಚುಗೆಯನ್ನ ವ್ಯಕ್ತಪಡಿಸುವ ರೀತಿಯಲ್ಲಿ ನಮ್ಮ ಜಿಲ್ಲೆಯಲ್ಲಿ ಕನ್ನಡ ಸಮ್ಮೇಳನ ಆಗಿದೆ ಎಂದರು.

ಕನ್ನಡ ಸಾಹಿತ್ಯ ಸಮ್ಮೇಳನ ದೊಡ್ಡ ಮಟ್ಟಕ್ಕೆ ಯಶಸ್ವಿಯಗಲು ಮತ್ತು ಜಿಲ್ಲೆಯ ಕೀರ್ತಿ,ಗೌರವ ಬರಲು ಜಿಲ್ಲಾಡಳಿತದ ಪಾತ್ರ ಬಹಳ ಅಪಾರವಾದದ್ದು ಹಾಗೂ

ಡಾ. ನಿರ್ಮಲಾನಂದನಾಥ ಸ್ವಾಮೀಜಿಯವರು ಪ್ರತಿಕ್ಷಣದಲ್ಲೂ ಜಿಲ್ಲಾಡಳಿತ ಜೊತೆ ನಿಂತು ಯಶಸ್ಸನ್ನು ಪಡೆಯುವಂತೆ ಅಪಾರವಾದ ಕೊಡುಗೆ ಯನ್ನು ನೀಡಿದ್ದಾರೆ. ಕನ್ನಡ ಭವನ ಕಟ್ಟಲು ಸಹ ಅವರು ಮಾರ್ಗದರ್ಶನವನ್ನು ನೀಡಿದ್ದಾರೆ ಎಂದು ಹೇಳಿದರು.

ಶಾಶ್ವತವಾಗಿ 87 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸವಿ ನೆನಪು ಇರಬೇಕು ಎಂದೂ ಕನ್ನಡ ಭವನ ಕಟ್ಟಡ ನಿರ್ಮಾಣವನ್ನು ಮಾಡಲಾಗಿದೆ.

ನಮ್ಮ ಮುಖ್ಯಮಂತ್ರಿಗಳು ಜಿಲ್ಲೆಯ ಸಾಂಸ್ಕೃತಿಕವಾಗಿ ಮತ್ತು ದೇವಸ್ಥಾನ ಅಭಿವೃದ್ಧಿಗೆ 50 ಕೋಟಿ ವಿಶೇಷ ಅನುದಾನವನ್ನು ನೀಡಿದ್ದಾರೆ.

ಮಂಡ್ಯ ಜಿಲ್ಲಾ ಶಾಸಕರಾದ ಪಿ ರವಿಕುಮಾರ್, ಮೇಲುಕೋಟೆ ಶಾಸಕರಾದ ದರ್ಶನ್ ಪುಟ್ಟಣ್ಣಯ್ಯ, ಶ್ರೀರಂಗಪಟ್ಟಣ ಶಾಸಕರಾದ ಎ. ಬಿ. ರಮೇಶ್ ಬಂಡಿಸಿದ್ದೇಗೌಡ ರವರು ತಲಾ 1 ಕೋಟಿ ಯನ್ನು ಕನ್ನಡ ಭವನಕ್ಕೆ ಮೂರು ಕೋಟಿ ಅನುದಾನವನ್ನು ನೀಡಿದ್ದಾರೆ ಎಂದರು.

ಮಂಡ್ಯ ಅಭಿವೃದ್ಧಿಗೆ ನಮ್ಮ ಶಕ್ತಿ ಇರುವವರೆಗೂ ಜಿಲ್ಲೆಯ ಅಭಿವೃದ್ಧಿ, ಜಿಲ್ಲೆಯ ಸೇವೆಯನ್ನ ನಿಮ್ಮೆಲ್ಲರ ಸೇವೆಯನ್ನು ಮಾಡುತ್ತೇನೆ ಎಂದು ಹೇಳಿದರು.

ವಾಲಿಬಾಲ್ ಕ್ರೀಡಾಂಗಣಕ್ಕೆ ಸೀಮಿತವಾದ ಜಾಗವನ್ನ ಆಯ್ಕೆ ಮಾಡಲಾಗಿದೆ. ವಾಲಿಬಾಲ್ ಕ್ರೀಡಾಂಗಣಕ್ಕೆ ಯಾವುದೇ ತೊಂದರೆಯಾಗದಂತೆ 70 ಲಕ್ಷ ಅನುದಾನವನ್ನು ನೀಡಿ ಟೆಂಡರ್ ಅನ್ನು ಕರೆಯಲಾಗಿದೆ. ಪೂರ್ಣಯಾಗಿ ಸ್ಪೋರ್ಟ್ಸ್ ಕಾಂಪ್ಲೆಕ್ಸ್ ಆಗಬೇಕು ಎಂದರು.

ಜಿಲ್ಲೆಯಲ್ಲಿ ಸಾಹಿತ್ಯದ ಕೊಡುಗೆ ತುಂಬಾ ಅಪಾರವಾದದ್ದು ಜಿಲ್ಲೆಯ ನೆಲ,ನೀರು, ರಾಜಕೀಯ ಕ್ಷೇತ್ರ, ಸಾಹಿತ್ಯ ಕ್ಷೇತ್ರ, ರೈತರು ಕ್ಷೇತ್ರದಲ್ಲಿ ಮಹತ್ವವಾದ ಹಿನ್ನಲೆ ಇದೆ ಎಂದು ಹೇಳಿದರು. ಕನ್ನಡ ಭವನದ ಶಂಕು ಸ್ಥಾಪನೆಯನ್ನ ಬಹಳ ಸಂತೋಷದಿಂದ ಸ್ವಾಮೀಜಿಯವರ ನೇತೃತ್ವದಲ್ಲಿ ಶ್ರೀ ಬಾಲಗಂಗಾಧರನಾಥ ಸ್ವಾಮೀಜಿಯವರು ಈ ನಾಡಿಗೆ ಕೊಟ್ಟಂತಹ ಕೊಡುಗೆ, ನಿರ್ಮಾಣ ಹಾಗೂ ಮಾರ್ಗದರ್ಶನ, ಅವರ ಶ್ರಮ ಮತ್ತು ಅನೇಕ ವಿಚಾರಗಳನ್ನು ಕಾಣಬೇಕು ಎಂದರು. ಜಿಲ್ಲಾ ಶಾಸಕರಾದ ಪಿ ರವಿಕುಮಾರ್ ಮಾತನಾಡಿ ಜಿಲ್ಲೆಯನ್ನು ಪ್ರಗತಿಪರದತ್ತ ಕೊಂಡೊಯ್ಯಬೇಕು. 87ನೇ ಸಾಹಿತ್ಯ ಸಮ್ಮೇಳನ ಕಳೆದ ವರ್ಷ ಡಿಸೆಂಬರ್ ನಲ್ಲಿ ಬಹಳ ಅದ್ದೂರಿಯಾಗಿ 10 ಲಕ್ಷ ಜನಗಳ ಸಮ್ಮುಖದಲ್ಲಿ ಬಹಳ ವೈಭವಯುತವಾಗಿ ಮಂಡ್ಯಕ್ಕೆ ಹೆಸರು ತಂದು ಕೊಡುವಂತಹ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಮಾಡಲಾಗಿದೆ. ಎಂದರು



ಜಿಲ್ಲೆಯಲ್ಲಿ 87ನೇ ಸಾಹಿತ್ಯ ಸಮ್ಮೇಳನ ನಡೆದಿತ್ತು ಅನ್ನೋದು ಚಿತ್ರದಲ್ಲಿ ಮಾತ್ರ ಇರಬಾರದು. ಆಗಾಗಿ ಶಾಶ್ವತ ನೆಲೆಯನ್ನು ಕಲ್ಪಿಸಬೇಕು. ಆದ್ದರಿಂದ ಜಿಲ್ಲೆಯಲ್ಲಿ ಐದುವರೆ ಕೋಟಿ ವೆಚ್ಚದಲ್ಲಿ ಬೃಹತ್ ಕನ್ನಡ ಭವನವನ್ನ ಕಟ್ಟಬೇಕು ವರ್ಷದ ಒಳಗಡೆ ಅದರ ಉದ್ಘಾಟನೆಯನ್ನು ಕೂಡ ಮಾಡುತ್ತೇವೆ ಎಂದು ಹೇಳಿದರು

ವಾಲಿಬಾಲ್ ಕ್ರೀಡಾಂಗಣಕ್ಕೆ 70 ಲಕ್ಷ ಹಣವನ್ನು ಬಿಡುಗಡೆ ಮಾಡಲಾಗಿದೆ ಕೆಲವೇ ಎರಡು ಮೂರು ತಿಂಗಳಲ್ಲಿ ಉತ್ತಮವಾದ ವಾಲಿಬಾಲ್ ಕೋರ್ಟ್ ಅನ್ನು ನಿರ್ಮಾಣ ಮಾಡಿ ಕ್ರೀಡಾ ಅಭಿಮಾನಿಗಳಿಗೆ ಅರ್ಪಣೆಯನ್ನು ಮಾಡುತ್ತೇವೆ. ಜೊತೆಗೆ ಬ್ಯಾಸ್ಕೆಟ್‌ಬಾಲ್ ಸ್ಟೇಡಿಯಂ ಅನ್ನು ಮೂರೂವರೆ ಕೋಟಿಯಲ್ಲಿ ಅತ್ಯುತ್ತಮವಾದ ಇಂಟರ್ನ್ಯಾಷನಲ್ ಸ್ಟೇಡಿಯಂ ಆಗಿ ನಿರ್ಮಾಣ ಮಾಡುತ್ತೇವೆ. ಮುಂದಿನ 15 ದಿನದಲ್ಲಿ ಭೂಮಿ ಪೂಜೆಯನ್ನ ಮಾಡಲಾಗುತ್ತದೆ ಎಂದು ಹೇಳಿದರು.

ವಿಶ್ವವಿದ್ಯಾನಿಲಯದ ಒಳಗಡೆ ಎರಡು ವರ್ಷದಿಂದ ಅರ್ಧಕ್ಕೆ ನಿಂತು ಹೋಗಿದ್ದ ಕ್ರೀಡಾಂಗಣಕ್ಕೆ 2 ಕೋಟಿ ರೂಪಾಯನ್ನ ಬಿಡುಗಡೆ ಮಾಡಲಾಗಿದೆ ಅದನ್ನು ಕೂಡ ಆರು ತಿಂಗಳಲ್ಲಿ ಸಂಪೂರ್ಣಗೊಳಿಸಿ ನಿಮ್ಮೆಲ್ಲರಿಗೂ ಉದ್ಘಾಟನೆಗೆ ಅರ್ಪಣೆಯನ್ನು ಮಾಡುತ್ತೇವೆ ಎಂದು ಹೇಳಿದರು.

ಹಲವಾರು ಅಭಿವೃದ್ಧಿ ಕಾರ್ಯಗಳು ಕೂಡ ಶರವೇಗದಲ್ಲಿ ಇನ್ನು ಎರಡುವರೆ ವರ್ಷದಲ್ಲಿ ನಡೆದು ಮಂಡ್ಯ ನಗರದ ಚಿತ್ರಣವನ್ನ ಬದಲಾಯಿಸುವುದಕ್ಕೆ 100 ಕೋಟಿಯನ್ನು ವಿನಿಯೋಗಿಸಿ ಮುಂದಿನ ಮೂರು ತಿಂಗಳೊಳಗಡೆ ಹೆಮ್ಮೆಯಿಂದ ಮಂಡ್ಯ ನಗರ ಬೇರೆ ನಗರಕ್ಕೆ ಮಾದರಿ ಆಗುವಂತಹ ಕೆಲಸವನ್ನ ಮಾಡುತ್ತೇವೆ ಎಂದು ಹೇಳಿದರು.

ಮೇಲುಕೋಟೆ ಶಾಸಕರಾದ ದರ್ಶನ್ ಪುಟ್ಟಣ್ಣಯ್ಯ ರವರು ಮಾತನಾಡಿ 87 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸವಿನೆನಪಿಗಾಗಿ ಕನ್ನಡ ಭವನ ಕಟ್ಟಡ ನಿರ್ಮಾಣವು ಸುಲಲಿತವಾಗಿ ಆಗಲಿ ಎಂದು ಹೇಳಿದರು.

ಜಿಲ್ಲಾಧಿಕಾರಿಗಳಾದ ಡಾ. ಕುಮಾರ ರವರು ಮಾತನಾಡಿ ರೂ.5.50 ಕೋಟಿ ವೆಚ್ಚದಲ್ಲಿಮಂಡ್ಯ ನಗರದ ಸರ್ ಎಂ. ವಿಶ್ವೇಶ್ವರಯ್ಯ ಒಳಾಂಗಣ ಕ್ರೀಡಾಂಗಣದ ಆವರಣದಲ್ಲಿ ಕನ್ನಡ ಭವನ ನಿರ್ಮಾಣದ ಶಂಕಸ್ಥಾಪನೆ ಮಾಡಲಾಗಿದೆ

ಕನ್ನಡದ ಐಕ್ಯತೆಯ ಧ್ಯೋತಕವಾಗಿ ನಮ್ಮ ಸಾಹಿತ್ಯ, ಸಂಸ್ಕೃತಿ, ಪರಂಪರೆಯನ್ನು ಬಿಂಬಿಸುವ ಹಾಗೂ ನಾಡು-ನುಡಿಯ ಬಗೆಗಿನ ಅಭಿಮಾನವನ್ನು ಜನ ಮನದಲ್ಲಿ ಮೂಡಿಸುವ ನಿಟ್ಟಿನಲ್ಲಿ ಸರ್ವೆ ನಂ 2 ರಲ್ಲಿ 0.13ಗುಂಟೆ ಸರ್ಕಾರಿ ಜಮೀನನ್ನು ಕನ್ನಡ ಭವನ ನಿರ್ಮಿಸುವ ಉದ್ದೇಶಕ್ಕಾಗಿ ಜಾಗವನ್ನು ಗುರುತಿಸಲಾಗಿದೆ ಎಂದು ಹೇಳಿದರು.

ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಪರಮಪೂಜ್ಯ ಜಗದ್ಗುರು ಶ್ರೀ ಡಾ. ನಿರ್ಮಲಾನಂದ ಮಹಾಸ್ವಾಮೀಜಿ ರವರು ಮಾತನಾಡಿ ವ್ಯಕ್ತಿಗೆ ಐದು ಪಂಚಕೋಶಗಳು ಮುಖ್ಯ, ಸುಮಾರು ಮೂರನೇ ಶತಮಾನದಲ್ಲಿ ಅಂದಿಗೆ ಅವಶ್ಯಕತೆ ಇದ್ದಂತಹ ಗಂಗಾ ಸಾಮ್ರಾಜ್ಯವನ್ನು ಕಟ್ಟಿ ಅದೇ ಒಂದು ಪರಂಪರೆಯಲ್ಲಿ ಬಂದಂತಹ ಒಬ್ಬ ಶ್ರೀ ಪುರುಷ ಸಾಹಿತ್ಯಕ್ಕೆ, ಚರಿತ್ರೆಗೆ, ನಾಡಿನ ಸಮೃದ್ಧಿಗೆ ಬಹು ದೊಡ್ಡ ಕಾಣಿಕೆ ಕೊಟ್ಟವರು. ಅವರ ಹೆಸರಿನಲ್ಲಿ ಕನ್ನಡ ಭವನ ಆಗಬೇಕು. ಮಕ್ಕಳಿಗೆ ಇತಿಹಾಸ ಪ್ರಜ್ಞೆಯನ್ನು ಕೂಡ ಮೂಡಿತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಂಡ್ಯ ವಿಧಾನಸಭಾ ಕ್ಷೇತ್ರದ ಶಾಸಕರಾದ ರವಿಕುಮಾರ್, ಮೇಲುಕೋಟೆ ವಿಧಾನಸಭಾ ಕ್ಷೇತ್ರದ ಶಾಸಕರಾದ ದರ್ಶನ್ ಪುಟ್ಟಣ್ಣಯ್ಯ, ಜಿಲ್ಲಾಧಿಕಾರಿಗಳಾದ ಡಾ ಕುಮಾರ, ಜಿಪಂ ಸಿಇಒ ಕೆ. ಆರ್. ನಂದಿನಿ, ಪೊಲೀಸ್ ವರಿಷ್ಠಾಧಿಕಾರಿ ಡಾ ವಿ.ಜೆ.ಶೋಭಾರಾಣಿ, ಅಪಾರ ಜಿಲ್ಲಾಧಿಕಾರಿ ಶಿವನಂದಮೂರ್ತಿ, ಕರ್ನಾಟಕ ರಾಜ್ಯ ಸಣ್ಣ ಕೈಗಾರಿಗಳ ಅಭಿವೃದ್ಧಿ ನಿಗಮದ ಮಾನ್ಯ ಉಪಾಧ್ಯಕ್ಷರು ಲಕ್ಷ್ಮಿ ರಘುನಂದನ್, ಮೈಸೂರು ಸಕ್ಕರೆ ಕಂಪನಿ ನಿಯಮಿತ ಅಧ್ಯಕ್ಷರು ಎಂ.ಎಸ್ ಗಂಗಾಧರ್, ಮಂಡ್ಯ ನಗರ ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರು ಬಿ. ಪಿ ಪ್ರಕಾಶ್, ಕಾರ್ಯಪಾಲಕ ಅಭಿಯಂತರರು ಪುರುಷೋತ್ತಮ್ ಕೆ.ಎಂ , ನಗರಸಭೆ ಪೌರಾಯುಕ್ತರು ಪಂಪಶ್ರೀ.ಗಣ್ಯರು ಉಪಸ್ಥಿತರಿದ್ದರು.

# ಅಜವಾನ ಅಜೀರ್ಣಕ್ಕೆ ಪ್ರಕೃತಿ ನೀಡಿದ ವರದಾನ



ಸೌಮ್ಯಸನತ್

ಇಂದಿನ ಒತ್ತಡದ ಬದುಕಿನಲ್ಲಿ ಜನರು ತಾವೇ ಅಡುಗೆ ಮಾಡಿ ತಿನ್ನಲು ಸಮಯವಿಲ್ಲದ ಕಾರಣ ಹೊರಗಡೆ ಅಥವಾ ಹೋಟೆಲ್ ಗಳಲ್ಲಿ, ರಸ್ತೆ ಬದಿಗಳಲ್ಲಿ ಸಿಗುವಂತಹ ಮತ್ತೆ ಬೇಕರಿ ತಿಂಡಿ ತಿನಿಸುಗಳನ್ನು ಹೆಚ್ಚಾಗಿ ತಿನ್ನುತ್ತಾರೆ ಆದರೆ ಇವುಗಳು ಅವರ ಬಾಯಿಗೆ ರುಚಿಯನ್ನು ನೀಡುತ್ತವೆಯಾದರೂ ಆರೋಗ್ಯ ಹಾಳಾಗುತ್ತದೆ ಏಕೆಂದರೆ ಹೋಟೆಲ್ ಗಳಲ್ಲಿ ಹೆಚ್ಚಾಗಿ ತಿನಿಸುಗಳಲ್ಲಿ ಸೋಡ ಬಳಸುತ್ತಾರೆ.

ಈ ಸೋಡಾವನ್ನು ಅಡುಗೆಯಲ್ಲಿ ಬಳಸುವುದರಿಂದ ಊಟ ಮಾಡುವಾಗ ಜನರಿಗೆ ಊಟ ಹೆಚ್ಚಾಗಿ ಸೇರುವುದಿಲ್ಲ ಸ್ವಲ್ಪವೇ ಊಟ ತಿಂದ ತಕ್ಷಣ ಹೊಟ್ಟೆ ತುಂಬಿ ದಂತಾಗುತ್ತದೆ ಏಕೆಂದರೆ ಇದಕ್ಕೆ ಕಾರಣ ಅಡುಗೆಯಲ್ಲಿ ಬಳಸಿದ ಅಡುಗೆ ಸೋಡಾ ಇಂತಹ ಅಡುಗೆ ತಿನ್ನುವುದರಿಂದ ಗ್ಯಾಸ್ಟ್ರಿಕ್ ಎದೆಯೂರಿಯಂತಹ ಸಮಸ್ಯೆಗಳು ಎದುರಾಗುತ್ತವೆ ಈ ಸಮಸ್ಯೆಯನ್ನು ಪರಿಹರಿಸಿಕೊಳ್ಳಲು ನಾವು ಆಸ್ಪತ್ರೆಗೆ ಹೋಗುವ ಅವಶ್ಯಕತೆ ಇಲ್ಲ ಏಕೆಂದರೆ ಅದಕ್ಕೆ ನಾವೇ ಮನೆಯಲ್ಲೇ ಸಿಗುವ ವಸ್ತುಗಳನ್ನು ಬಳಸಿಕೊಂಡು ಮನೆಮದ್ದನ್ನು ತಯಾರಿಸಿಕೊಳ್ಳಬಹುದು.

ನೆಲದ ಮೇಲೆ ಚೆಲ್ಲಿದರೆ ತಕ್ಷಣ ಕಣ್ಣಿಗೆ ಕಾಣದಷ್ಟು ಚಿಕ್ಕ ಗಾತ್ರದ ಆದರೆ ದೈತ್ಯಾಕಾರದಷ್ಟು ಅಪಾರವಾದ ಔಷಧೀಯ ಗುಣಗಳನ್ನು ಹೊಂದಿರುವ ಈ ಮಸಾಲೆ ಕಾಳುಗಳಿಗೆ ಕನ್ನಡ ಭಾಷೆಯಲ್ಲಿ ಓಮು ಕಾಳು, ಅಜಮೋದ, ಅಜಮೂಲ, ಅಜವಾನ ಎಂದು ಕರೆಯುತ್ತಾರೆ. ಇನ್ನು, ಸಂಸ್ಕೃತ ಭಾಷೆಯಲ್ಲಿ ಯವನಿ ಅಥವಾ ಉಗ್ರಗಂಧ ಎಂದು ಕರೆಯುಲ್ಪಡುವ ಅಜಮೋದಿಕಾ ಎಂದೂ ಹಿಂದಿ ಹಾಗೂ ಉರ್ದು ಭಾಷೆಯಲ್ಲಿ ಅಜವಾಯಿನ್ ಎನ್ನುತ್ತಾರೆ. ಆಂಗ್ಲ ಭಾಷೆಯಲ್ಲಿ Ajowan, Ajwain ಎನ್ನುತ್ತಾರೆ. ವಿಶಿಷ್ಟವಾದ ಪರಿಮಳ, ಅಲ್ಪ ಖಾರದ ರುಚಿ ಇರುವ ಈ ಓಮು ಕಾಳು ಎಲ್ಲರಿಗೂ ಪರಿಚಿತ.

ಪ್ರಾಚೀನ ಕಾಲದಿಂದಲೂ ಮನೆ ಮದ್ದಾಗಿ ಬಳಕೆಯಲ್ಲಿರುವ ಅಜವಾನ ಅನುಪಮ ಔಷಧೀಯ ಗುಣಗಳನ್ನು ಹೊಂದಿದೆ. ಓಂಕಾಳನ್ನು ಹೀಗೆ ಬಳಸುವುದರಿಂದ ಯಾವ ಯಾವ ಸಮಸ್ಯೆಗಳನ್ನು ನಿವಾರಿಸಿಕೊಳ್ಳಬಹುದು ಎನ್ನುವುದನ್ನು ಈ ಒಂದು ಚಿಕ್ಕ ಲೇಖನದಲ್ಲಿ ತಿಳಿಯೋಣವೇ...

- ಜೀರ್ಣಕ್ರಿಯೆಗೆ ಅಜ್ವೈನ ಬಹಳ ಒಳ್ಳೆಯದು. ಅಧ್ಯಯನದ ಪ್ರಕಾರ, ಅಜ್ವೈನ್ ಗ್ಯಾಸ್ಟ್ರಿಕ್ (ಉಭಿಣಡುಭಿ) ಆಮ್ಲ ಮತ್ತು ಜೀರ್ಣಕಾರಿ ಕಿಣ್ವಗಳನ್ನು ಹೊಂದಿರುತ್ತದೆ. ಇದು ಜೀರ್ಣಕ್ರಿಯೆಯನ್ನು ಸುಧಾರಿಸುವ ಕೆಲಸ ಮಾಡುತ್ತದೆ. ಹೊಟ್ಟೆಯಲ್ಲಿರುವ ಸೋಂಕು (Infection) ನಿವಾರಣೆಗೆ ಓಂಕಾಳು ರಾಮಬಾಣವಾಗಿ ಕೆಲಸಮಾಡುತ್ತದೆ.
- ಅಜ್ವೈನ ನೀರು ದೇಹದಲ್ಲಿರುವ ಕೆಟ್ಟ ಕೊಲೆಸ್ಟ್ರಾಲನ್ನು ದೇಹದಿಂದ ಹೊರಗೆ ಹಾಕುತ್ತದೆ. ಅಧ್ಯಯನದಲ್ಲಿ ಓಂಕಾಳಿನ ಬೀಜಗಳು ಕೆಟ್ಟ ಕೊಲೆಸ್ಟ್ರಾಲ್ ಟ್ರೈಗ್ಲಿಸರೈಡ್ ಮತ್ತು ಎಲ್ಡಿಎಲ್ ಕೊಲೆಸ್ಟ್ರಾಲ್ ಮಟ್ಟವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ ಎಂಬುದು ಪತ್ತೆಯಾಗಿದೆ. ಓಂಕಾಳು ಹೊಟ್ಟೆಗೆ ಸಂಬಂಧಿಸಿದ ಸಮಸ್ಯೆಗೆ ಮಾತ್ರವಲ್ಲ ಹೃದಯಕ್ಕೆ ಪ್ರಯೋಜನಕಾರಿಯಾದ ಉತ್ತಮ ಕೊಲೆಸ್ಟ್ರಾಲ್ ಹೆಚ್ಚಾಗಲು ನೆರವಾಗುತ್ತದೆ.



- ಇತ್ತೀಚಿನ ದಿನಗಳಲ್ಲಿ ಬಹುತೇಕರನ್ನು ಕಾಡುತ್ತಿರುವ ಆರೋಗ್ಯ ಸಮಸ್ಯೆಗಳಲ್ಲಿ ರಕ್ತದೊತ್ತಡ ಕೂಡ ಒಂದು. ರಕ್ತದೊತ್ತಡದಿಂದ ಹೃದಯಾಘಾತವಾಗುವ ಸಾಧ್ಯತೆಯಿರುತ್ತದೆ. ಓಂಕಾಳಿನ ಸೇವನೆಯಿಂದ ಸಾಕಷ್ಟು ಪ್ರಯೋಜನವಿದೆ. ಓಂಕಾಳು ಸೇವನೆಯಿಂದ ಕ್ಯಾಲ್ಸಿಯಂ ಹೃದಯಕ್ಕೆ ಹೋಗುವುದನ್ನು ತಡೆಯುತ್ತದೆ. ರಕ್ತನಾಳಗಳನ್ನು ವಿಸ್ತರಿಸುವ ಕೆಲಸ ಮಾಡುತ್ತದೆ. ರಕ್ತದೊತ್ತಡವನ್ನು ನಿಯಂತ್ರಣದಲ್ಲಿಡುತ್ತದೆ.
- ಓಂ ಕಾಳು ಶ್ವಾಸಕೋಶಗಳನ್ನು ಉತ್ತಮವಾಗಿಡುತ್ತದೆ. ಕೆಮ್ಮು ಮತ್ತು ಕಫವನ್ನು ತಡೆಗಟ್ಟುವಲ್ಲಿ ಇದು ಪರಿಣಾಮಕಾರಿ. ಅಜ್ವೈನ ಸೇವನೆ ಮಾಡುವುದ್ರಿಂದ ಅಸ್ತಮ ಸಮಸ್ಯೆ ಕಡಿಮೆಯಾಗುತ್ತದೆ.
- ಹೊಟ್ಟೆಯಲ್ಲಿ ಯಾವುದೇ ಸಮಸ್ಯೆಯಾದ್ರೂ ಅದಕ್ಕೆ ಓಂಕಾಳು ಬಹಳ ಒಳ್ಳೆಯದು. ಫುಡ್ ಪಾಯಿಸನ್, ವಾಂತಿ, ವಾಕರಿಕೆ ಸಮಸ್ಯೆ ಕಾಡುತ್ತಿದ್ದಾಗ ಓಂಕಾಳಿನ ನೀರು ಬಹಳ ಒಳ್ಳೆಯದು.
- ನವಜಾತ ಶಿಶು ಹೆಚ್ಚು ಅಳುತ್ತಿದ್ದರೆ ಮನೆಯ ಹಿರಿಯರು ಅಜವಾನ ತಿಂದು ಮಗುವಿನ ಮುಖಕ್ಕೆ ಊದಲು ಹೇಳುತ್ತಾರೆ. ಏಕೆಂದರೆ ತಾಯಿಯಾದವಳು ಅಜವಾನ ತಿಂದು ಮಗುವಿನ ಮುಖಕ್ಕೆ ಊದುವ ಮಾತ್ರದಿಂದ ಇದರ ವಿಶಿಷ್ಟ ಪರಿಮಳ ಮಗುವಿನ ಶ್ವಾಸದೊಂದಿಗೆ ಹೊಟ್ಟೆಗೆ ಸೇರಿ, ಮಗುವಿನ ಹೊಟ್ಟೆ ಯುಬ್ಬರ ಕಡಿಮೆಯಾಗಿ ಮಗುವಿಗೆ ಆರಾಮ ವೆನಿಸುತ್ತದೆ.
- ಚಿಕ್ಕ ಮಕ್ಕಳು ಹಾಸಿಗೆಯಲ್ಲಿ ಮೂತ್ರ ಮಾಡುತ್ತಿದ್ದರೆ ಅಜವಾನ ಹಾಗೂ ಕರಿ ಎಳ್ಳು ಬೆಲ್ಲ ಸೇರಿಸಿ ಚಿಕ್ಕ ಚಿಕ್ಕ ಉಂಡೆಗಳನ್ನು ಮಾಡಿ ( ದಿನದಲ್ಲಿ ಎರಡು) ತಿನ್ನಿಸುವುದರಿಂದ ಗುಣಕಾಣಬಹುದು.
- ಕಫ ಕೆಮ್ಮುಗಳಿಗೆ ಎದೆಯ ಮೇಲೆ ಸಾಸಿವೆ ಎಣ್ಣೆ ಯನ್ನು ಸವರಿ, ಒಂದು ಬಟ್ಟೆಯಲ್ಲಿ ಓಮು ಕಾಳು ಸ್ವಲ್ಪ ಪಚ್ಚ ಕರ್ಪೂರ ಹಾಕಿ ಚೂರು ಬಿಸಿ ಮಾಡಿ ಎದೆಯ ಮೇಲೆ ಸವರಿ ವಾಸನೆ ತೆಗೆದುಕೊಳ್ಳುವುದರಿಂದ ಮೇಲೆನಿಸುವುದು.
- ಪ್ರಸವದ ನಂತರ ಬಾಣಂತಿಯರಿಗೆ ಅಜವಾನ ತಿನ್ನಲು ಕೊಡುತ್ತಾರೆ. ಅಥವಾ ಕಷಾಯ ಮಾಡಿಕೊಡುವುದರಿಂದ ಹಸಿವು ಹೆಚ್ಚಾಗಿ,ಉಂಡ ಆಹಾರ ಜೀರ್ಣವಾಗುತ್ತದೆ.ಇದು ಕ್ರಿಮಿನಾಶಕ ಗುಣ ಹೊಂದಿದ್ದು ಗರ್ಭಾಶಯ ಕೂಡ ಸ್ವಚ್ಛವಾಗುತ್ತದೆಯೆಂದು ಹೇಳುತ್ತಾರೆ.
- ಓಮು ಕಾಳು ಕಿಡ್ನಿಯಲ್ಲಿ ಕಲ್ಲು ಸೇರಿಕೊಳ್ಳುವುದನ್ನು ತಡೆಯುವಲ್ಲಿ ಪರಿಣಾಮಕಾರಿ. ಇದರ ಸೇವನೆಯಿಂದ ಲಿವರ್ ಮತ್ತು ಕಿಡ್ನಿ ಸುಲಭವಾಗಿ ಕಾರ್ಯ ನಿರ್ವಹಿಸಲು ಅನುವು ಮಾಡಿಕೊಡುತ್ತದೆ.
- ಗರ್ಭಾವಸ್ಥೆ ಸಮಯದಲ್ಲಿ ಓಮು ಕಾಳಿನ ಸೇವನೆ ರಕ್ತಶುದ್ಧೀಕರಣಗೊಳಿಸಿ,ದೇಹದಲ್ಲಿ ರಕ್ತ ಸಂಚಲನ ಹೆಚ್ಚಿಸುತ್ತದೆ.
- ಥಂಡಿ ಅಥವಾ ಚಳಿ ವಾತಾವರಣವಿದ್ದಾಗ, ಈ ಕಾಳನ್ನು ತಿಂದರೆ ಕೆಮ್ಮು ಮತ್ತು ನೆಗಡಿ ಉಪಶಮನವಾಗುತ್ತದೆ. ಓಮನ್ನು ಅಗಿದು ಬಿಸಿ ನೀರಿನೊಂದಿಗೆ ನುಂಗಬೇಕು. ಇದು ಅಸ್ತಮಾ ಖಾಯಿಲೆಗೂ ಸೂಕ್ತ. ಬೆಲ್ಲದೊಂದಿಗೆ ಓಮು ಕಾಳನ್ನು ಸೇರಿಸಿ ದಿನಕ್ಕೆ ಎರಡು ಬಾರಿ ಸೇವಿಸಬೇಕು.
- ಸ್ವಲ್ಪ ಪ್ರಮಾಣದ ಓಂ ಕಾಳುಗಳನ್ನು ನೇರವಾಗಿ ಅಥವಾ ಊಟದ ನಂತರ ಮೌತ್ ಫ್ರೆಶ್ನರ್ ಮಿಶ್ರಣದಲ್ಲಿ ಸೇವಿಸುವುದರಿಂದ ಜೀರ್ಣಕ್ರಿಯೆ ಮತ್ತು ಉಸಿರಾಟಕ್ಕೆ ಸಹಾಯ ಮಾಡುತ್ತದೆ.

**ಅಜ್ವೈನ್ ನೀರಿನ ಆರೋಗ್ಯ ಪ್ರಯೋಜನಗಳು:** ಖಾಲಿ ಹೊಟ್ಟೆಯಲ್ಲಿ ಅಜವೈನ್ ನೀರನ್ನು ಸೇವಿಸುವುದರಿಂದ ದೇಹದಲ್ಲಿ ಕೊಬ್ಬು ಕಡಿಮೆಯಾಗುತ್ತದೆ. ತೂಕವನ್ನು ನಿಯಂತ್ರಣದಲ್ಲಿ ಇಡಲು ಅಜ್ವೈನ ನೀರು ಬಹಳ ಉಪಯೋಗಕಾರಿ. ಇದು ಸರಳವಾದರೂ ಶಕ್ತಿಶಾಲಿ ಪಾನೀಯವಾದ ಅಜ್ವೈನ್ ನೀರು ಆರೋಗ್ಯವನ್ನು ಗಮನಾರ್ಹವಾಗಿ ಸುಧಾರಿಸುವ ಹಲವಾರು ಆರೋಗ್ಯ ಪ್ರಯೋಜನಗಳನ್ನು ನೀಡುತ್ತದೆ.

**ಅಡ್ಡಪರಿಣಾಮಗಳು ಮತ್ತು ಮುನ್ನೆಚ್ಚರಿಕೆಗಳು**

ಅಜ್ವೈನ್ ನೀರಿನ ಪ್ರಯೋಜನಗಳು ಹಲವಾರು ಇದ್ದರೂ , ಅದರ ಸಂಭಾವ್ಯ ಅಡ್ಡಪರಿಣಾಮಗಳ ಬಗ್ಗೆ ತಿಳಿದಿರುವುದು ಮತ್ತು ಅಗತ್ಯ ಮುನ್ನೆಚ್ಚರಿಕೆಗಳನ್ನು ತೆಗೆದುಕೊಳ್ಳುವುದು ಮುಖ್ಯ.



- ಕೆಲವು ಜನರಲ್ಲಿ, ಅಜ್ವೈನ್ ನೀರಿನ ಅತಿಯಾದ ಸೇವನೆಯು ಹೊಟ್ಟೆ ಅಸಮಾಧಾನ, ಆಮ್ಲೀಯ ಹಿಮ್ಮುಖ ಹರಿವು ಅಥವಾ ಎದೆಯುರಿಗೆ ಕಾರಣವಾಗಬಹುದು. ನಿಮ್ಮ ದೇಹವು ಹೇಗೆ ಪ್ರತಿಕ್ರಿಯಿಸುತ್ತದೆ ಎಂಬುದನ್ನು ನೋಡಲು ಸಣ್ಣ ಪ್ರಮಾಣದಲ್ಲಿ ಪ್ರಾರಂಭಿಸುವುದು ಸೂಕ್ತ.
- ಅಪರೂಪವಾಗಿದ್ದರೂ, ಕೆಲವು ವ್ಯಕ್ತಿಗಳು ದದ್ದುಗಳು, ತುರಿಕೆ ಅಥವಾ ಊತದಂತಹ ಅಲರ್ಜಿಯ ಪ್ರತಿಕ್ರಿಯೆಗಳನ್ನು ಅನುಭವಿಸಬಹುದು. ಈ ಯಾವುದೇ ಲಕ್ಷಣಗಳು ಕಂಡುಬಂದರೆ, ಬಳಕೆಯನ್ನು ನಿಲ್ಲಿಸಿ ವೈದ್ಯರನ್ನು ಸಂಪರ್ಕಿಸುವುದು ಉತ್ತಮ.
- ಗರ್ಭಿಣಿಯರು ತಮ್ಮ ಆಹಾರದಲ್ಲಿ ಅಜ್ವೈನ್ ನೀರನ್ನು ಸೇರಿಸುವ ಮೊದಲು ತಮ್ಮ ವೈದ್ಯರನ್ನು ಸಂಪರ್ಕಿಸಬೇಕು, ಏಕೆಂದರೆ ಇದು ಹಾರ್ಮೋನುಗಳ ಮಟ್ಟ ಮತ್ತು ಗರ್ಭಾಶಯದ ಸಂಕೋಚನದ ಮೇಲೆ ಪ್ರಭಾವ ಬೀರಬಹುದು.
- ನೀವು ಯಾವುದೇ ನಿರ್ದಿಷ್ಟ ಔಷಧಿಗಳನ್ನು ತೆಗೆದುಕೊಳ್ಳುತ್ತಿದ್ದರೆ, ವಿಶೇಷವಾಗಿ ರಕ್ತ ತೆಳುವಾಗುವುದು ಅಥವಾ ರಕ್ತದೊತ್ತಡಕ್ಕಾಗಿ, ಅಜ್ವೈನ್ ನೀರನ್ನು ಸೇವಿಸುವ ಮೊದಲು ನಿಮ್ಮ ವೈದ್ಯರೊಂದಿಗೆ ಚರ್ಚಿಸಿ, ಏಕೆಂದರೆ ಅದು ಈ ಔಷಧಿಗಳೊಂದಿಗೆ ಸಂವಹನ ನಡೆಸಬಹುದು.

ನಮ್ಮ ಆಹಾರದಲ್ಲಿ ಓಂ ಕಾಳುಗಳನ್ನು ಸೇರಿಸುವುದು ಒಟ್ಟಾರೆ ಯೋಗಕ್ಷೇಮವನ್ನು ಬೆಂಬಲಿಸಲು ಸುವಾಸನೆಯ ಮತ್ತು ನೈಸರ್ಗಿಕ ಮಾರ್ಗವಾಗಿದೆ. ಓಂ ಕಾಳುಗಳನ್ನು ಸಾಮಾನ್ಯವಾಗಿ ಬಳಕೆಗೆ ಸುರಕ್ಷಿತವಾಗಿದ್ದರೂ, ಆರೋಗ್ಯ ವೃತ್ತಿಪರರನ್ನು ಸಂಪರ್ಕಿಸುವುದು ಸೂಕ್ತವಾದುದು.

# ಹಠಾತ್ತನೆ ಬರೆಯುವ ಬರಹಕ್ಕೆ ಸ್ವಾದ ಉಂಟೇ?



ಸುಮಾರು ಮೂರು ವರ್ಷಗಳ ನಂತರ ಇತ್ತೀಚಿಗೆ ನಾನು ನನ್ನ ಗೆಳತಿಯೊಂದಿಗೆ ಕಡಲ ತೀರದೊಳು ಕುಳಿತು ಕಡಲಿನಲ್ಲಿ ಉದ್ಭವಿಸುವ ಅಲೆಗಳನ್ನು ಗಮನಿಸುತ್ತಿರುವಾಗ ಅವಳ ಮೊಬೈಲ್ ಗೆ ಬಂದ ಒಂದು ಕವನವನ್ನು ಓದುವಾಗ ಅವಳು ಹೇಳಿದ್ದು ಹೀಗೆ ಇತ್ತೀಚಿಗೆ ಕಾಣುವ ಬರಹಗಳಲ್ಲಿ ಕೇವಲ ಪದಗಳ ಜೋಡಣೆ ಮಾತ್ರ ಇರುತ್ತದೆ. ಆದರೇ ಅರ್ಥವತ್ತಾಗಿ ಇರುವುದಿಲ್ಲ, ನಿರಂತರತೆಯೂ ಕಾಣದು ಮಾರಾಯ ಏನಿದು ಯಾಕ್ ಹೀಗೆ? ಎಂದು ಕುತೂಹಲದಿಂದ ನನ್ನನ್ನು ಕೇಳಿದಾಗ ಅದಕ್ಕೆ ನಾವಿಬ್ಬರು ಮಾತಿಗಿಳಿದೆವು. ಹಾಗಾದರೆ ಕವನ ಎಂದರೇನು? ನಿನ್ನ ಪ್ರಕಾರ ಎಂದಾಗ ನಾನಂದೇ,


ಕವನ ಎಂಬುದು ಬರಿ ಪದಗಳ ಜೋಡಣೆ ಮಾಡಿ ಎದುರಲ್ಲಿರುವವರಿಗೆ ಓದುವ ಒಂದು ಸಣ್ಣ ಬರಹವಾಗಬಾರದು ಮತ್ತು ದಿನ ನಿತ್ಯ ಅಲ್ಲಲ್ಲಿ ನಡೆಸುವ ಸಾಹಿತ್ಯ ಸ್ಪರ್ಧೆಗಳಿಗೆ ಭಾಗವಹಿಸಿ ಗುಡ್ಡೆ ಹಾಕುವ ಪ್ರಶಸ್ತಿಗಳ ದಾಹಕ್ಕೆ ತರಾತುರಿಯಲ್ಲಿ ಮೂಡಿ ಬರೆಯುವ ಬರಹವಾಗಬಾರದು.ಭಾವನೆಗಳೇ ಇಲ್ಲದ,ಒಂದು ಸಾಲಿನಿಂದ ಮತ್ತೊಂದು ಸಾಲಿಗೆ ಹೊಂದಾಣಿಕೆಯೇ ಇಲ್ಲದ ಕೇವಲ ಮಾತಿನಂತಿರುವ ಬರಹಗಳಂತೂ ಆಗಿರಬಾರದು.ಅವರಿವರು ಬರೆಯುತ್ತಾರೆ,ಅವರಿವರು ಪ್ರಶಸ್ತಿ ಗಳಿಸುತ್ತಾರೆ, ಎನ್ನುವ ಮೊಂಡು ಹಠದಲ್ಲಿ ಹಠಾತ್ತನೆ ಬರೆಯುವ ಸ್ವಾದವೇ ಇಲ್ಲದ ಬರಹಗಳಾಗಬಾರದು ಗೆಳತಿ ಎಂದಾಗ.ನನಗೆ ಅದೆಲ್ಲ ಅರ್ಥ ಆಗದು ಬಿಡಿಸಿ ಹೇಳು ಮಾರಾಯ ಎಂದಾಗ, ಹಾಗಾದ್ರೆ ಕೇಳು ಕವನ ಎಂದರೆ ಸದಾ ಕನವರಿಸುತ್ತಾ ಮನದಾಳದಲ್ಲಿ ಉದ್ಭವವಾಗುವ ತುಡಿತಗಳನ್ನು,ನಮ್ಮೊಳಗಿನ ಭಾವನೆಗಳನ್ನು,ಇಲ್ಲಾ ನಮ್ಮೊಳಗಿನ ಹೇಳಿಕೊಳ್ಳಲಾಗದ ನೋವು ಅಥವಾ ನಲಿವುಗಳನ್ನು, ಯಾರಿಗೂ ಮುಕ್ತವಾಗಿ ಮನ ಬಿಚ್ಚಿ ಎದುರಲ್ಲಿ ಹೇಳಿಕೊಳ್ಳಲಾಗದ ಆದರೂ ಹೇಳಿಕೊಳ್ಳುವ ಆಸೆ,ಆಕಾಂಕ್ಷೆ ಹೊತ್ತು ಸಾಗುವ ಮೌನ ಧ್ವನಿಯು ನಮ್ಮೊಳಗಿರುವ ಪದಪುಂಜಗಳಿಂದ ಕೇವಲ ಕೆಲವೇ ಕೆಲವು ಸಾಲುಗಳಲ್ಲಿ ಒಂದು ನಿರ್ದಿಷ್ಟ ಚೌಕಟ್ಟಿನಲ್ಲಿ ಹಿಡಿದಿಡುವ ನೆಮ್ಮದಿಗಾಗಿ ಬರೆಯುವ ಬರಹವಾಗಿರಬೇಕು. ಇನ್ನು ಅದನ್ನು ಓದುವ ಪ್ರತಿಯೊಬ್ಬ ವ್ಯಕ್ತಿಯ ಅಂತರಾಳಕ್ಕೆ ಸರಾಗವಾಗಿ ಇಳಿದು,ನಿರಾಳ ಮನೋಭಾವವನ್ನು ಉಂಟು ಮಾಡಿ ಇಲ್ಲಾ ಅವರ ನೋವು/ನಲಿವಿಗೆ ಸ್ಪಂದಿಸುವ ಸ್ನೇಹಮಯಿ ಬರಹವಾಗಬೇಕು. ಅಂದಾಗಲೇ ಅದೊಂದು ಉತ್ತಮ ಕವನವಾಗುತ್ತದೆ ಎಂಬುದು ನನ್ನ ಅನಿಸಿಕೆ ಎಂದಾಗ ನನ್ನ ಬದಿಯಲ್ಲಿ ಕುಳಿತ ಗೆಳತಿ ಕಂಗಳು ತುಂಬಿ ಬಂದಿದ್ದವು. ಏನಾಯ್ತು ಯಾಕೆ ಎಂದಾಗ ಗದ್ಗದಿತವಾದ ಅವಳ ಧ್ವನಿ ನನ್ನ ಹೃದಯಕ್ಕೆ ಆ ಅಲೆಗಳ ಆರ್ಭಟದ ನಡುವೆಯೂ ನಮ್ಮಿಬ್ಬರ ಮೌನವು ಸಾಕಷ್ಟು ವಿಷಯ ವಿನಿಮಯ ಮಾಡಿದ್ದವು. ಕೇವಲ ಒಂದು ಪುಟ್ಟ ಅರ್ಥವಿರದ ಕವನವು ನಮ್ಮೊಳಗಿನ ಭಾವನೆಯನ್ನು ಹಂಚಿಕೊಳ್ಳಲು ಕಾರಣವಾಯ್ತು ಎನ್ನುವ ವಿಚಾರ ಓದುಗರಾದ ನಿಮಗೂ ಕವನ ಬರೆಯುವ ಬಗ್ಗೆ ನೀಡಿರಬಹುದು ಒಂದು ಒಳ್ಳೆ ಅಂಶ ಎನ್ನುವುದು ನನ್ನ ಅನಿಸಿಕೆ.. ನೀವೆಂನಂತೀರಿ....?

ಆನಂದ ಜಿ.ಎನ್.
ದಾಂಡೇಲಿ.(ಉ.ಕ.)

# " ಹೀಗೆ ಬಂದು ಹಾಗೆ ಹೋಗುವ ಸ್ನೇಹ ಸಾವಿರ.!"



ಹಿರಿಯೂರು ಪ್ರಕಾಶ್



ನಮ್ಮೆಲ್ಲರ ಜೀವನಪಯಣದಲ್ಲಿ ಕೆಲವರು ಅನಿರೀಕ್ಷಿತವಾಗಿ ಅಮರಿಕೊಂಡು ಅತ್ಯಂತ ಆತ್ಮೀಯವಾಗಿ ಹತ್ತಿರಕ್ಕೆ ಬಂದು ನಿಲ್ಲುತ್ತಾ ನಮ್ಮೊಡನೆ ಸಾಗುತ್ತಾರೆ. ಅವರಿಗೆ ಬನ್ನಿ ಅಂತ ನಾವೇನೂ ಆಹ್ವಾನ ಕೊಟ್ಟು ಕರೆದಿರುವುದಿಲ್ಲವಾದರೂ, ಕೆಲವರು ತಾವಾಗಿಯೇ ಎಷ್ಟು ಹತ್ತಿರಕ್ಕೆ ನಮ್ಮ ಜಿಂದಗಿಯಲ್ಲಿ ಜೀಕುತ್ತಾರೆಂದರೆ ಇಷ್ಟು ದಿನ ಇವರೆಲ್ಲಿದ್ದರಪ್ಪಾ ಎನ್ನುವಷ್ಟರ ಮಟ್ಟಿಗೆ ನಮ್ಮ ಎದೆಗೂಡಲ್ಲಿ ಭಾವನಾತ್ಮಕ ರಂಧ್ರ ಕೊರೆದು ಜಾಗ ಮಾಡಿ ಕೆಲಕಾಲ ಭದ್ರವಾಗಿ ಕೂತುಬಿಟ್ಟಿರುತ್ತಾರೆ.

ಹೀಗೆ ಬಂದವರ ಎಂಟ್ರಿಯಿಂದಾಗಿ ಅಲ್ಲಿಯವರೆಗೂ ನಮ್ಮ ಸನಿಹದಲ್ಲಿದ್ದವರ ಅಥವಾ ಇರಬೇಕೆಂದು ಕೊಂಡವರನ್ನೆಲ್ಲಾ ಸೈಲೆಂಟಾಗಿ ಸೈಡಿಗೆ ತಳ್ಳಿ ಹೊಸದಾಗಿ ನಮ್ಮತ್ತ ಬಾಗಿದ ಇಂಥವರ ಗೆಳೆತನಕ್ಕೆ ನಮ್ಮ ಮನಸ್ಸು ಎಂಬುದು ಅನ್ ಕಂಡೀಷನಲ್ ಆಗಿ ಫಿದಾ ಆಗಿಬಿಡುತ್ತದೆ. ಈ ಮನಸೇ ಒಂಥರಾ ವಿಚಿತ್ರ ಕಣ್ರೀ... !

ಆಲ್ ರೈಟ್ , ಈ ರೀತಿ ಆಕಸ್ಮಿಕವಾಗಿ ಅಥವಾ ಸಾಂಧರ್ಭಿಕವಾಗಿ ನಮ್ಮ ಸನಿಹಕ್ಕೆ ಬಂದು ತುಂಬಾನೇ ಹಚ್ಚಿಕೊಳ್ಳುವ ಕೆಲವರು ನಮ್ಮ ಜೊತೆ ಕೊನೆಯವರೆಗೂ ಹಾಗೇನೇ ಯಾಕೆ ಉಳಿಯಲಾರರು.... ಎಂಬ ಜಿಜ್ಞಾಸೆ ಹೀಗೆ ಬಂದು ಹಾಗೆ ಬಿಟ್ಟು ಹೋಗುವವರ ವರ್ತನೆಯನ್ನು ನೋಡಿದಾಗ ನಮ್ಮನ್ನು ಬೇಡವೆಂದರೂ ಆಗಾಗ್ಗೆ ಕಾಡುತ್ತಲೇ ಇರುತ್ತದೆ.

ನಮ್ಮ ಬದುಕಿನಲ್ಲಿ ಕೆಲವರು ಹಾಗೆ ಎಂಟ್ರಿ ಕೊಡುವಾಗ ನಮ್ಮ ಮನಸಿನ ಮೇಲೆ ತಂಗಾಳಿ ಬೀಸಿದಂತಹ ಅನುಭವವನ್ನು ಸೃಷ್ಟಿ ಮಾಡಿದರೆ, ಕಾರಣ ಕೊಡದೇ ನಮ್ಮಿಂದ ಹೊರಡುವಾಗ ಮನದಾಳದಲ್ಲೆಲ್ಲೋ ಒಂದೆಡೆ ಬಿರುಗಾಳಿಯಂತಹ ಗೊಂದಲವನ್ನು ಉಳಿಸಿಯೇ ಹೋಗುತ್ತಾರೆ. ಅದರ ಪರಿಣಾಮದ ಆಳ ಅಗಲಗಳು ಒಬ್ಬರಿಂದ ಮತ್ತೊಬ್ಬರಿಗೆ ವಿಭಿನ್ನವಾಗಿದ್ದು, ಆಯಾ ಸಂಬಂಧಗಳ ವ್ಯಾಪ್ತಿಯ ಮೇಲೆ ಅವುಗಳ ಆಯಸ್ಸು ನಿಂತಿರಬಲ್ಲವು.

ವಾಸ್ತವ ವರ್ತಮಾನ

ನನ್ನ ಜೀವನದಲ್ಲಂತೂ ಈ ತರಹದ ಗಿರಾಕಿಗಳ ದೊಡ್ಡ ಲಿಸ್ಟೇ ಇದೆ. ಅವರು ನನ್ನ ಬದುಕಿನ ಸಂಪರ್ಕಕ್ಕೆ ಎಷ್ಟು ಆಕಸ್ಮಿಕವಾಗಿ ಬಂದು ಆತ್ಮೀಯವಾಗಿ ಸೇರಿಕೊಳ್ಳುತ್ತಾರೋ, ದೀರ್ಘಕಾಲ ನೆಲೆನಿಲ್ಲದೇ , ಬಿಟ್ಟುಹೋಗುವ ಬಗೆಗಿನ ಒಂದು ಸಣ್ಣ ಸುಳಿವೂ ಸಹ ಕೊಡದೇ ಅಷ್ಟೇ ವೇಗವಾಗಿ ಸದ್ದಿಲ್ಲದೇ ಗಾಯಬ್ ಆಗಿಬಿಟ್ಟಿರುತ್ತಾರೆ. ಅವರೇಕೆ ನನ್ನತ್ತ ಅಂತಹಾ ಆಳವಾದ ಆತ್ಮೀಯತೆ ತೋರಿ ಬಂದರು, ಇಲ್ಲಿಯವರೆಗೂ ಅಷ್ಟೇಕೆ ಕ್ಲೋಸಾಗಿದ್ದರು, ಹಾಗಿದ್ದವರು ಯಾವ ಸಕಾರಣವೂ ಇಲ್ಲದೇ ಹೀಗೇಕೆ ಒಮ್ಮೆಲೇ ಬದುಕಿನ ಪುಟಗಳಿಂದ ತಮ್ಮ ಹೆಜ್ಜೆಗುರುತುಗಳನ್ನು ಅಳಿಸಿ ಹೋದರು.....ಎಂಬಿತ್ಯಾದಿ ಹುಳುಗಳನ್ನು ಮೊದಮೊದಲು ತಲೆಯೊಳಗೆ ಸಾಕಷ್ಟು ಬಿಟ್ಟುಕೊಂಡಿದ್ದರೂ ದೇಹ ಹಾಗೂ ಮನಸ್ಸು ಮಾಗಿದಂತೆಲ್ಲಾ ಅಂತಹ ಘಟನೆಗಳನ್ನು ಸಹಜವೆಂಬಂತೆ ಸ್ವೀಕರಿಸಿ ಅವರ ಉದ್ದೇಶಗಳೂ ನಿಧಾನಕ್ಕೆ ಅರ್ಥವಾದ ಮೇಲೆ ಪ್ರಾಕ್ಟಿಕಲ್ ಆಗಿ ಬದುಕುವುದನ್ನು ಅನುಭವ ಎಂದೋ ಕಲಿಸಿತ್ತು. !

ಆದರೆ ಈ ಬಂದು ಹೋಗುವ ಪ್ರಕ್ರಿಯೆಯಲ್ಲಿ ಬಹುತೇಕರು ನನ್ನಿಂದ ಸಾಕಷ್ಟು ಪ್ರಯೋಜನಗಳನ್ನು ಪಡೆದುಕೊಂಡು ಆನಂತರ ಧಿಡೀರ್ ಎಂದು ದೂರ ಸರಿದರೂ ಅವರೆಲ್ಲಾ ನನಗೆ ಕಲಿಸಿ ಹೋದ ಜೀವನದ ಕಹಿಸತ್ಯದ ಪಾಠಗಳ ಸಿಲಬಸ್ ಮಾತ್ರ ಸಕತ್ತು ದೊಡ್ಡದೇ ಇದೆ. ! ಹೀಗಾಗಿ ನಾನು ಕಳೆದುಕೊಂಡ ಸಮಯ, ಹಣ, ಶ್ರಮ, ನಂಬಿಕೆ ಇತ್ಯಾದಿಗಳಿಗಿಂತ ಪಡೆದ ಅನುಭವಗಳ ಪಾಠಗಳ ಸಾರವೇ ಹೆಚ್ಚು !

ಇಷ್ಟಾದರೂ...ರಿಯಲೀ ನೋ ರಿಗ್ರೆಟ್ಸ್ ! ಏಕೆ ಗೊತ್ತಾ.... ನನ್ನಿಂದ ಯಾವುದೋ ಒಂದು ಹಂತದಲ್ಲಿ ನಾಲ್ಕು ಜನರಿಗೆ ಒಳ್ಳೆಯದನ್ನು ಮಾಡುವ ಅವಕಾಶ ಆ ದೇವರು ಕೊಟ್ಟನಲ್ಲ ಎಂಬ ಮೌಲಿಕ ತೃಪ್ತಿಯಿದೆಯಲ್ಲಾ....ಅದನ್ನು ಯಾರೂ ಕಸಿಯಲಾರರು.

ಆದರೆ ಅಂತಹ ಅನುಭವ ಪಾಠಗಳ ಆಧಾರದಲ್ಲಿ ಹೇಳುವುದಾದರೆ, ನಮ್ಮೊಂದಿಗೆ ಸದಾ ನೆರಳಂತೆ ನಿಲ್ಲುವವರು , ನಮ್ಮನ್ನು ಅರ್ಥ ಮಾಡಿಕೊಂಡಿರುವವರು, ನಮ್ಮ ಕಷ್ಟದ, ನೋವಿನ ಸಂಧರ್ಭಗಳಲ್ಲಿ ಭಾಗಿಯಾಗುವವರು, ಸಮಯ ಬಂದಾಗ ನಮ್ಮ ಸಂಕಟಗಳಿಗೆ ಸಾಂತ್ವನ ಹೇಳುವವರು, ಸಂದಿಗ್ಧದ ಸಮಯದಲ್ಲಿ ನಮ್ಮ ಹೆಗಲಿಗೆ ಹೆಗಲು ಕೊಟ್ಟು ಜೊತೆಯಾಗಿ ಹೆಜ್ಜೆ ಹಾಕುವವರು, ಎಲ್ಲಕ್ಕಿಂತ ಮುಖ್ಯವಾಗಿ ಎಂತಹದೇ ಸನ್ನಿವೇಶದಲ್ಲೂ ನಮ್ಮ ಅಂತರಂಗವನ್ನು ಪ್ರಾಮಾಣಿಕವಾಗಿ ಅರಿತವರು ಪೂರ್ತಿಯಾಗಿ ಇರೋದಕ್ಕೆ ಛಾನ್ಸೇ ಇಲ್ಲ. ಒಂದೊಮ್ಮೆ ಈ ವಿಚಾರದಲ್ಲಿ ಕೆಲ ಅದೃಷ್ಟವಂತರಿದ್ದರೂ ಅಂಥವರ ಸಂಖ್ಯೆ ಜಸ್ಟ್ ಬೆರಳೆಣಿಕೆಯಷ್ಟು ಮಾತ್ರ.

ಹೀಗಾಗಿ ನಮ್ಮ ಬದುಕಿನ ಹೆಜ್ಜೆಗಳಲ್ಲಿ ಕೇವಲ ಯಾವುದೋ ಒಂದು ಪ್ರಯೋಜನದ ಉದ್ದೇಶವನ್ನಿಟ್ಟುಕೊಂಡೇ ಬರುವ ಸಾಲು ಸಾಲು ಜೊಳ್ಳು ಪೊಳ್ಳುಗಳು ನಿಂತಲ್ಲಿ ನಿಲ್ಲಲಾರದೇ ತರಗಲೆಗಳಂತೆ ಹೇಳದೇ ಕೇಳದೇ ಉದುರಿ ಚದುರಿ ಬಿಡುತ್ತವೆ. ಆದರೆ ನಮ್ಮ ಒಟ್ಟಾರೆ ವ್ಯಕ್ತಿತ್ವವನ್ನು ಸಿರ್ಫ್ ಅಂತರಂಗದ ಕಣ್ಣುಗಳಿಂದ ಅರ್ಥೈಸಿಕೊಳ್ಳಬಲ್ಲವಂಥವು ಮಾತ್ರವೇ ದೀರ್ಘಕಾಲ ಗಟ್ಟಿಯಾಗಿರಬಲ್ಲವು , ನಮ್ಮ ಕೊನೆಯ ಉಸಿರಿನವರೆಗೂ ನಮ್ಮನ್ನು ಅರ್ಥಮಾಡಿಕೊಂಡೇ ನಮ್ಮೊಂದಿಗೆ ಹೆಜ್ಜೆ ಹಾಕಬಲ್ಲವು.

ಹಾಗೆ ಬಂದು ಹೀಗೆ ಹೋಗುವ ಸ್ನೇಹವೆಂಬ ಹೆಸರಿನ ಸಾವಿರ ಸಾವಿರ ತರಗಲೆಗಳಿಗೆ ಅವು ಬಂದರೂ ಹೋದರೂ ತಲೆಕೆಡಿಸಿಕೊಳ್ಳದೇ ಸ್ಥಿತಪ್ರಜ್ಞರಾಗಿ ನಮ್ಮ ನಮ್ಮ ವ್ಯಕ್ತಿತ್ವದ ಕೆಮಿಸ್ಟ್ರಿಗಳಿಗೆ ಮ್ಯಾಚ್ ಆಗುವ ಕೆಲವರ ಸ್ನೇಹಬಂಧನವನ್ನಷ್ಟೇ ಆಪ್ಯಾಯತೆಯಿಂದ ಅಪ್ಪಿಕೊಂಡು ಮಿಕ್ಕಿದ್ದನ್ನು ಮೈಗೂ ಮನಸ್ಸಿಗೂ ಅಂಟಿಸಿಕೊಳ್ಳದೇ ಜೀವನಪಯಣದಲ್ಲಿ ಖುಷಿಯಿಂದ ಮುಂದೆ ಸಾಗುವುದರಲ್ಲಿ ನಮ್ಮ ಮಿನಿಮಮ್ ಪ್ರಬುದ್ಧತೆ ಇರಬಹುದು.

ಬಹುಶಃ ಇಂತಹ ಪ್ರಬುದ್ಧತೆಯೆಂಬುದು ನಮಗಾದ ಕೆಟ್ಟ ಅನುಭವಗಳಿಂದ ಪಾಠ ಕಲಿತನಂತರವಷ್ಟೇ ಬರಬಹುದೇನೋ... !

**ದಿಸ್ ಈಸ್ ಸೋ....ಕಾಸ್ಟ್ಲೀ ಯಾ.....!!**

**ಮರೆಯುವ ಮುನ್ನ:** ಒಂದಷ್ಟು ದಿನ ನಮ್ಮ ಜೊತೆಗೆ ಬಿಗಿಯಾಗಿ ಅಂಟಿಕೊಂಡು ನಮ್ಮೊಡನೆಯೇ ಹೆಜ್ಜೆ ಹಾಕುತ್ತಿದ್ದ ಸ್ನೇಹಿತರು , ಪರಿಚಿತರು , ಸಹೋದ್ಯೋಗಿಗಳು , ಬಂಧುಗಳು.....ಈಗ ನಮ್ಮೊಂದಿಗೆ ಮೊದಲಿನಂತೆ ಬರುತ್ತಿಲ್ಲ ಅಂದ್ರೆ ಅರ್ಥ, ಅವರಿಗೆ ನಮ್ಮ ಅವಶ್ಯಕತೆ ಮುಗಿದಿರಬೇಕು, ಅವರು ನಮ್ಮೊಡನೆ ಹೆಜ್ಜೆ ಹಾಕುತ್ತಿದ್ದ ಉದ್ದೇಶ ಈಡೇರಿರಬೇಕು ಅಥವಾ ಅವರ ಮಹತ್ವಾಕಾಂಕ್ಷೆಯನ್ನು ತಲುಪಬಲ್ಲ ಮತ್ತಾವುದೋ ಸಂಪನ್ಮೂಲದ ಬೇರು ಅವರ ಕೈಗೆ ತಾಕಿರಬೇಕು. !

ಲೈಫ್ ಈಸ್ ಸೋ......ಇಂಟರೆಸ್ಟಿಂಗ್ ಅಲ್ವಾ..?



Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from Mihir Akash K.R, #78, Daya Marga Near Geetha School, Siddartha Nagar Mysore-570011, Editor K.N Ravi,